ಕನ್ನಡ ದಿನಪತ್ರಿಕೆ
09 ಎಪ್ರಿಲ್ । ಮಂಗಳವಾರ
09 APRIL 2024

# ಬೆಳಗಾವಿ ವರದಿ

ಪ್ರಧಾನ ಸಂಪಾದಕ : ಸತೀಶ ಬ ಗುಡಗೆನಟ್ಟಿ
BELAGAVI VARADI KANNADA DAILY NEWS PAPER
ಗಡಿ ಜಿಲ್ಲೆಯ ಧ್ವನಿ...

₹4 | ಸಂಪುಟ – 5 ಸಂಚಿಕೆ – 44 ಪುಟ – 4 | RNI.KARKAN/2020/79084 | ADVRT EMAIL. BELAGAVIVARADIEDITOR@GMAIL.COM | NEWSBELAGAVI@GMAIL.COM | 9900332089 | REG.NO G-2/PMG/KA/NK/BM/139/2024-26

## ಪ್ರಧಾನಿ ಮೋದಿಯವರಿಂದಾಗಿ ಭಾರತಕ್ಕೆ ವಿಶ್ವ ಮನ್ನಣೆ: ಜಗದೀಶ ಶೆಟ್ಟರ್

ನಾಗನೂರ ಪಟ್ಟಣದಲ್ಲಿ ಅರಭಾವಿ ಮತಕ್ಷೇತ್ರದ ಬೂತ್ ಮಟ್ಟದ ಕಾರ್ಯಕರ್ತರ ಸಮಾವೇಶ

ಮೂಡಲಗಿ: ವಿಶ್ವನಾಯಕನಾಗಿರುವ ಪ್ರಧಾನಿ ನರೇಂದ್ರ ಮೋದಿಯವರ ದೂರದೃಷ್ಟಿ ಆಡಳಿತದಿಂದ ಭಾರತವು ಪ್ರಪಂಚದಲ್ಲಿಯೇ ಬಲಾಢ್ಯ ರಾಷ್ಟ್ರವಾಗುತ್ತಿದ್ದು, ಕ್ಷಿಪ್ರಗತಿಯಲ್ಲಿ ಸಾಗುತ್ತಿರುವ ಭಾರತ ದೇಶದ ಜನಪ್ರೀಯತೆಯನ್ನು ಕುಗ್ಗಿಸಲು ಕೆಲ ವಿರೋಧಿ ರಾಷ್ಟ್ರಗಳು ಕುತಂತ್ರ ನಡೆಸುತ್ತಿದ್ದು, ನರೇಂದ್ರ ಮೋದಿಯವರನ್ನು ಸೋಲಿಸಲು ಚೀನಾ ಸೇರಿದಂತೆ ಕೆಲ ವಿರೋಧಿ ರಾಷ್ಟ್ರಗಳು ಪಿತೂರಿ ನಡೆಸುತ್ತಿವೆ ಎಂದು ಬೆಳಗಾವಿ ಲೋಕಸಭಾ ಕ್ಷೇತ್ರದ ಎನ್ಡಿಎ ಅಭ್ಯರ್ಥಿ ಜಗದೀಶ ಶೆಟ್ಟರ್ ಆರೋಪಿಸಿದರು.

ತಾಲೂಕಿನ ನಾಗನೂರ ಪಟ್ಟಣದ ಹೊರವಲಯದಲ್ಲಿರುವ ಮಹಾಲಿಂಗೇಶ್ವರ ಬಸವತೀರ್ಥ ಮಠದ ಆವರಣದಲ್ಲಿ ರವಿವಾರ ಸಂಜೆ ಜರುಗಿದ ಅರಭಾವಿ ವಿಧಾನಸಭಾ ಮತಕ್ಷೇತ್ರದ ಬೂತ್ಮಟ್ಟದ ಕಾರ್ಯಕರ್ತರ ಸಮಾವೇಶವನ್ನುದ್ದೇಶಿಸಿ ಮಾತನಾಡಿದ ಅವರು, ನಮ್ಮ ನೆರೆ–



ಹೊರೆಯ ಶತ್ರು ರಾಷ್ಟ್ರಗಳು ಮೋದಿಯವರ ವಿರುದ್ಧ ಎಷ್ಟೇ ತಂತ್ರ, ಪಿತೂರಿ ನಡೆಸಿದರೂ ಸತತ 3ನೇ ಬಾರಿಗೆ ಈ ರಾಷ್ಟ್ರದ ಪ್ರಧಾನಿಯಾಗಿ ಮತ್ತೊಮ್ಮೆ ಆಡಳಿತ ನಡೆಸಲಿದ್ದಾರೆಂದು ವಿಶ್ವಾಸ ವ್ಯಕ್ತಪಡಿಸಿದರು.

ಭಾರತವು ಆರ್ಥಿಕ ಪ್ರಗತಿಯಲ್ಲಿ 4ನೇ ಸ್ಥಾನವನ್ನು ಅಲಂಕರಿಸಿದ್ದು, ಮುಂದಿನ ಕೆಲವೇ ವರ್ಷಗಳಲ್ಲಿ ಆರ್ಥಿಕ ಪ್ರಗತಿಯಲ್ಲಿ ನಂ 1 ಸ್ಥಾನ ಗಳಿಸಲಿದೆ.

ಪ್ರಧಾನಿಯವರ ಜನಪ್ರಿಯತೆಯನ್ನು ಕುಗ್ಗಿಸಲು ವಿರೋಧಿ ದೇಶಗಳು ಇನ್ನಿಲ್ಲದ ಕಸರತ್ತು ಮಾಡುತ್ತಿವೆ.

ಆದರೆ ನಮ್ಮ ದೇಶದ ಜನ ಪ್ರಜ್ಞಾವಂತರಾಗಿದ್ದು, ಇಡೀ ದೇಶವೇ ಮೋದಿಯವರ ಬೆನ್ನಿಗಿದೆ. ಹೀಗಾಗಿ ಈ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ ಮತ್ತು ಮಿತ್ರ ಪಕ್ಷಗಳು ಒಟ್ಟಾರೆ 400ಕ್ಕೂ ಅಧಿಕ ಸ್ಥಾನಗಳನ್ನು ಗಳಿಸಲಿವೆ.

ಕಾಂಗ್ರೆಸ್ ಪಕ್ಷ ದಿವಾಳಿಯತ್ತ ಸಾಗುತ್ತಿದ್ದು, 30 ರಿಂದ 35 ಸ್ಥಾನಗಳನ್ನು ಮಾತ್ರ ಪಡೆಯಲಿದ್ದು, ವಿರೋಧ ಪಕ್ಷವಾಗಲು ಸಹ ಅದು ತನ್ನ ಅರ್ಹತೆಯನ್ನು ಮತ್ತೊಮ್ಮೆ ಕಳೆದುಕೊಳ್ಳಲಿದೆ ಎಂದು ಹೇಳಿದರು.

ಬೆಳಗಾವಿ ಅಭಿವೃದ್ಧಿಯಲ್ಲಿ ನಾನು ಕೂಡಾ ಸಾಕಷ್ಟು ಕೊಡುಗೆಯನ್ನು ನೀಡಿದ್ದೇನೆ. ವಿಧಾನಸಭಾ ಅಧ್ಯಕ್ಷನಿದ್ದಾಗ ಸುವರ್ಣ ಸೌಧ ನಿರ್ಮಾಣ–ಕ್ಕೆ ಗುದ್ದಲಿ ಪೂಜೆ ನಡೆಸಿದ್ದು, ಮುಂದೆ ಮುಖ್ಯಮಂತ್ರಿಯಾಗಿದ್ದಾಗ ಇದನ್ನು ಉದ್ಘಾಟಿಸುವ ಭಾಗ್ಯ ನನ್ನದಾಗಿ–ತ್ತು. ಸುಮಾರು 3 ದಶಕಗಳಿಂದ ಬೆಳಗಾವಿ ಭಾಗದ ಜನರೊಂದಿಗೆ ನಿಕಟ ಭಾಂದವ್ಯವನ್ನು ಇಟ್ಟುಕೊಂಡಿದ್ದೇನೆ. 2ಬಾರಿ ಜಿಲ್ಲಾ ಉಸ್ತುವಾರಿ ಮಂತ್ರಿಯಾಗಿ ಕೆಲಸ ಮಾಡಿದ್ದೇನೆ.

ಬೆಳಗಾವಿ ನನ್ನ ಕರ್ಮಭೂಮಿ, ನನ್ನನ್ನು ಸಂಸತ್ ಚುನಾವಣೆಯಲ್ಲಿ ಆಯ್ಕೆ ಮಾಡಿ ಕಳುಹಿಸಿದರೇ ಬೆಳಗಾವಿ ಸಮಗ್ರ ಅಭಿವೃದ್ಧಿಗೆ ಶ್ರಮಿಸುತ್ತೇನೆ. ಈ ಲೋಕಸಭಾ ಕ್ಷೇತ್ರವು ಬಿಜೆಪಿಯ ಭದ್ರಕೋಟೆಯಾಗಿದ್ದು, ದಿ.ಸುರೇಶ ಅಂಗಡಿ ಅವರ ಮಾದರಿಯಲ್ಲಿ ಕೇಂದ್ರ ಸರ್ಕಾರದ ಯೋಜನೆಗಳನ್ನು ಜಾರಿಗೊಳಿಸಲು ಪ್ರಾಮಾಣಿಕವಾಗಿ ಪ್ರಯತ್ನಿಸುತ್ತೇನೆ ಎಂದು ಅವರು ತಿಳಿಸಿದರು.

ಇದರಿಂದ ನಮ್ಮ ಜಿಲ್ಲೆಯು ಮತ್ತಷ್ಟು ಪ್ರಗತಿ ಕಾಣಲಿದೆ. ಶೆಟ್ಟರ್ ಅವರನ್ನು ವಿರೋಧಿಗಳು ಟೀಕಿಸಿದರೇ ತಕ್ಷಣವೇ ಅಂತವರಿಗೆ ಪ್ರತ್ಯುತ್ತರ ನೀಡುವಂತೆ ಕಾರ್ಯಕರ್ತರಿಗೆ ಕರೆ ನೀಡಿದ ಅವರು ಕಳೆದ ಬಾರಿ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿಗೆ ಅರಭಾವಿಯಿಂದ 55ಸಾವಿರ ಮತ್ತು ಗೋಕಾಕದಿಂದ 58ಸಾವಿರ ಮತಗಳ ಮುನ್ನಡೆ ನೀಡಲಾಗಿದ್ದು, ಮೇ–7ರಂದು ಜರುಗುವ ಚುನಾವಣೆಯಲ್ಲಿ ಇವುಗಳನ್ನೇ ದ್ವಿಗುಣ ಮತಗಳ ಲೀಡ್ ನೀಡುವಂತೆ ಶಾಸಕ ಬಾಲಚಂದ್ರ ಜಾರಕಿಹೊಳಿ ಅವರು ಮತದಾರರಲ್ಲಿ ಕೋರಿಕೊಂಡರು.

ವೇದಿಕೆಯಲ್ಲಿ ಹಾಲಿ ಸಂಸದೆ ಮಂಗಲ ಅಂಗಡಿ, ಬಿಜೆಪಿ ರಾಜ್ಯ ಉಪಾಧ್ಯಕ್ಷ ಅನಿಲ ಬೆನಕೆ, ಮಾಜಿ ಶಾಸಕ ಸಂಜಯ ಪಾಟೀಲ, ಹಿರಿಯ ಸಹಕಾರಿಗಳಾದ ಬಿ.ಆರ್.ಪಾಟೀಲ(ನಾಗನೂರ), ಬಸಗೌಡ ಪಾಟೀಲ, ಯುವ ಧುರೀಣ ಸರ್ವೋತ್ತಮ ಜಾರಕಿಹೊಳಿ, ಬಿಜೆಪಿ ಜಿಲ್ಲಾಧ್ಯಕ್ಷ ಸುಭಾಶ ಪಾಟೀಲ, ಜೆಡಿಎಸ್ ಜಿಲ್ಲಾಧ್ಯಕ್ಷ ಶಂಕರ ಮಾಡಲಗಿ, ನ್ಯಾಯವಾದಿ ಎಮ್.ಬಿ.ಜಿ–ರಲಿ, ಲಕ್ಷ್ಮಣ ತಪಸಿ, ಅರಭಾವಿ ಮಂಡಲ ಬಿಜೆಪಿ ಅಧ್ಯಕ್ಷ ಮಹಾದೇವ ಶೆಕ್ಕಿ, ಜೆಡಿ–ಎಸ್ ಬ್ಲಾಕ್ ಅಧ್ಯಕ್ಷ ಪ್ರಕಾಶ ಕಾಳಶೆಟ್ಟಿ, ಜಿಲ್ಲಾ ಉಪಾಧ್ಯಕ್ಷ ಮುತ್ತೆಪ್ಪ ಮನ್ನಾಪೂರ, ಜಿಲ್ಲಾ ಕಾರ್ಯದರ್ಶಿ ಇಂದಿರಾ ಅಂತರಗಟ್ಟಿ, ಚುನಾವಣೆ ಸಂಚಾಲಕ ಗೋವಿಂದ ಕೊಪ್ಪದ, ಪ್ರಭಾರಿ ವಿಜಯ ಗುಡದಾರಿ ಸೇರಿದಂತೆ ಬಿಜೆಪಿ–ಜೆಡಿ–ಎಸ್ ಅನೇಕ ಮುಖಂಡರು, ಅರಭಾವಿ ಕ್ಷೇತ್ರದ ಹಲವಾರು ಧುರೀಣರು, ವಿವಿಧ ಸಮಾಜಗಳ ಮುಖಂಡರು ಉಪಸ್ಥಿತ–ರಿದ್ದರು.



## ದಾಖಲೆ ಇಲ್ಲದ 5.60 ಕೋಟಿ ರೂ. ಹಣ, 3 ಕೆಜಿ ಚಿನ್ನ, 103 ಕೆಜಿ ಬೆಳ್ಳಿ ಜಪ್ತಿ

ಬಳ್ಳಾರಿ: ಇಲ್ಲಿನ ಬ್ರೂಸ್ ಪೇಟೆ ಪೊಲೀಸರು ನಡೆಸಿದ ಭರ್ಜರಿ ಕಾರ್ಯಾಚರಣೆಯಲ್ಲಿ ದಾಖಲೆ ಇಲ್ಲದ 5.60 ಕೋಟಿ ರೂ. ನಗದು ಮತ್ತು ಅಪಾರ ಪ್ರಮಾಣದ ಚಿನ್ನ, ಬೆಳ್ಳಿ ಆಭರಣಗಳನ್ನ ಜಪ್ತಿ ಮಾಡಲಾಗಿದೆ.

ಬಳ್ಳಾರಿಯ ಬ್ರೂಸ್ ಪೇಟೆ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದ್ದು, ಕಂಬಳಿ ಬಜಾರ್‌ನಲ್ಲಿರುವ ಹೇಮಾ ಜ್ಯೂವೆಲರಿ ಶಾಪ್ ಮಾಲೀಕರ ಮನೆಯಲ್ಲಿ ಹಣ, ಆಭರಣಗಳನ್ನು ಜಪ್ತಿ ಮಾಡಲಾಗಿದೆ.

ಒಟ್ಟು 5.60 ಕೋಟಿ ರೂ. ನಗದು, 3 ಕೆಜಿ ಬಂಗಾರ 103 ಕೆಜಿ ಬೆಳ್ಳಿ ಆಭರಣ, 21 ಕೆಜಿ ಕಚ್ಚಾ ಬೆಳ್ಳಿಯನ್ನು ಪೊಲೀಸರು ಜಪ್ತಿ ಮಾಡಿದ್ದಾರೆ. ಜಪ್ತಿ ಮಾಡಿದ ನಗದು ಹವಾಲಾಕ್ಕೆ ಸಂಬಂಧಿಸಿದ ಹಣ ಎನ್ನಲಾಗಿದೆ. ಪ್ರಕರಣ ಸಂಬಂಧ ಆರೋಪಿ ನರೇಶ್ ಎಂಬಾತನನ್ನ ವಶಕ್ಕೆ ಪಡೆದು ಪೊಲೀಸರು ವಿಚಾರಣೆ ನಡೆಸುತ್ತಿದ್ದಾರೆ.

## ಶೋಭಾ ಕರಂದ್ಲಾಜೆ ಕಾರಿಗೆ ಬೈಕ್ ಡಿಕ್ಕಿ; ಬೈಕ್ ಸವಾರ ಸಾವು



ಬೆಂಗಳೂರು: ಬೆಂಗಳೂರು ಉತ್ತರ ಕ್ಷೇತ್ರದ ಲೋಕಸಭಾ ಅಭ್ಯರ್ಥಿ ಶೋಭಾ ಕರಂದ್ಲಾಜೆ ಅವರ ಕಾ–ರಿಗೆ ಬೈಕ್ ಡಿಕ್ಕಿಯಾದ ಪರಿಣಾಮ ಸವಾರ ಮೃತಪಟ್ಟ ಘಟನೆ ಶನಿವಾರ ನಡೆದಿದೆ.

ಕೆಆರ್ ಪುರದ ಗಣೇಶ ದೇವಸ್ಥಾನದ ಬಳಿ ಈ ಘಟನೆ ನಡೆದಿದೆ. ಮೃತನನ್ನು ಪ್ರಕಾಶ್ (35) ಎಂದು ಗುರುತಿಸಲಾಗಿದೆ. ಇವರು ಕೆಆರ್ ಪುರ ನಿವಾಸಿ.

ನಡೆದಿದ್ದೇನು..?: ನಿಂತಿದ್ದ ಶೋಭಾ ಕರಂದ್ಲಾಜೆ ಅವರ ಕಾರಿನ ಡೋರ್ ಓಪನ್ ಮಾಡುತ್ತಿದ್ದಾಗ ಬೈಕ್ ಏಕಾಏಕಿ ಹಿಂಬದಿಯಿಂದ ಬಂದು ಡಿಕ್ಕಿ ಹೊಡೆದಿದೆ. ಪರಿಣಾಮ ಸವಾರ ಗಂಭೀರ ಗಾಯಗೊಂಡಿದ್ದಾರೆ. ಕೂಡಲೇ ಅವರನ್ನು ಕೆಆರ್ ಪುರ ಸಾರ್ವಜನಿಕ ಆಸ್ಪತ್ರೆಯಲ್ಲಿ ದಾಖಲು ಮಾಡಲಾಯಿತು. ಆದ–ರೆ ಚಿಕಿತ್ಸೆ ಫಲಕಾರಿಯಾಗದೆ ಪ್ರಕಾಶ್ ಆಸ್ಪತ್ರೆಯಲ್ಲಿಯೇ ಕೊನೆಯುಸಿರೆಳೆದರು.

## ಖಾಸಗಿ ಹೋಟೆಲ್‌ನ 19ನೇ ಫ್ಲೋರ್‌ನಿಂದ ಬಿದ್ದು ಯುವಕ ಆತ್ಮಹತ್ಯೆ

ಬೆಂಗಳೂರು: ಖಾಸಗಿ ಹೋಟೆಲ್‌ನ 19ನೇ ಫ್ಲೋ–ರ್‌ನಿಂದ ಬಿದ್ದು ವ್ಯಕ್ತಿ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಬೆಂಗಳೂರಿನಲ್ಲಿ ನಡೆದಿದೆ.

ಮಾದವ ನಗರದಲ್ಲಿರುವ ಖಾಸಗಿ ಹೋಟೆಲ್‌ವೊಂದರಲ್ಲಿ ಘಟನೆ ನಡೆದಿದೆ. ಆತ್ಮಹತ್ಯೆ ಮಾಡಿಕೊಂಡ ವ್ಯಕ್ತಿ ಹೋಟೆಲ್‌ನಲ್ಲಿ ತಂಗಿದ್ದನಾ ಅಥವಾ ಹೋಟೆಲ್‌ನಲ್ಲಿ ಕೆಲಸ ಮಾಡುತ್ತಿದ್ದ ಸಿಬ್ಬಂದಿಯಾ ಎಂಬ ಕುರಿತು ತನಿಖೆ ನಡೆಯುತ್ತಿದೆ.

ಘಟನಾ ಸ್ಥಳಕ್ಕೆ ಹೈಗ್ರೌಂಡ್ಸ್ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸುತ್ತಿದ್ದಾರೆ. ಆತ್ಮಹತ್ಯೆ ಮಾಡಿಕೊಂಡ ವ್ಯಕ್ತಿ ಯಾರು ಎಂಬುದನ್ನು ಪತ್ತೆಹಚ್ಚುವ ಸಲುವಾಗಿ ತನಿಖೆ ಮುಂದುವರಿಸಲಾಗಿದೆ.

## 9 ಸಾವಿರ ಲಂಚಕ್ಕೆ ಬೇಡಿಕೆ; ಲೋಕಾಯುಕ್ತ ಬಲಗೆ ಬಿದ್ದ ಕಾರ್ಮಿಕ ಇಲಾಖೆ ಇನ್ಸ್‌ಪೆಕ್ಟರ್




ಬೆಂಗಳೂರು: 9 ಸಾವಿರ ರೂ. ಲಂಚ ಪಡೆಯುತ್ತಿದ್ದ ವೇಳೆ ಕಾರ್ಮಿಕ ಇಲಾಖೆ ಇನ್ಸ್ಪೆಕ್ಟರ್ ರೆಡ್‌ಹ್ಯಾಂಡಾಗಿ ಲೋಕಾಯುಕ್ತ ಪೊಲೀಸರ ಬಲೆಗೆ ಬಿದ್ದಿರುವ ಘಟನೆ ಬೆಂಗಳೂರಿನಲ್ಲಿ ನಡೆದಿದೆ.

ಹೋಟೆಲ್‌ವೊಂದರ ಪರವಾನಗಿ ಕೊಡಲು ಕಾರ್ಮಿಕ ಇಲಾಖೆ ಇನ್ಸ್ಪೆಕ್ಟರ್ ಭೋಪಾಲ್ 9 ಸಾವಿರ ರೂ. ಲಂಚಕ್ಕೆ ಬೇಡಿಕೆಯಿಟ್ಟಿದ್ದ.

ಈ ಬಗ್ಗೆ ಮಂಗಳೂರು ಮೂಲದ ಹೋಟೆಲ್ ಮಾಲೀಕ ದೀಕ್ಷಿತ್ ಅವರು ನೀಡಿದ ದೂರಿನ ಮೇರೆಗೆ ಲೋಕಾಯುಕ್ತ ಪೊಲೀಸರು ದಾಳಿ ನಡೆಸಿದ್ದರು.

ಲಂಚ ಪಡೆಯುತ್ತಿದ್ದಾಗಲೇ ಕಾರ್ಮಿಕ ಭವನದಲ್ಲೇ ಲೋಕಾಯುಕ್ತ ಪೊಲೀಸರಿಗೆ ಸಿಕ್ಕಿಬಿದ್ದಿದ್ದಾರೆ. ಈ ಸಂಬಂಧ ತನಿಖೆ ಮುಂದುವರಿದಿದೆ.

## ಕಾರಿಗೆ ಬೆಂಕಿ; ಸಂಪೂರ್ಣ ಭಸ್ಮ



ಬೆಳಗಾವಿ: ಬೆಳಗಾವಿಯಿಂದ ದಾಂಡೇಲಿಗೆ ಹೋಗುತ್ತಿದ್ದ ಬೆಳಗಾವಿ ಮೂಲದ ಮೂವರು ಪ್ರಯಾಣಿಕರನ್ನೊಳಗೊಂಡ ಕಾರೊಂದು ದಾಂಡೇಲಿ ತಾಲೂಕಿನ ನಾನಾಕೇಸರೋಡ ಎಂಬಲ್ಲಿ ಆಕಸ್ಮಿಕ ಅಗ್ನಿ ಅವಘಡಕ್ಕೊಳಗಾಗಿ ಸುಟ್ಟುಹೋದ ಘಟನೆ ಸೋಮವಾರ ಮಧ್ಯಾಹ್ನ ನಡೆದಿದೆ.

## ಹೆಣ್ಣು ಕುಲಕ್ಕೆ ನೋವು ಕೊಟ್ಟರೆ ಉದ್ಧಾರ ಆದ ಇತಿಹಾಸವಿಲ್ಲ: ಜಗ್ಗೇಶ್



ಬೆಂಗಳೂರು: ಅಶ್ವಿನಿ ಪುನೀತ್ ರಾಜ್‌ಕುಮಾರ್ ವಿರುದ್ಧ ಅವಹೇಳನಕಾರಿ ಪೋಸ್ಟ್ ಮಾಡಿದವರ ವಿರುದ್ಧ ಸೈಬರ್ ಕ್ರೈಂ ಪೊಲೀಸ್ ಠಾಣೆಯಲ್ಲಿ ಎಫ್ಐಆರ್ ದಾಖಲಿಸಲಾಗಿದೆ.

ಅನೇಕ ನಟ ನಟಿಯರು ನಿಂದಿಸಿದವರನ್ನು ತರಾಟೆಗೆ ತೆಗೆದುಕೊಂಡಿದ್ದಾರೆ. ಇದೀಗ ನವರಸನಾಯಕ ಜಗ್ಗೇಶ್ ಸಾಮಾಜಿಕ ಜಾಲತಾಣದಲ್ಲಿ ಹೆಣ್ಣುಕುಲ್ಲಕ್ಕೆ ಅಗೌರವ ತೋರಿಸಿದರೆ ಉದ್ಧಾರ ಆಗ್ತಾರಾ ಎಂದು ಹಿಡಿಶಾಪ ಹಾಕಿದ್ದಾರೆ.

ಪುನೀತನ ಮಡದಿ ಅಣಕಿಸಿದ ನತದೃಷ್ಟರೆ ನಿಮಗೂ ತಾಯಿ ಇರಬೇಕು. ತಾಯಿ ಬೆಲೆ ಗೊತ್ತಿರಬೇಕು. ಒಂದು ವೇಳೆ, ತಾಯಿ ಮತ್ತು ಹೆಣ್ಣಿಗೆ ಗೌರವ ಕೊಡಲ್ಲ ಎಂದರೆ ಖಂಡಿತಾ ಅಂಥವರು ಮನುಕುಲಕ್ಕೆ ಅನರ್ಹ. ಪುನೀತನ ಮಡದಿ ಅನಾಥಳಲ್ಲ ತನ್ನ ಪ್ರೀತಿಸುತ್ತಿದ್ದ ಕೋಟ್ಯಾಂತರ ಅಭಿಮಾನಿಗಳ ಬಳುವಳಿ ಕೊಟ್ಟು ಹೋಗಿದ್ದಾನೆ ಎಂದು ಜಗ್ಗೇಶ್ ಅಪ್ಪು ಅಭಿಮಾನಿಗಳ ಕಡೆ ತೋರಿಸಿದ್ದಾರೆ. ಹೆಣ್ಣು ಕುಲಕ್ಕೆ ನೋವು ಕೊಟ್ಟವ ಉದ್ಧಾರ ಆದ ಇತಿಹಾಸವಿಲ್ಲ ಎಂದು ಜಗ್ಗೇಶ್ ಅಶ್ವಿನಿ ಪರ ಸಾಮಾಜಿಕ ಜಾಲತಾಣದಲ್ಲಿ ಬರೆದುಕೊಂಡಿದ್ದಾರೆ.

ಪುನೀತನ ಮಡದಿ ಅಣಕಿಸಿದ ನತದೃಷ್ಟರೆ ನಿಮಗು ತಾಯಿ ಇರಬೇಕು ಹಾಗು ತಾಯಿಬೆಲೆ ಗೊತ್ತಿರಬೇಕು..ಒಂದುವೇಳೆ ತಾಯಿ ಹೆಣ್ಣು ಗೌರವ ಇಲ್ಲ ಎಂದರೆ ಕಂಡಿತ ಅಂಥವರು ಮನುಗುಲಕ್ಕೆ ಅನರ್ಹ! ಪುನೀತನ ಮಡದಿ ಅನಾಥಳಲ್ಲಾ ತನ್ನಪ್ರೀತಿಸುತ್ತಿದ್ದ ಕೋಟ್ಯಾಂತರ ಅಭಿಮಾನಿಗಳ ಬಳುವಳಿ ಕೊಟ್ಟು ಹೋಗಿದ್ದಾನೆ.ಹೆಣ್ಣುಕುಲಕ್ಕೆ ನೋವುಕೊಟ್ಟವ ಉದ್ದಾರ ಆದಾಗ ಇತಿಹಾಸವಿಲ್ಲಾ! ಅಶ್ವಿನಿ ಪುನೀತ್ ರಾಜ್‌ಕುಮಾರ್ ಬಗ್ಗೆ ಬರೆದ ಕೀಳು ಮಟ್ಟದ ಪೋಸ್ಟ್‌ಗೆ ಸಾಮಾಜಿಕ ಜಾಲತಾಣದಲ್ಲಿ ತೀವ್ರ ವಿರೋಧ ವ್ಯಕ್ತವಾಗಿದೆ. ಅದರಲ್ಲೂ ಪುನೀತ್ ರಾಜ್‌ಕುಮಾರ್ ಅಭಿಮಾನಿಗಳು ಆಕ್ರೋಶ ವ್ಯಕ್ತಪಡಿಸಿದ್ದಾರೆ.

## ರಾಜ್ಯ ಚುನಾವಣಾ ಅಖಾಡಕ್ಕೆ ಮೋದಿ ಎಂಟ್ರಿ: ಬೃಹತ್ ರೋಡ್ ಶೋ ಆಯೋಜನೆ

ರಾಜ್ಯದಲ್ಲಿ ಲೋಕಸಭಾ ಚುನಾವಣೆಯ ಅಖಾಡ ರಂಗೇರಿದು, ಕೆಲದಿನಗಳ ಹಿಂದೆ ಬಿಜೆಪಿ ಚಾಣಕ್ಯ ಅಮೀತ್ ಶಾ ಅವರು ರಾಜ್ಯಕ್ಕೆ ಆಗಮಿಸಿ ಸಮಾವೇಶ ಮಾಡಿದರು ಅದರ ಬೆನ್ನಲ್ಲೆ ಈ ಪ್ರಧಾನಿ ನರೇಂದ್ರ ಮೋದಿ ಅವರು ರಾಜ್ಯದ ಚುನಾವಣಾ ಅಖಾಡಕ್ಕೆ ದುಮುಕಿದ್ದಾರೆ.

ಏ.14 ಕ್ಕೆ ರಾಜ್ಯಕ್ಕೆ ಭೇಟಿ ನೀಡಲಿರುವ ಮೋದಿಯವರು ಬೃಹತ್ ರೋಡ್ ಶೋ ಹಾಗೂ ಬೃಹತ ಸಮಾವೇಶ ನಡೆಸಲಿದ್ದಾರೆ. ಏ.14 ರಂದು ದಕ್ಷಿಣ ಕನ್ನಡ ಲೋಕಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಸಮಾವೇಶ ನಡೆಯಲಿದೆ.

ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ವ್ಯಾಪ್ತಿಯ ದೇವನಹಳ್ಳಿಯಲ್ಲಿ ಏ.14 ಕ್ಕೆ ಸಮಾವೇಶ ನಿಗದಿಯಾಗಿತ್ತು. ಇದೀಗ ಸಮಾವೇಶ ಮಂಗಳೂರಿಗೆ ಶಿಪ್ಟ್ ಮಾಡಲಾಗಿದೆ.



ಏ.14 ರಂದು ಮಂಗಳೂರಿನಲ್ಲಿ ಚುನಾವಣಾ ಪ್ರಚಾರ ಸಮಾವೇಶದಲ್ಲಿ ಭಾಗವಹಿಸಿದ ನಂತರ ಪ್ರಧಾನಿ ಮೋದಿ ಸಂಜೆ ಬೆಂಗಳೂ–ರಿನ ಹೆಬ್ಬಾಳ–ಬ್ಯಾಟರಾಯನಪುರದಲ್ಲಿ ರೋಡ್ ಶೋ ನಡೆಸಲಿದ್ದಾರೆ. ಚಿಕ್ಕಬಳ್ಳಾಪುರ ಬಿಜೆಪಿ ಅಭ್ಯರ್ಥಿ ಡಾ. ಕೆ ಸುಧಾಕರ್ ಪರ ಬೃಹತ್ ಸಮಾವೇಶದ ಬಳಿಕ ಸಂಜೆ ಶೋಭಾ ಕರಂದ್ಲಾಜೆ ಕ್ಷೇತ್ರವಾದ ಬೆಂಗಳೂರು ಉತ್ತರದಲ್ಲಿ ರೋಡ್ ಶೋ ನಡೆಸುವುದೆಂದು ನಿರ್ಧ–ರಿಸಲಾಗಿತ್ತು. ಆದರೆ ಈಗ ಏ. 14 ರಂದು ಮೊದಲು ಮಂಗಳೂರಿನಲ್ಲಿ ಬೃಹತ್ ಸಮಾವೇಶ ಮಾಡಿ, ಅದೆ ದಿನ ಪ್ರಧಾನಿ ನರೇಂದ್ರ ಮೋದಿಯವರ ಬೆಂಗಳೂರಿನಲ್ಲಿ ರೋಡ್ ಶೋ ನಿಗದಿಯಂತೆಯೇ ನಡೆಯಲಿದೆ.

## 'ಮೋದಿ ಕಿ ಗ್ಯಾರಂಟಿ' ಎಂದರೆ ಚುನಾವಣೆ ಬಳಿಕ ಪ್ರತಿಪಕ್ಷಗಳ ನಾಯಕರ ಜೈಲಿಗಟ್ಟುವುದು: ಮಮತಾ ಬ್ಯಾನರ್ಜಿ

ಕೋಲ್ಕತ್ತಾ: 'ಮೋದಿ ಕಿ ಗ್ಯಾರಂಟಿ' ಎಂದರೆ ಲೋಕಸಭಾ ಚುನಾವಣೆ ಪೂರ್ಣಗೊಂಡ ಬಳಿಕ ಪ್ರತಿಪಕ್ಷ ನಾಯಕರನ್ನು ಜೈಲಿಗೆ ಕಳುಹಿಸುವುದಾಗಿದೆ ಎಂದು ಎಂದು ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಅವರು ಸೋಮವಾರ ಹೇಳಿದ್ದಾರೆ.

ಬಂಕುರಾದಲ್ಲಿ ರ್ಯಾಲಿಯನ್ನುದ್ದೇಶಿಸಿ ಮಾತನಾಡಿದ ಅವರು, ಜೂನ್ 4 ರ ನಂತರ ಭ್ರಷ್ಟರ ವಿರುದ್ಧ ಕ್ರಮ ಕೈಗೊಳ್ಳುವುದಾಗಿ ಪ್ರಧಾನಿ ಮೋದಿ ಭರವಸೆ ನೀಡಿದ್ದಾರೆ. ಇದರ ಅರ್ಥ ಲೋಕಸಭೆ ಚುನಾವಣೆ ನಂತರ ವಿರೋಧ ಪಕ್ಷದ ನಾಯಕರನ್ನು ಜೈಲಿಗೆ ಕಳುಹಿಸುವುದಾಗಿದೆ ಎಂದು ಕಿಡಿಕಾರಿದ್ದಾರೆ.

ರಾಷ್ಟ್ರೀಯ ತನಿಖಾ ಸಂಸ್ಥೆಯು ಸ್ಥಳೀಯ ಪೊಲೀಸರಿಗೆ ಮಾಹಿತಿ ನೀಡದೆಯೇ ಪುರ್ಬಾ ಮೇದಿನಿಪುರ ಜಿಲ್ಲೆಯ ಭೂಪತಿನಗರಕ್ಕೆ ಭೇಟಿ ನೀಡಿದೆ. ಪ್ರಧಾನಿ ಮೋದಿಯವರು ಅವರು ಚುನಾವಣಾ ರ್ಯಾಲಿಗಳಲ್ಲಿ ಭಾಗವಹಿಸಲು ಪಶ್ಚಿಮ ಬಂಗಾಳಕ್ಕೆ ಬರುತ್ತಿದ್ದಾರೆ. ಅವರ ಆಗಮನದಿಂದ ನನಗೆ ಯಾವುದೇ ಸಮಸ್ಯೆಗಳಿಲ್ಲ. ಆದರೆ, ಲೋಕಸಭೆ ಚುನಾವಣೆ ಫಲಿತಾಂಶದ ನಂತರ ಪ್ರತಿಪಕ್ಷಗಳ ವಿರುದ್ಧ ಕಠಿಣ ಕ್ರಮ ತೆಗೆದುಕೊಳ್ಳಲಾಗುವುದು ಎಂಬ ಹೇಳಿಕೆ ರೀತಿ ಸ್ವೀಕಾರಾರ್ಹವಲ್ಲ ಎಂದು ಹೇಳಿದ್ದಾರೆ. ಪ್ರಧಾನಮಂತ್ರಿಗಳ ಸ್ಥಾನದಲ್ಲಿದ್ದವರು ಈ ರೀತಿ ಮಾತನಾಡಬಹುದೇ? ಚುನಾವಣೆಯ ನಂತರ ಬಿಜೆಪಿ ನಾಯಕರನ್ನು ಜೈಲಿಗೆ ಹಾಕುತ್ತೇನೆ ಎಂದು ನಾನು ಹೇಳಿದರೆ ಹೇಗಿರುತ್ತದೆ? ಆದರೆ, ಪ್ರಜಾಪ್ರಭುತ್ವದಲ್ಲಿ ಇದು ಸ್ವೀಕಾರಾರ್ಹವಲ್ಲ. ಈ ರೀತಿ ನಾನು ಹೇಳುವುದಿಲ್ಲ. ಜೂನ್ 4 ರ ನಂತರ ಎಲ್ಲಾ ವಿರೋಧ ಪಕ್ಷದ ನಾಯಕರನ್ನು ಜೈಲಿಗೆ ಕಳುಹಿಸುವುದೇ ನಿಜವಾದ ಮೋದಿ ಕಿ ಗ್ಯಾರಂಟಿ ಎಂದು ಆರೋಪಿಸಿದರು



## ಏ.15ರಂದು ಮೃಣಾಲ ಹೆಬ್ಬಾಳಕರ್ ನಾಮಪತ್ರ ಸಲ್ಲಿಕೆ

ಬೆಳಗಾವಿ: ಬೆಳಗಾವಿ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ ಹೆಬ್ಬಾಳಕರ್ ಏಪ್ರಿಲ್ 15ರಂದು ತಮ್ಮ ನಾಮಪತ್ರ ಸಲ್ಲಿಸಲಿದ್ದಾರೆ.

ಅಂದು ಬೆಳಗ್ಗೆ 6 ಗಂಟೆಗೆ ಸುಳೇಬಾವಿ ಮಹಾಲಕ್ಷ್ಮೀ ದೇವಸ್ಥಾನದಲ್ಲಿ ನಾಮಪತ್ರಕ್ಕೆ ಪೂಜೆ ಸಲ್ಲಿಸುವ ಮೃಣಾಲ ಹೆಬ್ಬಾಳಕರ್, ನಂತರ 11 ಗಂಟೆಗೆ ಹಿಂಡಲಗಾ ಗಣಪತಿ ದೇವಸ್ಥಾನದಲ್ಲಿ ಪೂಜೆ ಸಲ್ಲಿಸಿ ಅಲ್ಲಿಂದ ರ್ಯಾಲಿ ಆರಂಭಿಸಲಿದ್ದಾರೆ. ನಂತರ ಜಿಲ್ಲಾಧಿಕಾರಿ ಕಚೇರಿಗೆ ತೆರಳಿ ನಾಮಪತ್ರ ಸಲ್ಲಿಸುವರು.

ಲೋಕೋಪಯೋಗಿ ಸಚಿವರೂ, ಜಿಲ್ಲಾ ಉಸ್ತುವಾರಿ ಸಚಿವರೂ ಆಗಿರುವ ಸತೀಶ್ ಜಾರಕಿಹೊಳಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಸೇ–ರಿದಂತೆ ಜಿಲ್ಲೆಯ ಎಲ್ಲ ಕಾಂಗ್ರೆಸ್ ಶಾಸಕರು, ಮುಖಂಡರು, ಅಪಾರ ಸಂಖ್ಯೆಯಲ್ಲಿ ಕಾರ್ಯಕರ್ತರು ಭಾಗವಹಿಸಲಿದ್ದಾರೆ. ಜೊತೆಗೆ ರಾಜ್ಯದ ಕೆಲವು ನಾಯಕರೂ ಆಗಮಿಸುವ ನಿರೀಕ್ಷೆ ಇದೆ.



ಮೃಣಾಲ ಹೆಬ್ಬಾಳಕರ್ ಪರವಾಗಿ ಕ್ಷೇತ್ರದಲ್ಲಿ ಈಗಾಗಲೆ ಅಬ್ಬರದ ಪ್ರಚಾರ ನಡೆದಿದ್ದು, ಎಲ್ಲೆಡೆ ಭಾರೀ ಬೆಂಬಲ ವ್ಯಕ್ತವಾಗುತ್ತಿದೆ. ಕ್ಷೇತ್ರದ ಎಲ್ಲ ತಾಲೂಕು ಮತ್ತು ಹೋಬಳಿಗಳಲ್ಲಿ ಕಾರ್ಯಕರ್ತರ ಸಭೆ, ಸಾರ್ವಜನಿಕರ ಭೇಟಿ ನಡೆಯುತ್ತಿದೆ. ಮನೆ ಮಗನಾಗಿರುವ ನನಗೆ ಮತ ನೀಡುವ ಮೂಲಕ ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಆಶೀರ್ವಾದ ಮಾಡಿ. ಜಿಲ್ಲೆಗೆ ಹಲವಾರು ಯೋಜನೆಗಳನ್ನು ತರುವ, ಮುಖ್ಯವಾಗಿ ಯುವಕ–ರಿಗೆ ಉದ್ಯೋಗ ಒದಗಿಸುವ ದಿಸೆಯಲ್ಲಿ ಹಲವಾರು ಕನಸುಗಳನ್ನು ಕಟ್ಟಿಕೊಂಡಿದ್ದೇನೆ. ಎಂಜಿನಿಯ–ರಿಂಗ ಪದವೀಧರನಾಗಿರುವ ನನ್ನನ್ನು ಬೆಂಬಲಿಸುವ ಮೂಲಕ ನಿಮ್ಮ ಸೇವೆಗೆ ಅವಕಾಶ ಕೊಡಿ ಎಂದು ಮೃಣಾಲ ಹೆಬ್ಬಾಳಕರ್ ಕೋರುತ್ತಿದ್ದಾರೆ.

ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ, ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಹಾಗೂ ಜಿಲ್ಲೆಯ ಎಲ್ಲ ಶಾಸಕರು, ಕಾಂಗ್ರೆಸ್ ಮುಖಂಡರು ಪ್ರಚಾರ ಕಾರ್ಯಕ್ಕೆ ಸಾಥ್ ನೀಡುತ್ತಿದ್ದಾರೆ. ಹೋದಲ್ಲೆಲ್ಲ ಅಭೂತಪೂರ್ವ ಬೆಂಬಲ ವ್ಯಕ್ತವಾಗುತ್ತಿದೆ.

ಸೋಮವಾರ ನಾಮಪತ್ರ ಸಲ್ಲಿಕೆ ನಂತರ ಎರಡನೇ ಸುತ್ತಿನ ಪ್ರಚಾರ ಕಾರ್ಯವನ್ನು ಆರಂಭಿಸಲಾಗುವುದು. ಪಕ್ಷದ ಸ್ಟಾರ್ ಪ್ರಚಾರಕರು ಸೇರಿದಂತೆ ವಿವಿಧ ಮುಖಂಡರು ಪ್ರಚಾರಕ್ಕೆ ಆಗಮಿಸಲಿದ್ದಾರೆ. ಈ ಬಾರಿ ಬೆಳಗಾವಿ ಮತ್ತು ಚಿಕ್ಕೋಡಿ ಎರಡೂ ಕ್ಷೇತ್ರದಲ್ಲಿ ಕಾಂಗ್ರೆಸ್ ಗೆಲುವು ನಿಶ್ಚಿತ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ತಿಳಿಸಿದ್ದಾರೆ.

## ಬರ ಪರಿಹಾರ ಕೋರಿ ರಾಜ್ಯ ಸರ್ಕಾರದ ಅರ್ಜಿ: ಕೇಂದ್ರಕ್ಕೆ ಸುಪ್ರೀಂ ಕೋರ್ಟ್ ನೋಟಿಸ್

ನವದೆಹಲಿ: ಬರ ಪರಿಹಾರ ಬಿಡುಗಡೆಗೆ ಕೋರಿ ಕರ್ನಾಟಕ ಸರ್ಕಾರ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ಸುಪ್ರೀಂ ಕೋರ್ಟ್, ಕೇಂದ್ರ ಸರ್ಕಾರಕ್ಕೆ ನೋಟಿಸ್ ನೀಡಿದ್ದು, ಎರಡು ವಾರಗಳಲ್ಲಿ ಪ್ರತಿಕ್ರಿಯಿಸುವಂತೆ ಸೂಚನೆ ನೀಡಿದೆ.

ಬರದಿಂದ ಕಂಗೆಟ್ಟಿರುವ ಕರ್ನಾಟಕಕ್ಕೆ ಕೇಂದ್ರದ ಬಿಜೆಪಿ ಸರ್ಕಾರ ಪರಿಹಾರ ಕೊಡುತ್ತಿಲ್ಲ; ನೆರವಿಗೂ ಬರುತ್ತಿಲ್ಲ ಎಂದು ಆಪಾದಿಸಿದ್ದ ಕಾಂಗ್ರೆಸ್ ನೇತೃತ್ವದ ರಾಜ್ಯ ಸರ್ಕಾರ, ತನ್ನ ಹೋರಾಟವನ್ನು ಸುಪ್ರೀಂ ಕೋರ್ಟ್‌ವರೆಗೆ ಒಯ್ದಿತ್ತು. ರಾಷ್ಟ್ರೀಯ ವಿಪತ್ತು ನಿರ್ವಹಣಾ ನಿಧಿಯಿಂದ (ಎನ್‌ಡಿ ಆರ್‌ಎಫ್) ತಕ್ಷಣ ಹಣ ಬಿಡುಗಡೆಗೊಳಿಸಲು ಕೇಂದ್ರ ಸರ್ಕಾರಕ್ಕೆ ನಿರ್ದೇಶನ ನೀಡುವಂತೆ ಕೋರಿ ರಾಜ್ಯ ಸರ್ಕಾರ ಸುಪ್ರೀಂ ಕೋರ್ಟ್ ಕದ ತಟ್ಟಿತ್ತು. ಪರಿಹಾರ ಬಿಡುಗಡೆಗೆ ಆಗ್ರಹಿಸಿ ಕೇಂದ್ರದ ವಿರುದ್ಧ ರಾಜ್ಯ ಈ ಹಿಂದೆ ನಡೆಸುತ್ತಿರುವ ಹೋರಾಟ ಮತ್ತೊಂದು ಆಯಾಮ ಪಡೆದಿದೆ. ಕೇಂದ್ರದ ಜತೆ ರಾಜ್ಯ ಸರ್ಕಾರ ಪತ್ರ ವ್ಯವಹಾರ ನಡೆಸಿತ್ತು. ರಾಜ್ಯ ಸಚಿವರ ನಿಯೋಗವು ಕೇಂದ್ರ ಸಚಿವರನ್ನು ಭೇಟಿ ಮಾಡಿತ್ತು. ಪ್ರಧಾನಿ ಮತ್ತು ಗೃಹ ಸಚಿವ–ರಿಗೆ ರಾಜ್ಯ ಸರ್ಕಾರದಿಂದ ಮನವಿಯನ್ನೂ ಸಲ್ಲಿಸಲಾಗಿತ್ತು. ಹಲವು ಸುತ್ತಿನ ಆಪಾದನಾ ಪರ್ವಗಳನ್ನು ನಡೆಸಿದ್ದ ಸಿದ್ದರಾಮಯ್ಯ ನೇತೃತ್ವದ ಸರ್ಕಾರ, ಸಚಿವ, ಶಾಸಕರ ದಂಡಿನೊಂದಿಗೆ ದೆಹಲಿಯ ಜಂತರ್ ಮಂತರ್‌ನಲ್ಲಿ ಧರಣಿಯನ್ನೂ ನಡೆಸಿ ದೇಶದ ಗಮನ ಸೆಳೆದಿತ್ತು.

## ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಗೆ ಒಂದು ಕೆಜಿ ಬಂಗಾರದ ಬಳೆ ತೊಡಿಸುವೆ: ಮುರುಗೇಶ ನಿರಾಣಿ

ಬೆಳಗಾವಿ: ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಕಾಂಗ್ರೆಸ್ ಸರ್ಕಾರ ಬಂದ ಎರಡು ತಿಂಗಳಲ್ಲಿ ಪಂಚಮಸಾಲಿ ಸಮುದಾಯಕ್ಕೆ 2 ಎ ಮೀಸಲಾತಿ ನೀಡುವ ವಾಗ್ದಾನ ಮಾಡಿದ್ದರು.

ಇದು ನೆರವೇರಿಲ್ಲ. ತಮ್ಮ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿ ಹೊರಬಂದು ಸಮುದಾಯಕ್ಕೆ ನ್ಯಾಯ ನೀಡಿದರೆ ಒಂದು ಕೆಜಿ. ಬಂಗಾರದ ಬಳೆ ತೊಡಿಸಿ ಸನ್ಮಾನಿಸುವೆ ಎಂದು ರಾಜ್ಯ ಬಿಜೆಪಿ ಉಪಾಧ್ಯ ಮುರುಗೇಶ ನಿರಾಣಿ ಹೇಳಿಕೆ ನೀಡಿದರು.

ಸೋಮವಾರ ಬೆಳಗಾವಿಯ ಸದಾಶಿವ ನಗರದ ಬಿಜೆಪಿ ಕಚೇರಿಯಲ್ಲಿ ಸುದ್ದಿಘೋಷ್ಠಿ ಉದ್ದೇಶಿಸಿ ಮಾತನಾಡಿದ ಇವರು. ನಮ್ಮ ಬಿಜೆಪಿ ಸರ್ಕಾರದ ಅವಧಿಯಲ್ಲಿ



ಪಂಚಮಸಾಲಿ ಸಮುದಾಯಕ್ಕೆ ನ್ಯಾಯ ಒದಗಿಸಿದ್ದೇವೆ. ಈವರೆಗೂ ಕಾಂಗ್ರೆಸ್ ಸರ್ಕಾರದಿಂದ ಸಮುದಾಯಕ್ಕೆ ಯಾವುದೇ ಲಾಭವಾಗಿಲ್ಲ. ಕೇವಲ ರಾಜಕೀಯಕ್ಕಾಗಿ ಸಮುದಾಯ ಬಳಸಿಕೊಳ್ಳುವ ಕಾಂಗ್ರೆಸ್ಸಿಗ–ರಿಗೆ ಪಂಚಮಸಾಲಿ ಸಮುದಾಯದ ಮುಂದೆ ಮತ ಕೇಳುವ ನೈತಿಕತೆ ಇಲ್ಲ ಎಂದು ಆಕ್ರೋಶ ಹೊರಹಾಕಿದರು.

ಸವಿವೆ ಲಕ್ಷ್ಮೀ ಹೆಬ್ಬಾಳ್ಕರ್ ನಾನು ಪಂಚಮಸಾಲಿ ಸಮುದಾಯದ ಹೆಣ್ಣುಮಗಳು, ಕಿತ್ತೂರು ರಾಣಿ ಚನ್ನಮ್ಮನ ರಕ್ತ ನನ್ನ ಮೈಯಲ್ಲಿ ಹರಿಯುತ್ತಿದೆ ಎನ್ನುತ್ತಾರೆ.

ಅಂತಹ ಮಹಾನ್ ನಾಯಕರನ್ನು ನಮ್ಮಂತ ಸಾಮಾನ್ಯರು ಹೋಲಿಕೆ ಮಾಡಿಕೊಳ್ಳುವುದು ತಪ್ಪು. ಹೆಬ್ಬಾಳ್ಕರ್ ಅವರು ರವೀಂದ್ರ ಎಂಬುವವರನ್ನು ಮದುಯಾಗಿದ್ದಾರೆ. ಅವರು ಮೂಲತಃ ಬಣಜಿಗ ಸಮುದಾಯದವರು. ಲಕ್ಷ್ಮೀ ಹೆಬ್ಬಾಳ್ಕರ್ ಅವರ ಪುತ್ರ ಮೃಣಾಲ್ ಹೆಬ್ಬಾಳ್ಕರ್ ಬಣಜಿಗ ಸಮುದಾಯಕ್ಕೆ ಸೇ–ರಿದ್ದು ಪಂಚಮಸಾಲಿ ಸಮುದಾಯದ ಹೆಸರು ಹೇಳುವುದು ಎಷ್ಟು ಸರಿ ಎಂದು ಪ್ರಶ್ನಿಸಿದರು.

ಬೆಳಗಾವಿ ಲೋಕಸಭಾ ಮತಕ್ಷೇತ್ರದ ಎನ್ ಡಿಎ ಅಭ್ಯರ್ಥಿಯಾಗಿರುವ ಜಗದೀಶ್ ಶೆಟ್ಟರ್ ಅವರು ಮುಖ್ಯಮಂತ್ರಿಯಾದ ಅವಧಿಯಲ್ಲಿ ಬೆಳಗಾವಿಗೆ ಸಾಕಷ್ಟು ಅಭಿವೃದ್ಧಿ ಪರ ಕೆಲಸ ಮಾಡಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ಅವರು ದೇಶದ ಅಭಿವೃದ್ಧಿ ಮಾಡುವುದರ ಜೊತೆಗೆ ವಿಶ್ವವೇ ಭಾರತದ ಕಡೆಗೆ ತಿರುಗಿ ನೋಡುವ ಹಾಗೆ ಮಾಡಿದ್ದಾರೆ.

ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಅಮ್ಮಾ ಲಕ್ಷ್ಮೀ ಅಕ್ಕಾ ನೀವೆ ಬೆಳಗಾವಿಯವರಲ್ಲ. ನೀವು ಖಾನಾಪುರ ತಾಲೂಕಿನ ಹಟ್ಟಿಹೊಳಿ ಗ್ರಾಮದವರು. ಅಲ್ಲಿಂದ ಬಂದು ನೀವು ಗ್ರಾಮೀಣ ಮತಕ್ಷೇತ್ರದಿಂದ ಸ್ಪರ್ಧೆ ಮಾಡಿದ್ದೀರಿ. ಅದಕ್ಕೆ ಬಿಜೆಪಿಯವರು ಯಾರೂ ಆಕ್ಷೇಪ ವ್ಯಕ್ತಪಡಿಸಿಲ್ಲ ಎಂದು ಹೆಬ್ಬಾಳ್ಕರ್ ವಿರುದ್ಧ ಆಕ್ರೋಶ ಹೊರಹಾಕಿದರು.

ಈ ಸಂದರ್ಭದಲ್ಲಿ ಬಿಜೆಪಿ ನಗರ ಘಟಕದ ಅಧ್ಯಕ್ಷೆ ಗೀತಾ ಸುತಾರ, ಪಾಲಿಕೆ ಸದಸ್ಯ ಹನುಮಂತ ಕೊಂಗಾಲಿ, ಬಿಜೆಪಿ ಮುಖಂಡರಾದ ಎಂ.ಬಿ.ಜೀರಲಿ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

## ಬೆಳಗಾವಿ ಜಿಲ್ಲೆಯ ಅಭಿವೃದ್ಧಿಗೆ ಶೆಟ್ಟರಗೆ ಮತ ನೀಡಿ, ಜಾತಿ ರಾಜಕಾರಣ ಸಲ್ಲದು: ಮಾಜಿ ಸಚಿವ ಶಾಸಕ ರಮೇಶ ಜಾರಕಿಹೊಳಿ ವಾಗ್ದಾಳಿ

# ಜಗದೀಶ ಶೆಟ್ಟರ ಗೆದ್ದರೆ ನಾನು-ನನ್ನ ಸಹೋದರನಿಗೆ ಆನೆ ಬಲ: ರಮೇಶ ಜಾರಕಿಹೊಳಿ

ಗೋಕಾಕ: ದಿ. ಸುರೇಶ ಅಂಗಡಿ ಹಾಗೂ ಜಗದೀಶ ಶೆಟ್ಟರ ಒಂದೇ ನಾಣ್ಯದ ಎರಡು ಮುಖಗಳಂತಿದ್ದು ಬೆಳಗಾವಿ ಜಿಲ್ಲೆಯ ಅಭಿವೃದ್ಧಿಯಲ್ಲಿ ಅವರ ಪಾತ್ರ ಮಹತ್ವದ್ದಾಗಿದೆ. ಹೀಗಾಗಿ ಜನಪರ ಕಾಳಜಿ ಇರುವ ಜಗದೀಶ ಶೆಟ್ಟರ ಅವರನ್ನು ಬಹುಮತ ಅಂತರದಿಂದ ಗೆಲ್ಲಲು ಮತದಾರರು ಆಶೀರ್ವಾದ ಮಾಡಬೇಕು ಎಂದು ಶಾಸಕ ರಮೇಶ ಜಾರಕಿಹೊಳಿ ಹೇಳಿದರು.

ಅವರು, ಭಾವಾರ ನಗರದಲ್ಲಿ ಆಯೋಜಿಸಿದ್ದ ಗೋಕಾಕ ಮತಕ್ಷೇತ್ರದ ಬೂತ್ ಮಟ್ಟದ ಬಿಜೆಪಿ ಕಾರ್ಯಕರ್ತರ ಸಮಾವೇಶವನ್ನು ಉದ್ಘಾಟಿಸಿ ಮಾತನಾಡಿ, ಸುರೇಶ ಅಂಗಡಿ ಹಾಗೂ ಜಗದೀಶ ಶೆಟ್ಟರ ತಮ್ಮ ಅಧಿಕಾರವಧಿಯಲ್ಲಿ ಹಲವಾರು ಯೋಜನೆಗಳ ಅನುಷ್ಠಾನದೊಂದಿಗೆ ಜಿಲ್ಲೆಗೆ ವಿಶೇಷ ಕೊಡುಗೆ ನೀಡಿದ್ದಾರೆ. ಕೆಲವರು ಬ್ಯಾಂಕ ಹಾಗೂ ಸೋಸೈಟಿಗಳ ದುರ್ಬಳಕೆಯಿಂದ ಹಣಬಲ ತೋರಿಸುತ್ತಿದ್ದು ಮುಂದಿನ ದಿನಗಳಲ್ಲಿ ಸಿಬಿಐ ತನಿಖೆಯ ಮೂಲಕ ವಾಸ್ತವಿಕತೆಯನ್ನು ಜನರ ಮುಂದಿಡಲು ಒತ್ತಾಯಿಸುವದಾಗಿ ತಿಳಿಸಿದರು.

ಭಾರತೀಯ ಜನತಾ ಪಕ್ಷ ನನಗೆ ಎಲ್ಲ ಸ್ಥಾನಮಾನ ನೀಡಿ ಗೋಕಾಕ ಮತಕ್ಷೇತ್ರ ಹಾಗೂ ಜಿಲ್ಲೆಯ ಅಭಿವೃದ್ಧಿಗೆ ಶ್ರಮಿಸಲು ಸಹಕಾರ ನೀಡಿದೆ. ಕೇಂದ್ರದ ನಾಯಕರ ನನ್ನ ಮೇಲೆ ಹೆಚ್ಚಿನ ವಿಶ್ವಾಸವಿಟ್ಟಿದ್ದು ಅದನ್ನು ಉಳಿಸಲು ಕ್ಷೇತ್ರದ ಜನತೆ ಬಿಜೆಪಿ ಅಭ್ಯರ್ಥಿ ಜಗದೀಶ ಶೆಟ್ಟರ ಅವರಿಗೆ ತಮ್ಮ ಅಮೂಲ್ಯವಾದ ಮತ ನೀಡಿ ಅತ್ಯಧಿಕ ಅಂತರದಲ್ಲಿ ಆರಿಸಬೇಕು. ಅವರ ಜಯದಿಂದ ನನಗೆ ಹಾಗೂ ಬಾಲಚಂದ್ರ ಜಾರಕಿಹೊಳಿ ಅವರಿಗೂ ಹೆಚ್ಚಿನ ಶಕ್ತಿ ದೊರೆತು ಕ್ಷೇತ್ರದ ಮತ್ತು ಜಿಲ್ಲೆಯ ಅಭಿವೃದ್ಧಿ ಕಾರ್ಯ ಮಾಡಲು ಸಹಕಾರಿಯಾಗುತ್ತದೆ. ನಾನು ಜಾತಿ ರಾಜಕಾರಣ ಮಾಡದೆ ಬಸವತತ್ವದಲ್ಲಿ ವಿಶ್ವಾಸವಿಟ್ಟು ಜನರ ಸೇವೆ ಮಾಡುತ್ತಿದ್ದೇನೆ. ಜನಪ್ರತಿನಿಧಿಗಳಾಗಲು ಎಲ್ಲ ಸಮುದಾಯಗಳ ಆಶೀರ್ವಾಧ ಅತಿಅವಶ್ಯ. ಜಾತಿ ರಾಜಕಾರಣಕ್ಕೆ ಮಹತ್ವ ನೀಡದೆ ಬಲಿಷ್ಠ ಭಾರತ ನಿರ್ಮಾಣ-ಕ್ಕೆ ಮತ್ತೊಮ್ಮೆ ನರೇಂದ್ರ ಮೋದಿಯವರನ್ನು ಪ್ರಧಾನಿಯನ್ನಾಗಿ ಮಾಡಲು ಜಗದೀಶ ಶೆಟ್ಟರ ಅವರಿಗೆ ತಮ್ಮ ಮತ ನೀಡುವಂತೆ ಕೋರಿದರು.

ಬೆಳಗಾವಿ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಜಗದೀಶ ಶೆಟ್ಟರ ಮಾತನಾಡುತ್ತ ಕಾಂಗ್ರೆಸ್‌ನವರು ನಾಟಕೀಯ ಹಿಂದುತ್ವ ತೋರಿಸದೇ ಬಿಜೆಪಿ ಸರಕಾರ ಜಾರಿಗೆ ತಂದ ಮತಾಂತರ ಕಾಯ್ದೆ ಹಾಗೂ ಗೋ ಹತ್ಯೆ ನಿಷೇಧ ಕಾಯ್ದೆಯನ್ನು ಜಾರಿಗೆ ತೋರಿಸುವ ಮೂಲಕ ಪ್ರಾಮಾಣಿಕ ಹಿಂದುತ್ವತೋರಿಸುವಂತೆ ಸವಾಲು ಹಾಕಿದರು.

ಮೋದಿಯವರನ್ನು ಮೂರನೇ ಬಾರಿ ಪ್ರಧಾನಿಯನ್ನಾಗಿ ಮಾಡುವ 141ಕೋಟಿ ಜನರ ಕನಸು ನನಸು ಮಾಡುವ ಚುನಾವಣೆ



ಇದಾಗಿದ್ದು, ಅದನ್ನು ನನಸಾಗಿಸಲು ಅವರ ಪ್ರತಿನಿಧಿಯಾಗಿ ಈ ಚುನಾವಣೆಯಲ್ಲಿ ಸ್ಪರ್ಧಿಸಿದ್ದೇನೆ.

ಸುಮಾರು 30ವರ್ಷಗಳಿಂದ ಈ ಜಿಲ್ಲೆಯಲ್ಲಿ ಪಕ್ಷ ಸಂಘಟನೆಗಾಗಿ ಕಾರ್ಯನಿರ್ವಹಿಸಿದ್ದೇನೆ. ಮುಖ್ಯಮಂತ್ರಿಯಾಗಿ, ವಿರೋಧ ಪಕ್ಷದ ನಾಯಕನಾಗಿ, ಎರಡು ಬಾರಿ ಉಸ್ತುವಾರಿ ಸಚಿವನಾಗಿ ಜಿಲ್ಲೆಯ ಅಭಿವೃದ್ಧಿಗೆ ಹಲವಾರು ಯೋಜನೆಗಳನ್ನು ಅನುಷ್ಠಾನಗೊಳಿಸಿದ್ದೇನೆ. ಸುವರ್ಣಸೌಧ ನಿರ್ಮಾಣ ಕಾರ್ಯದಲ್ಲಿ ಎಲ್ಲ ಶಾಸಕರ ವಿಶ್ವಾಸದೊಂದಿಗೆ ಸ್ಥಳ ನಿಗದಿಯೊಂದಿಗೆ ನನ್ನ ಮುಖ್ಯಮಂತ್ರಿ ಅವಧಿಯಲ್ಲಿ ತ್ವರಿತವಾಗಿ ನಿರ್ಮಾಣವಾಗಲು ಶ್ರಮಿಸಿದ್ದೇನೆ. ಪ್ರವಾಹ, ಕೋವಿಡ್ ಸಂದರ್ಭದಲ್ಲೂ ವಿಶೇಷ ಸೇವೆ ಸಲ್ಲಿಸಿದ್ದೇನೆ. ಆಕ್ಸಿಜನ್ ಕೊರತೆಯಾಗದಂತೆ ಜಿಲ್ಲೆಯಲ್ಲಿ ಸರಣಿ ಸಭೆ ನಡೆಸಿ ಮಹಾಮಾರಿಯನ್ನು ಎದು-ರಿಸಿದ್ದೇನೆ. ವಿರೋಧಿಗಳ ಮಹತ್ವ ನೀಡಬೇಡಿ. ಸುರೇಶ ಅಂಗಡಿಯವರ ಯೋಜನೆಗಳನ್ನು ತಾವುಗಳು ನನಗೆ ಆಶೀರ್ವಧಿಸಿ ಅವುಗಳನ್ನು ಕಾರ್ಯಗತಮಾಡಲು ಅವಕಾಶ ನೀಡುವಂತೆ ವಿನಂತಿಸಿದರು.

ನರೇಂದ್ರ ಮೋದಿಯಂತಹ ಶ್ರೇಷ್ಠ ನಾಯಕನ ಅವಶ್ಯಕತೆ ದೇಶಕ್ಕೆ ಇದೆ. ಜಮ್ಮು ಕಾಶ್ಮೀರದಲ್ಲಿ 370ಕಲಂ ತೆಗೆದು ಹಾಕಿ, ರಾಮ ಮಂದಿರ ನಿರ್ಮಾಣ ಮಾಡಿ ದೇಶದಲ್ಲಿ ಶಾಂತತೆಯನ್ನು ನೆಲೆಸುವಂತೆ ಮಾಡಿದ್ದಾರೆ. ಬರುವ ದಿನಗಳಲ್ಲಿ ಒಂದು ದೇಶ ಒಂದು ಚುನಾವಣೆ ಹಾಗೂ ಎಲ್ಲರಿಗೂ ಒಂದೆ ಕಾನೂನು ಜಾರಿಗೊಳಿಸಿ ಪಿಓಕೆಯನ್ನು ವಶಪಡಿಸಿಕೊಳ್ಳಲು ನರೇಂದ್ರ ಮೋದಿಯವರನ್ನು ಮತ್ತೊಮ್ಮೆ ಪ್ರಧಾನಿಯನ್ನಾಗಿ ಮಾಡಿ ಅಖಂಡ ಭಾರತ ನಿರ್ಮಿಸಲು ನಾವೆಲ್ಲ ಕಾರ್ಯಪ್ರವೃತ್ತರಾಗೋಣ ಎಂದರು.

ಮಾಜಿ ಶಾಸಕ, ಚುನಾವಣಾ ಸಂಚಾಲಕ ಸಂಜಯ ಪಾಟೀಲ ಮಾತನಾಡಿ, ಶಾಸಕ ರಮೇಶ ಜಾರಕಿಹೊಳಿ ಮಾತನಾಡುವದನ್ನೇ ಮಾಡಿ ತೋರಿಸುತ್ತಾರೆ. ಈ ಬಾರಿ ಬೆಳಗಾವಿ ಲೋಕಸಭಾ ಅಭ್ಯರ್ಥಿಯನ್ನು 2ಲಕ್ಷ ಮತಗಳ ಅಂತರದಲ್ಲಿ ಗೆಲ್ಲಿಸಿಕೊಂಡು ಬರುವ ಶಫತ ಮಾಡಿದ್ದಾರೆ.

ವಿರೋಧ ಪಕ್ಷದವರು ಚುನಾವಣೆಯನ್ನು ಹಣದಿಂದ ಮಾಡುತ್ತಾರೆ. ಆದರೆ ಪ್ರಧಾನಿ ನರೇಂದ್ರ ಮೋದಿ 18 ಗಂಟೆಗಳ ಕಾಲ ಕಾರ್ಯನಿರ್ವಹಿಸಿ ಪ್ರೀತಿಯ ರಾಜಕಾರವನ್ನು ಮಾಡುತ್ತಿದ್ದರೆ. ನಮ್ಮ ವಿರೋಧ ಅಭ್ಯರ್ಥಿ ಬೆಂಗಳೂರಿನಿಂದ ಹಣ ತರುತ್ತಾರೆ.

ಬೆಂಗಳೂರಿನಲ್ಲಿ ದೊಡ್ಡ ನಾಯಕರಿದ್ದಾರೆ ಇವರ ಮೇಲಿನ ಪ್ರೀತಿಗೆ ಅವರು ಹಣವನ್ನು ನೀಡುತ್ತಿದ್ದು ಇವರು ಚುನಾವಣೆಯಲ್ಲಿ ಹಣ ಹಂಚುತ್ತಾರೆ ಇದು ಅವರ ಸಂಸ್ಕೃತಿ. ದೇಶದ ಅಭಿವೃದ್ಧಿ ಬಿಜೆಪಿ ಸಂಸ್ಕೃತಿ. ಬಿಜೆಪಿ ಅಭ್ಯರ್ಥಿಗೆ ತಮ್ಮ ಮತವನ್ನು ನೀಡುವ ಮೂಲಕ ಮೂರನೇ ಬಾರಿಗೆ ನರೇಂದ್ರ ಮೋದಿಯವರನ್ನು ಪ್ರಧಾನಿಯನ್ನಾಗಿ ಮಾಡೋಣ ಎಂದರು.

ಮೈಸೂರು-ಕೊಡಗು ಸಂಸದ ಪ್ರತಾಪ ಸಿಂಹ ಮಾತನಾಡಿ, ನರೇಂದ್ರ ಮೋದಿಯವರ ದಕ್ಷ ಆಡಳಿತದಿಂದ ಜಗತ್ತಿನ ರಾಜಕಾರಣ ನಿರ್ಧ-ರಿಸುವ ಶಕ್ತಿ ದೊರೆತು ಮೋದಿಯವರು ಜಾಗತಿಕ ನಾಯಕರಾಗಿ ಹೊರಹೊಮ್ಮಿದ್ದಾರೆ. ಭಾರತೀಯ ಜನತಾ ಪಕ್ಷ ಅಧಿಕಾರದಲ್ಲಿ ಬಾಂಬ್ ಸಂಸ್ಕೃತಿ ಮರೆಯಾಗಿ ಜನತೆ ನೆಮ್ಮದಿಯಾಗಿ ಬದುಕುತ್ತಿದ್ದಾರೆ. ನಿಮ್ಮ ಒಂದು ಮತ ಮೋದಿಯವರನ್ನು ಮತ್ತೊಮ್ಮೆ ಪ್ರಧಾನಿಯನ್ನಾಗಿಸಿ ಇನ್ನೂ ದೇಶವನ್ನು ಬಲಿಷ್ಠಗೊಳಿಸಿ ವಿಶ್ವಗುರುವನ್ನಾಗಿಸುತ್ತದೆ. ತಮ್ಮ ಮತವನ್ನು ಬಿಜೆಪಿ ಅಭ್ಯರ್ಥಿಗೆ ನೀಡುವಂತೆ ಕೋರಿದರು.

ವೇದಿಕೆಯ ಮೇಲೆ ಸಂಸದೆ ಮಂಗಲಾ ಅಂಗಡಿ, ಬಿಜೆಪಿ ರಾಜ್ಯ ಉಪಾಧ್ಯಕ್ಷ ಅನೀಲ ಬೆನಕೆ, ಬೆಳಗಾವಿ ಗ್ರಾಮಾಂತರ ಜಿಲ್ಲಾಧ್ಯಕ್ಷ ಸುಭಾಸ ಪಾಟೀಲ, ಜೆಡಿಎಸ್ ಜಿಲ್ಲಾಧ್ಯಕ್ಷ ಶಂಕರ ಮಾಡಲಗಿ, ಮಾಜಿ ಶಾಸಕ ಎಮ್ ಎಲ್ ಮುತ್ತೆನ್ನವರ, ಗೋಕಾಕ ನಗರ ಮಂಡಳ ಅಧ್ಯಕ್ಷ ಭೀಮಶಿ ಭರಮನ್ನವರ, ಗ್ರಾಮೀಣ ಅಧ್ಯಕ್ಷ ರಾಜೇಂದ್ರ ಗೌಡಪ್ಪಗೋಳ, ಬಿಜೆಪಿ ಮುಖಂಡರುಗಳಾದ ಎಮ್ ಬಿ ಜಿರಲಿ, ತುಬಾಕಿ, ಲಕ್ಷ್ಮಣ ತಪಸಿ, ಕೆ ವಿ ಪಾಟೀಲ, ಶಾಮಾನಂದ ಪೂಜೇರಿ, ಮುತ್ತೆಪ್ಪ ಮನ್ನಾಪೂರ, ಶಕೀಲ ಧಾರವಾಡಕರ, ಯುವರಾಜ ಜಾಧವ, ಶಿವಾನಂದ ಪಾಟೀಲ, ಪುಂಡಲೀಕ ವಣ್ಣೂರ ಇದ್ದರು.

ಶ್ರೀಮತಿ ರಾಜೇಶ್ವರಿ ಒಡೆಯರ ಒಡೆಯರ ಸ್ವಾಗತಿಸಿದರು. ಬಾಳೇಶ ಗಿಡ್ಡನವರ ವಂದಿಸಿದರು.

## ಮಹಿಳೆಯರು ಮುಖ್ಯ ವಾಹಿನಿಯಲ್ಲಿ ಗುರುತಿಸಿಕೊಳ್ಳಲು ನಿಮ್ಮೆಲ್ಲರ ಸಹಕಾರ ಬೇಕು

ಯಮಕನಮರಡಿ: ಮಹಿಳೆಯರು ಎಲ್ಲ ಕ್ಷೇತ್ರಗಳ ಮೂಲಕ ಸಮಾಜದ ಮುಖ್ಯ ವಾಹಿನಿಯಲ್ಲಿ ಗುರುತಿಸಿಕೊಳ್ಳಬೇಕು. ಅದಕ್ಕೆ ನಿಮ್ಮೆಲ್ಲರ ಸಹಕಾರವೂ ಬೇಕು. ಅದಕ್ಕಾಗಿಯೇ ಕಾಂಗ್ರೆಸ್ ಪಕ್ಷದ ವ-ರಿಷ್ಠರು ನನ್ನನ್ನು ಸೇರಿ ರಾಜ್ಯದಲ್ಲಿ ಆರು ಜನ ಮಹಿಳೆಯರಿಗೆ ಲೋಕಸಭೆ ಟಿಕೆಟ್ ನೀಡಿದ್ದಾರೆ ಎಂದು ಚಿಕ್ಕೋಡಿ ಲೋಕಸಭೆ ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಅವರು ಹೇಳಿದರು.

ಯಮಕನಮರಡಿ ಮತಕ್ಷೇತ್ರದ ಕು-ರಿಹಾಳ, ಬೋಡಕೇನಹಟ್ಟಿ ಗ್ರಾಮದಲ್ಲಿ ಹಮ್ಮಿಕೊಂಡಿದ್ದ ಕಾಂಗ್ರೆಸ್ ಕಾರ್ಯಕರ್ತರ ಸಭೆಯಲ್ಲಿ ಮನೆ ಮನೆಗೆ ತೆರಳಿ ಮತಯಾಚಿಸಿ ಮಾತನಾಡಿದ ಅವರು,



ಯುವ ವರ್ಗವನ್ನು ರಾಜಕೀಯವಾಗಿ ಬೆಳೆಸಬೇಕೆಂದು ಕಾಂಗ್ರೆಸ್ ಪಕ್ಷ ನಿರ್ಧ-ರಿಸಿದ್ದು, ನಿವೆಲ್ಲರೂ ಚಿಕ್ಕೋಡಿ ಲೋಕಸಭೆ ಕಾಂಗ್ರೆಸ್ ಪಕ್ಷದ ಅಧಿಕೃತ ಅಭ್ಯರ್ಥಿಯಾದ ನನ್ನನ್ನು ಆಶೀರ್ವದಿಸುವ ಮೂಲಕ ಕಾಂಗ್ರೆಸ್ ಪಕ್ಷದ ಬಾವುಟ ಹಾರಿಸಬೇಕೆಂದು ಮನವಿ ಮಾಡಿದರು.

ಕಾಂಗ್ರೆಸ್ ಪಕ್ಷ ಅಲ್ಪಸಂಖ್ಯಾತ, ಹಿಂದುಳಿದ ವರ್ಗ, ದಲಿತರು, ಬಡವರು ಮತ್ತು ಮಹಿಳೆಯರು ಸೇರಿದಂತೆ ಎಲ್ಲ ವರ್ಗಗಳಿಗೆ ಸಮಾನ ಸ್ಥಾನಮಾನ ನೀಡಿದೆ. ರಾಜ್ಯ ಸರ್ಕಾರ ಗ್ಯಾರಂಟಿ ಯೋಜನೆಗಳನ್ನು ನೀಡುವ ಮೂಲಕ ಸರ್ವರನ್ನು ಅಭಿವೃದ್ಧಿಯತ್ತ ಕೊಂಡ್ಯೊಯ್ಯುತ್ತಿದೆ. ಆದರೆ ಕೇಂದ್ರ ಬಿಜೆಪಿ ಸರ್ಕಾರ ಜನ ವಿರೋಧಿ ನೀತಿ ಅನುಸರಿಸುತ್ತಿದೆ. ಆದ-ರಿಂದ ಲೋಕಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಬೇಕೆಂದು ತಿಳಿಸಿದರು.

ಇದೇ ವೇಳೆ ಚಿಕ್ಕೋಡಿ ಲೋಕಸಭೆ ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಅವರನ್ನು ಮಹಿಳೆಯರು ಅದ್ದೂರಿಯಾಗಿ ಸ್ವಾಗತಿಸಿ, ಸತ್ಕರಿಸಿದರು.

ಈ ಸಂದರ್ಭದಲ್ಲಿ ಕುರಿಹಾಳ, ಬೋಡಕೇನಹಟ್ಟಿ ಗ್ರಾಮದ ಕಾಂಗ್ರೆಸ್ ಪಕ್ಷದ ಮುಖಂಡರು, ಮಹಿಳೆಯರು, ಯುವಕ, ಯುವತಿಯರು ಇದ್ದರು.

## ಬೂತ್ ಮಟ್ಟದಲ್ಲಿ ಪಕ್ಷ ಸಂಘಟಿಸಿ, ಸರ್ಕಾರದ ಯೋಜನೆ ಜನತೆಗೆ ತಿಳಿಸಿ: ಸಚಿವ ಸತೀಶ್ ಜಾರಕಿಹೊಳಿ



ರಾಯಬಾಗ: ಕಾರ್ಯಕರ್ತರು ಬೂತ್ ಮಟ್ಟದಲ್ಲಿ ಪಕ್ಷವನ್ನು ಸಂಘಟಿಸಿ, ಮನೆ ಮನೆಗೆ ತೆರಳಿ ರಾಜ್ಯ ಸರ್ಕಾರ ಜಾರಿಗೆ ತಂದಿರುವ ಪಂಚ ಗ್ಯಾರಂಟಿಗಳನ್ನು ಜನತೆಗೆ ತಿಳಿಸಿ, ಕಾಂಗ್ರೆಸ್ ಪಕ್ಷಕ್ಕೆ ಬೆಂಬಲಿಸುವಂತೆ ಮನವಿ ಮಾಡಬೇಕೆಂದು ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿ ಅವರು ಹೇಳಿದರು.

ಕುಡಚಿ ವಿಧಾನಸಭಾ ಕ್ಷೇತ್ರದ ಮೊರಬ, ನಿಡಗುಂದಿ ಹಾಗೂ ಅಳಗವಾಡಿ ಗ್ರಾಮಗಳಲ್ಲಿ ಹಮ್ಮಿಕೊಂಡಿದ್ದ ಕಾಂಗ್ರೆಸ್ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿದ ಅವರು, ಕುಡಚಿ ವಿಧಾನಸಭಾ ಕ್ಷೇತ್ರದಲ್ಲಿ ವ್ಯಕ್ತವಾದ ಜನ ಬೆಂಬಲ ನೋಡಿದರೆ, ಚಿಕ್ಕೋಡಿ ಲೋಕಸಭಾ ಕ್ಷೇತ್ರದಲ್ಲಿ ಪ್ರಿಯಾಂಕಾ ಜಾರಕಿಹೊಳಿ ಅವರು ಭಾರೀ ಅಂತರದಲ್ಲಿ ಗೆಲ್ಲುತ್ತಾರೆ ಎಂಬ ವಿಶ್ವಾಸ ಮೂಡಿದೆ. ಹೀಗಾಗಿ ಕಾಂಗ್ರೆಸ್ ಪಕ್ಷ ಮಾಡಿದ ಅಭಿವೃದ್ಧಿ ಕಾರ್ಯಗಳನ್ನು ಮುಂದಿಟ್ಟುಕೊಂಡು ಚುನಾವಣೆ ಎದುರಿಸೋಣ ಎಂದು ತಿಳಿಸಿದರು.

ಸಿಎಂ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ರೈತರು, ಕಾರ್ಮಿಕರು, ಹಿಂದುಳಿದವರು, ಬಡವರು ಸೇರಿದಂತೆ ಎಲ್ಲಾ ಸಮುದಾಯಗಳ ಅಭಿವೃದ್ಧಿಗೆ ಸಮಾನ ಅವಕಾಶ ನೀಡಿದೆ. ಕಾಂಗ್ರೆಸ್ ಸರಕಾರ ಸರ್ವ ಸಮುದಾಯಗಳ ಬಗ್ಗೆ ಅಪಾರ ಕಾಳಜಿ ಹೊಂದಿದ್ದು, ನಿಮ್ಮೆಲ್ಲರ ಬೆಂಬಲವನ್ನು ಕಾಂಗ್ರೆಸ್ ಪಕ್ಷಕ್ಕೆ ನೀಡಿ ಚಿಕ್ಕೋಡಿ ಲೋಕಸಭೆ ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಅವರನ್ನು ಬಹು ಅಂತರದಿಂದ ಗೆಲ್ಲಿಸಬೇಕೆಂದು ಕರೆ ನೀಡಿದರು.

ಮಾಜಿ ಪ್ರಧಾನಿ ಇಂದಿರಾ ಗಾಂಧಿ ಸೇರಿದಂತೆ ಕಾಂಗ್ರೆಸ್ ನೇತೃತ್ವದ ಸರ್ಕಾರದಲ್ಲಿ ಹಲವು ಪ್ರಧಾನಿಗಳು ಈ ದೇಶಕ್ಕೆ ಅನೇಕ ಯೋಜನೆಗಳನ್ನು ನೀಡುವ ಮೂಲಕ ಈ ದೇಶವನ್ನು ಕಟ್ಟಿದ್ದಾರೆ. ಅನೇಕ ನೀರಾವರಿ ಯೋಜನೆ ನೀಡಿದ್ದಾರೆ. ವಿಶ್ವ ವಿದ್ಯಾಲಯಗಳನ್ನು ಸ್ಥಾಪಿಸಿದ್ದಾರೆ. ಅದಕ್ಕಾಗಿ ದೇಶಕ್ಕೆ ಅಪಾರ ಕೊಡುಗೆ ನೀಡಿದ ಕಾಂಗ್ರೆಸ್ ಪಕ್ಷದವನ್ನು ಬೆಂಬಲಿಸಬೇಕೆಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಶಾಸಕರಾದ ಮಹೇಂದ್ರ ತಮ್ಮಣ್ಣವರ, ಮಾಜಿ ಶಾಸಕರಾದ ಎಸ್.ಬಿ. ಘಾಟಗೆ ಸೇರಿದಂತೆ ರಾಯಬಾಗ, ಕುಡಚಿ ಮತಕ್ಷೇತ್ರದ ಅನೇಕ ಕಾಂಗ್ರೆಸ್ ಮುಖಂಡರು, ಯುವಕರು, ಮಹಿಳೆಯರು ಉಪಸ್ಥಿತರಿದ್ದರು.

## ಏ.13 ರಂದು ಮತಗಟ್ಟೆ ಅಧಿಕಾರಿಗಳಿಗೆ ತರಬೇತಿ; ಆದೇಶ ಪಡೆದ ಎಲ್ಲ ಅಧಿಕಾರಿ, ಸಿಬ್ಬಂದಿಗಳು ತರಬೇತಿಗೆ ಹಾಜರಾಗುವುದು ಕಡ್ಡಾಯ

ಧಾರವಾಡ: ಧಾರವಾಡ ಲೋಕಸಭೆ ಸಾರ್ವತ್ರಿಕ ಚುನಾವಣೆಗೆ ಸಂಬಂಧಿಸಿದಂತೆ ಮತದಾನದ ದಿನದಂದು ಮತ ಗಟ್ಟೆಗಳಲ್ಲಿ ಕಾರ್ಯನಿರ್ವಹಿಸಲು ಅಧಿಕಾರಿ, ಸಿಬ್ಬಂದಿಗಳಿಗೆ ನೇಮಿಸಿ, ಈಗಾಗಲೇ ಆದೇಶ ಪತ್ರ ನೀಡಲಾಗಿದೆ. ಎಪ್ರಿಲ್ 13 ರಂದು ಬೆಳಿಗ್ಗೆ 10 ಗಂಟೆಗೆ ತಮ್ಮ ಆದೇಶ ಪತ್ರದಲ್ಲಿ ತಿಳಿಸಿರುವ ಸ್ಥಳಗಳಿಗೆ ಕಡ್ಡಾಯವಾಗಿ ಹಾಜರಾಗಿ, ತರಬೇತಿ ಪಡೆಯಬೇಕೆಂದು ಜಿಲ್ಲಾ ಚುನಾವಣಾಧಿಕಾರಿಗಳು ಆಗಿರುವ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಧಾರವಾಡ ಲೋಕಸಭಾ ಮತಕ್ಷೇತ್ರದ ಎಂಟು ವಿಧಾನಸಭಾ ವ್ಯಾಪ್ತಿಯಲ್ಲಿ 1660 ಮತಗಟ್ಟೆಗಳಿವೆ. ಇವುಗಳಲ್ಲಿ ಪಿ.ಆರ್.ಓ., ಎ.ಪಿ.ಆರ್.ಓ ಮತ್ತು ಪಿ.ಓ.ಗಳಾಗಿ ಕರ್ತವ್ಯ



ನಿರ್ವಹಿಸಲು ಒಟ್ಟು 8,782 ಜನ ಅಧಿಕಾರಿ, ಸಿಬ್ಬಂದಿಗಳು ಅಗತ್ಯವಿದೆ.

ಮತಗಟ್ಟೆಗಳಲ್ಲಿ ಕರ್ತವ್ಯ ನಿರ್ವಹಿಸಲು ಅಗತ್ಯವಿರುವ ಸಿಬ್ಬಂದಿಗಳನ್ನು ನೇಮಿಸಿ, ಈಗಾಗಲೇ ಆದೇಶ ಜಾರಿ ಮಾಡಲಾಗಿದೆ. ಕೆಲವರು ಆರೋಗ್ಯ ಮತ್ತು ಇತರ ಕಾರಣಗಳಿಗಾಗಿ ಕರ್ತವ್ಯದಿಂದ ವಿನಾಯಿತಿ ಕೇಳಿದ್ದಾರೆ. ಇಂತಹ ಅರ್ಜಿಗಳನ್ನು ಚುನಾವಣಾ ಆಯೋಗದ ನಿಯಮಗಳ ಅನುಸಾರ ಪರಿಶೀಲಿಸಲಾಗುತ್ತಿದೆ ಎಂದು ಅವರು ತಿಳಿಸಿದ್ದಾರೆ.

ಪಿ.ಆರ್.ಓ., ಎಪಿ.ಆರ್.ಓ ಮತ್ತು ಪಿ.ಓ.ಗಳು ಕರ್ತವ್ಯಕ್ಕೆ ನಿಯೋಜಿಸಿ ಆದೇಶಿಸಿರುವ ಅಧಿಕಾರಿ ಮತ್ತು ಸಿಬ್ಬಂದಿಗಳು ಏಪ್ರಿಲ್ 13 ರಂದು ತರಬೇತಿಗೆ ಕಡ್ಡಾಯವಾಗಿ ಹಾಜರಾಗಬೇಕು. ನಿಯಮಾನುಸಾರ ಕರ್ತವ್ಯದಿಂದ ವಿನಾಯಿತಿ ನೀಡಿದವರ ಬಗ್ಗೆ ಆಯಾ ಸಹಾಯಕ ಚುನಾವಣಾಧಿಕಾರಿಗಳು ಮಾಹಿತಿ ನೀಡುತ್ತಾರೆ.

## ಬಾಲ್ಯದಲ್ಲಿ ಉತ್ತಮ ಶಿಕ್ಷಣ ಲಭಿಸಿದರೆ ಮಕ್ಕಳ ಭವಿಷ್ಯ ಉಜ್ವಲ: ಜೆ.ಎಸ್ ಸಂತೋಷ್

ಬೆಂಗಳೂರು: ಮಕ್ಕಳಿಗೆ ಚಿಕ್ಕ ವಯಸ್ಸಿನಲ್ಲಿ ಉತ್ತಮ ಶಿಕ್ಷಣ ಹಾಗೂ ಸಂಸ್ಕಾರ ಲಭಿಸಿದರೆ ಭವಿಷ್ಯದಲ್ಲಿ ಉತ್ತಮ ಪ್ರಜೆಗಳಾಗಿ ರೂಪುಗೊಳ್ಳಲು ಸಾಧ್ಯ ಎಂದು ಎ ಕಿಡ್ಸ್ ಮಾಂಟೆಸರಿ ಶಾಲೆಯ ಪ್ರಾಂಶುಪಾಲ ಜೆ.ಎಸ್ ಸಂತೋಷ್ ಅಭಿಪ್ರಾಯಪಟ್ಟರು.

ಬೆಂಗಳೂರು ನಗರದ ಅತ್ತಿಬೆಲೆಯ ಎ ಕಿಡ್ಸ್ ಮಾಂಟೆಸರಿ ಶಾಲೆಯ ವಾರ್ಷಿಕೋತ್ಸವ ಹಾಗೂ ಚಿಣ್ಣರ ಘಟಿ-ಕೋತ್ಸವ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಇವರು. ಭಾರತೀಯ ಶಿಕ್ಷಣ ವ್ಯವಸ್ಥೆ ತನ್ನದೇ ವೈಶಿಷ್ಟ್ಯ ಹೊಂದಿದೆ. ಇಂದಿನ ಮಕ್ಕಳು ಮೋಬೈಲ್ ಸೇರಿದಂತೆ ಬೇಡವಾದ ವಿಶಯಗಳಿಗೆ ಗಮನಹ-




ರಿಸುವುದು ಸಾಮಾನ್ಯವಾಗಿದೆ. ಶಿಕ್ಷಕರು ಮಕ್ಕಳ ಭವಿಷ್ಯ ರೂಪಿಸುವ ನಿಟ್ಟಿನಲ್ಲಿ ಬಾಲ್ಯದಲ್ಲೇ ಸಂಸ್ಕಾರಯುತ ಶಿಕ್ಷಣ ನೀಡುವ ಅವಶ್ಯಕತೆ ಇದೆ ಎಂದರು.

ಖ್ಯಾತ ವಿಜ್ಞಾನಿ ಡಾ. ಅಬ್ದುಲ್ ಕಲಾಂ ಅವರು ಹೇಳಿದಂತೆ. ಕಲಿಕೆಯು ನಿಮಗೆ ಸೃಜನಶೀಲತೆಯನ್ನು ನೀಡುತ್ತದೆ, ಸೃಜನಶೀಲತೆಯು ಚಿಂತನೆಗೆ ಕಾರಣವಾಗುತ್ತದೆ, ಆಲೋಚನೆಯು ಜ್ಞಾನವನ್ನು ನೀಡುತ್ತದೆ, ಜ್ಞಾನವು ನಿಮ್ಮನ್ನು ಶ್ರೇಷ್ಠರನ್ನಾಗಿ ರೂಪಿಸಲು ಸಹಕಾರಿಯಾಗುತ್ತದೆ. ಇದು ಅತ್ಯಂತ ಶ್ರೇಷ್ಠವಾದ ಮಾತು. ಮಕ್ಕಳನ್ನು ಕೇವಲ ವಿದ್ಯಾವಂತರನ್ನಾಗಿ ಮಾಡದೆ, ದೇಶದ ಆಸ್ತಿಯನ್ನಾಗಿ ರೂಪಿಸುವುದು ಮುಖ್ಯ ಎಂದು ಹೇಳಿದರು.

ಈ ಸಂದರ್ಭದಲ್ಲಿ ಶಾಲೆಯ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು. ಮಕ್ಕಳಿಗೆ ಮಕ್ಕಳಿಗೆ ಶೈಕ್ಷಣಿಕ ಪ್ರಮಾಣ ಪತ್ರ ವಿತರಿಸಲಾಯಿತು. ಕಾರ್ಯಕ್ರಮದಲ್ಲಿ ಮಕ್ಕಳ ಪೋಷಕರು, ಶಾಲೆಯ ಸಿಬ್ಬಂದಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಬೆಳಗಾವಿ ಲೋಕ ಸಭಾಕ್ಷೇತ್ರದ ವ್ಯಾಪ್ತಿಯ ಅರಭಾವಿ ವಿಧಾನ ಸಭಾಕ್ಷೇತ್ರದ ಬೂತ್ ಮಟ್ಟದ ಕಾರ್ಯಕರ್ತರ ಸಮಾವೇಶ

ಬೆಳಗಾವಿ: ಲೋಕ ಸಭಾಚುನಾವಣೆ ಅಂಗವಾಗಿ ಅನಿಲ ಬೆನಕೆ ಅವರುಬೆಳಗಾವಿ ಲೋಕ ಸಭಾಕ್ಷೇತ್ರದ ವ್ಯಾಪ್ತಿಯ ಅರಭಾವಿ ವಿಧಾನಸಭಾ ಕ್ಷೇತ್ರದ ಬೂತ್ ಮಟ್ಟದ ಕಾರ್ಯಕರ್ತರ ಸಮಾವೇಶವನ್ನು ಬೆಳಗಾವಿ ಬಿಜೆಪಿ ಲೋಕಸಭಾ ಅಭ್ಯರ್ಥಿ ಶ್ರೀ. ಜಗದೀಶ ಶೇಟ್ಟರಅವರೊಂದಿಗೆ ಉದ್ಘಾಟಿಸಿ, ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದರು.

ಮಾನ್ಯ ಪ್ರಧಾನಮಂತ್ರಿಗಳಾದ ಶ್ರೀ ನರೇಂದ್ರ ಮೋದಿಜೀ ಅವರನ್ನು ಮೂರನೇ ಬಾರಿಗೆ ಪ್ರಧಾನ ಮಂತ್ರಿಗಳಾಗಿ ಆಯ್ಕೆ ಮಾಡುವ ನಿಟ್ಟಿನಲ್ಲಿ ಕಮಲದ ಗುರುತಿಗೆ ನಿಮ್ಮ ಮತವನ್ನು ನೀಡಿ ಆಶೀರ್ವಾದ ಮಾಡಿ, ದಿನದ 24/7 ಕಾರ್ಯನಿರ್ವಹಿಸುವ ಪ್ರಧಾನಮಂತ್ರಿಗಳಾದ ನರೇಂದ್ರ ಮೋದಿಜೀಅವರನ್ನು ನಾವೆಲ್ಲರೂ ಬೆಂಬಲಿಸೋಣ ಎಂದು ಅನಿಲ ಬೆನಕೆ ಮನವಿ ಮಾಡಿಕೋಂಡರು.



ಈ ಸಂದರ್ಭದಲ್ಲಿ ಶಾಸಕರಾದ ಬಾಲಚಂದ್ರ ಜಾರಕಿಹೋಳಿ, ಸಂಸದರಾದ ಮಂಗಲಾ ಅಂಗಡಿ, ಜಿಲ್ಲಾಧ್ಯಕ್ಷರಾದ ಸುಭಾಶ ಪಾಟೀಲ, ರಾಜ್ಯಉಪಾಧ್ಯಕ್ಷರಾದ ಅನಿಲ ಬೆನಕೆ, ಹಿರಿಯರಾದ ಎಂ.ಬಿ. ಜಿರಲಿ, ಸಂಚಾಲಕರಾದ ಸಂಜಯ ಪಾಟೀಲ, ವಿಜಯಗುಡದಾರಿ, ಗೋವಿಂದಕೊಪ್ಪದ, ಪ್ರಮುಖರಾದ ಸರ್ವೋತ್ತಮ ಜಾರಕಿಹೊಳಿ, ಶ್ರೀ ಮಹಾದೇವ ಶಕ್ಕಿ, ಶಂಕರ ಮಾಡಲಗಿ, ಸೇರಿದಂತೆ ಸ್ಥಳೀಯ ಮುಖಂಡರು, ಪಕ್ಷದ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ಕಾಂಗ್ರೇಸ್ ನೆತೃತ್ವದ ಸಿದ್ದರಾಮಯ್ಯ ಸರ್ಕಾರ ರೈತ ವಿರೋಧಿ ಸರ್ಕಾರ: ಎಫ್.ಎಸ್. ಸಿದ್ದನಗೌಡರ

ಬೆಳಗಾವಿ: ರಾಜ್ಯದಲ್ಲಿ ಅಧಿಕಾರಕ್ಕೆ ಬಂದಂತಹ ಕಾಂಗ್ರೆಸ್ ನೆತೃತ್ವದ ಸಿದ್ದರಾಮಯ್ಯ ಸರ್ಕಾರ ರೈತ ವಿರೋಧಿ ಸರ್ಕಾರವಾಗಿದ್ದು ಕೃಷಿಯನ್ನು ಸಂಪೂರ್ಣವಾಗಿ ನೆಲಕಚ್ಚಿಸುವ ಸಂಕಲ್ಪ ಮಾಡಿದಂತಿದೆ ಎಂದು ರಾಜ್ಯ ಬಿಜೆಪಿ ಮಾಧ್ಯಮ ಸಮಿತಿ ಸದಸ್ಯ ಎಫ್.ಎಸ್. ಸಿದ್ದನಗೌಡರ ಹೇಳಿದ್ದಾರೆ.

ಸೋಮವಾರ ಪತ್ರಿಕಾ ಪ್ರಕಟಣೆ ಹೊರಡಿಸಿದ ಅವರು, ರೈತ ನಾಯಕ ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪನವರು ಸರ್ಕಾರದಲ್ಲಿ ಕೇಂದ್ರ ಸರ್ಕಾರದ ಕಿಸಾನ ಸಮ್ಮಾನ್ ಯೋಜನೆಯ 6 ಸಾವಿರ ರೂಪಾಯಿಯೊಂದಿಗೆ ರಾಜ್ಯದಿಂದ 4 ಸಾವಿರ ರೂಪಾಯಿ ನೀಡುತ್ತಾ ರಾಜ್ಯದ ರೈತರಿಗೆ ಆಸರೆಯಾಗಿತ್ತು. ಬರಗಾಲದ ಪರಸ್ಥಿತಿಯಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ನಂತರ 4 ಸಾವಿರ ರೂ ನೀಡುವುದನ್ನು ತಡೆಹಿಡೆದರು. ಬಸವರಾಜ ಬೊಮ್ಮಾಯಿಯವರು ಮುಖ್ಯಮಂತ್ರಿಯಾದ ಸಮಯದಲ್ಲಿ ರೈತರ ಮಕ್ಕಳ ವಿಧ್ಯಾಭ್ಯಾಸದ ಅನಕೂಲಕ್ಕಾಗಿ ವಿದ್ಯಾನಿಧಿ ಯೋಜನೆಯನ್ನು ಜಾರಿಗೆ ತಂದರು ಇದಕ್ಕೆ ಹಣನೀಡದೆ ರೈತರ ಮಕ್ಕಳ ಶಿಕ್ಷಣಕ್ಕೆ ಬರೆ ಹಾಕಿದ್ದಾರೆ. ಹಾಲು ಉತ್ಪಾದಕರಿಗೆ ಸಾವಿರದ ಎರಡನೂರು ಕೋಟಿ ರೂ ಗಳನ್ನು ಸಹಾಯ ಧನವನ್ನು ನೀಡಬೇಕಿತ್ತು ಆದ-ರೆ ಸಹಾಯದನವನ್ನು ನೀಡುವ ಯೋಚನೆಯನ್ನು ಇದುವರೆಗೂ ಕಾಂಗ್ರೆಸ್ ಸರ್ಕಾರ ಮಾಡಿಲ್ಲ, ರೈತ-ರಿಗೆ ಬಲ ನೀಡುವ ನಿಟ್ಟಿನಲ್ಲಿ ರೈತ-ರಿಗೆ ಅನುಕೂಲವಾಗಲೇಂದು ಯಡಿಯೂರಪ್ಪನವರು "ನನ್ನ ಬೆಳೆ - ನನ್ನ ಹಕ್ಕು" ಅಡಿಯಲ್ಲಿ ಎ.ಪಿ.ಎಂ.ಸಿ ಕಾಯ್ದೆ ಜಾರಿಗೆ ತಂದರು ಆದರೆ ಕಾಂಗ್ರೆಸ್ ಸರ್ಕಾರ ಕಾಯ್ದೆಯನ್ನು ತಿದ್ದುಪಡಿಗೊಳಿಸಿ ಮಾರಕವಾದ ಕಾಯ್ದೆ ಜಾರಿಗೆ ತಂದು ರೈತರಿಗೆ ಅನ್ಯಾಯ ಮಾಡಿದೆ.

ಕೃಷಿಗೆ ಮಿಸಲಿಟ್ಟಂತಹ 840 ಕೋಟಿ ಹಣವನ್ನು ಹಾಗೂ ಗ್ರಾಮೀಣಭಿವೃದ್ಧಿಯ 759 ಕೋಟಿ ಹಣವನ್ನು ತಮ್ಮ ಶಕ್ತಿ ಯೋಜನೆಗಳಿಗೆ ಮಿಸಲಿಟ್ಟರು, ಬರ ನಿರ್ವಹಣೆಯಲ್ಲಿ ಕರ್ನಾಟಕ ಬಹಳ ಚಿಂತಾಜನಕ ಸ್ಥಿತಿಯಲ್ಲಿದೆ ರಾಜ್ಯದ 236 ತಾಲೂಕಿನ ಪೈಕಿ 223 ತಾಲೂಕು ಬರವನ್ನು ಎದುರಿಸುತ್ತಿದ್ದಾರೆ. ಈ ಪೈಕಿ 194 ತಾಲೂಕುಗಳು ತೀವ್ರತರವಾದಂತಹ ಬರವನ್ನು ಎದುರಿಸುತ್ತಿದ್ದಾವೆ ಸರ್ಕಾರ ಈ ಬರ ನಿರ್ವಹಣೆಗೆ ಯಾವುದೇ ರೀತಿಯ ಕ್ರಿಯಾತ್ಮಕವಾದ ಯೋಜನೆಯಾಗಲಿ, ಸಚಿವರ ಪ್ರವಾಸವಾಗಲಿ, ರೈತರ ಸಮಸ್ಯೆಯನ್ನು ಕೇಳುವಂತಾಗಲಿ ಯಾವುದೇ ರೀತಿಯ ಕಾರ್ಯಚಟುವಟಿಕೆಗೆ ಜಿಲ್ಲಾ ಸಚಿವರು ಹೋಗದೆ ಇರುವುದು ರೈತರನ್ನು ಅನಾಥರನ್ನಾಗಿಸಿದೆ. ಈಗಾಗಲೆ ತಾಪಮಾನ 40% ಗೆ ಹೋಗಿದೆ ಬೊರವೇಲ್‌ಗಳು ಬತ್ತಿ ಒಣಗಿ



ಹೋಗಿವೆ ಹೊಸ ಬೊರವೇಲ್‌ಗಳನ್ನು ರೈತ ಈ ಹಿಂದೆ ಕೊರೆಸಲು ಹೋದರೆ ಅಡಿಗೆ 70 ರೂ ರಿಂದ 80 ರೂ ವರೆಗೆ ಖರ್ಚು ತಗಲುತಿತ್ತು ಆದರೆ ಇಂದು ಕೊರೆಸಲು 150 ರಿಂದ 160 ರೂ ಗಳಿಗೆ ಹೋಗಿ ನಿಂತಿದೆ ಅದನ್ನು ಸರಿಪಡಿಸುವ ವ್ಯವಸ್ಥೆಗೆ ಕಾಂಗ್ರೆಸ್ ಸರ್ಕಾರ ಹೋಗಿಲ್ಲ ಇದುವರೆಗು ಸಮಾರು 35167 ಕೋಟಿ ಬೆಳೆ ನಷ್ಟವಾಗಿದೆ ರೈತನ ಆತ್ಮ ಹತ್ಯೆಯಲ್ಲಿ ಕರ್ನಾಟಕ ರಾಜ್ಯ 2 ನೇ ಸ್ಥಾನದಲ್ಲಿದೆ.

ಆತ್ಮಹತ್ಯೆ ಮಾಡಿಕೊಂಡ ರೈತರ ಕುಟುಂಬಕ್ಕೆ ಪರಿಹಾರ ನೀಡದೆ ಕುಂಟ ನೆಪ ಹೇಳಿ ಹೆಚ್ಚಿನ ಸಂಖ್ಯೆಯ ಕುಟುಂಬಕ್ಕೆ ಪರಿಹಾರ ನೀಡದೆ ತಿರಸ್ಕಾರ ಮಾಡುವದರೊಂದಿಗೆ ಆತ್ಮಹತ್ಯೆ ಮಾಡಿಕೊಂಡ ರೈತರ ಕುಟುಂಬ ಕಣ್ಣಿರಿನಲ್ಲಿ ಕೈತೊಳೆಯುವಂತಾಗಿದೆ. ಹೀಗೆ ಒಟ್ಟಾರೆಯಾಗಿ ರಾಜ್ಯದ ರೈತನ ಪರಿಸ್ಥಿತಿಯನ್ನು ನೋಡಿದರೆ ಇದೊಂದು ರೈತ ವಿರೋಧಿ ಸರ್ಕಾರ ಅಂತಾ ಅತ್ಯಂತ ನೊವಿನಿಂದ ಹೇಳಲು ಬಯಸುತ್ತೇನೆ. ಇದು ಕೇವಲ ರೈತ ವಿರೋಧಿ ಸರ್ಕಾರವಲ್ಲ ಇದೊಂದು ಹಿಂದೂ ವಿರೋಧಿ ಸರ್ಕಾರ ಹಾಗೂ ಹೆಚ್ಚಾಗಿ ತುಷ್ಟೀಕರಣದ ಪ್ರೇಮದ ಸರ್ಕಾರವಾಗಿದೆ.

ತುಷ್ಟೀಕರಣ ಮಾಡುವುದೆಂದರೆ ಕಾಂಗ್ರೆಸ್ ನವರಿಗೆ ಬಹಳ ಖುಷಿ ಬೆಂಗಳೂರಿನಲ್ಲಿ ನಡೆದಂತಹ ಹನುಮಾನ ಚಾಲಿಸ ಹಾಕಿದಂತಹ ಅಂಗಡಿಯವನ ಮೇಲೆ ಅಲ್ಪಸಂಖ್ಯಾತರು ಬಂದು ದಾಳಿ ಮಾಡಿದಾಗ ಘಟನೆಯನ್ನು ಸರಿಯಾಗಿ ತನಿಖೆ ಮಾಡದೆ ಬದಲಾಗಿ ಅದನ್ನು ವಿರೋಧಿಸಲು ಹೋದ ಬಿಜೆಪಿ ನಾಯಕರ ಮೇಲೆ ಲಾಠಿ ಚಾರ್ಜ್ ಮಾಡಿಸಿ ಕೇಸ್ ಕೂಡಾ ದಾಖಲಿಸಿದರು. ಎಲ್ಲೂ ಕೂಡಾ ಆ ಘಟನೆ ತಪ್ಪು ಅಂತಾ ತುಟಿ ಬಿಚ್ಚಲಿಲ್ಲ ಹಾಗೂ ಮಂಡ್ಯದ ಕೆರೆಕೋಡಿನಲ್ಲಿ ಭಗವಾ ಧ್ವಜವನ್ನು ಅಲ್ಲಿನ ಶಾಸಕ ಕಿತ್ತು ಹಾಕಿಸಿದ್ದು ಈ ಕುರಿತು ರಾಜ್ಯ ಹೈಕೋರ್ಟ್ ಛೀಮಾರಿ ಹಾಕಿದೆ.

ಮುಜಾರಾಯಿ ಇಲಾಖೆಯಲ್ಲಿ 1 ಕೋಟಿಗೂ ಅಧಿಕ ವರಮಾನವಿರುವ ದೊಡ್ಡ - ದೊಡ್ಡ ಹಿಂದೂ ದೇವಸ್ಥಾನಗಳ ಶೇಕಡಾ 10 ರಷ್ಟು ಹಣವನ್ನು ಸರ್ಕಾರಕ್ಕೆ ನೀಡುವಂತ ಆದೇಶ ಹೊರಡಿಸಿದರು, ವಿಧಾನಸೌಧದಲ್ಲಿ ದೇಶವಿರೊಧಿ ಘೋಷಣೆ ಕೂಗಿ ಪರೋಕ್ಷವಾಗಿ ಪಾಕಿಸ್ತಾನವನ್ನು ಬೆಂಬಲಿಸುವುದು ಅಲ್ಪಸಂಖ್ಯಾತರು ತಾವು ರಾಜ್ಯದಲ್ಲಿ ಏನು ಮಾಡಿದರು ಆರಾಮವಾಗಿ ಜೈಲನಿಂದ ಪೋಲಿಸ ಠಾಣೆಯಿಂದ ಸುಲಭವಾಗಿ ಹೋರಗೆ ಬರಬಹುದು ನಮ್ಮ ರಕ್ಷಣಗೆ ಕಾಂಗ್ರೆಸ್ ಸರ್ಕಾರ ಇದೆ ಅನ್ನುವ ಪಟ್ಟಭದ್ರ ಮಾನಸಿಕತೆಯಿಂದ ಇವತ್ತು ಅವರ ಆರ್ಭಟ ಜೋರಾಗಿದೆ,ಬೆಳಗಾವಿಯಲ್ಲಿ ಬಸ್ ಚಾಲಕನಿಗೆ ನಡು ಬೀದಿಯಲ್ಲಿ ಎರ್ ಗನ್ ತೋರಿಸಿರುವ ಪ್ರಕರಣ ಜನರಲ್ಲಿ ಭಯ ಮೂಡಿಸುತ್ತಿದೆ. ಚುನಾವಣೆಯಲ್ಲಿ ಕೊಟ್ಟಂತಹ ಆಶ್ವಾಸನೆ ಈಡೇರಿಕೆಗಾಗಿ 34 ಸಾವಿರ ಕೋಟಿ ಎಸ್.ಸಿ, ಎಸ್.ಟಿ ಸಮುದಾಯದ ಹಣವನ್ನು ಬೇರೆ ಬೇರೆ ಕೆಲಸ ಕಾರ್ಯಗಳಿಗೆ ವರ್ಗಾವಣೆ ಮಾಡುವ ಮೂಲಕ ದಲಿತ ವಿರೋಧಿ ಸರ್ಕಾರವಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಾಂಗ್ರೆಸ್ ಬಡವರ ಪರ ಪಕ್ಷ: ಕೈ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ

ಬೆಳಗಾವಿ: ಕಾಂಗ್ರೆಸ್‌ಗೆ ಪೂರಕ ವಾತಾವರಣವಿದ್ದು, ಈ ಭಾರಿ ಚಿಕ್ಕೋಡಿ ಲೋಕಸಭಾ ಅಭಿವೃದ್ಧಿಗೆ ನನಗೆ ಮತ ನೀಡಬೇಕು ಎಂದು ಚಿಕ್ಕೋಡಿ ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಮನವಿ ಮಾಡಿದರು.

ಚಿಕ್ಕೋಡಿ ಲೋಕಸಭೆ ವ್ಯಾಪ್ತಿಯ ಯಮಕನಮರಡಿ ವಿಧಾನಸಭಾ ಕ್ಷೇತ್ರದ ಹಗೇದಾಳ ಹಾಗೂ ಶಿರೂರು ಗ್ರಾಮದಲ್ಲಿ ಹಮ್ಮಿಕೊಂಡ ಪ್ರಚಾರ ಸಭೆಯಲ್ಲಿ ಮಾತನಾಡಿದ ಅವರು, ರಾಜ್ಯ ಸರ್ಕಾರ ಗ್ಯಾರಂಟಿ ಯೋಜನೆಗಳನ್ನು ನೀಡುವ ಮೂಲಕ ಮಹಿಳೆಯರ ಸಬಲೀಕರಣಕ್ಕೆ ಆದ್ಯತೆ ನೀಡುತ್ತಿದೆ. ಕಾಂಗ್ರೆಸ್ ಸರ್ಕಾರ ಕೇಂದ್ರದಲ್ಲಿಯೂ ಅಧಿಕಾರಕ್ಕೆ ಬಂದರೆ ಮಹಿಳೆಯರಿಗೆ ವಿಶೇಷ ಗ್ಯಾರಂಟಿ ಯೋಜನೆಗಳನ್ನು ಘೋಷಿಸುವುದಾಗಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಪಕ್ಷದ ವರಿಷ್ಠರಾದ ರಾಹುಲ್ ಗಾಂಧಿ, ಸೋನಿಯಾ ಗಾಂಧಿ ಈಗಾಗಲೇ ಪ್ರಕಟಿಸಿದ್ದಾರೆ ಎಂದು ತಿಳಿಸಿದರು.

ತಂದೆ, ಸಚಿವರಾದ ಸತೀಶ್ ಜಾರಕಿಹೊಳಿ ಅವರು ಲೋಕೋಪಯೋಗಿ ಇಲಾಖೆ ಸಚಿವರಾಗಿದ್ದು, ಕ್ಷೇತ್ರದ ರಸ್ತೆಗಳ ಅಭಿವೃದ್ಧಿಗೆ ಸಾಕಷ್ಟು ಅನುದಾನ ನೀಡಿದ್ದಾರೆ. ನಿಮ್ಮ ಕ್ಷೇತ್ರದ ಪ್ರಗತಿಗಾಗಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾದ ನನ್ನನ್ನು ಹೆಚ್ಚಿನ ಮತ ನೀಡಿ ಗೆಲ್ಲಿಸಬೇಕೆಂದು ಮನವಿ ಮಾಡಿದ ಅವರು, ನಮ್ಮ ಸರ್ಕಾರ ಬಡವರ ಪರವಾಗಿದ್ದು, ರೈತರ ಬಗ್ಗೆ ಅಪಾರ ಕಾಳಜಿ ಹೊಂದಿದೆ. ಅಧಿಕಾರಕ್ಕೆ



ಬಂದ 10 ತಿಂಗಳಲ್ಲೇ ಘೋಷಿಸಿದ್ದ ಎಲ್ಲಾ ಐದು ಗ್ಯಾರಂಟಿಗಳನ್ನು ಜಾರಿಗೆ ತಂದಿದೆ, ಇದು ನಮ್ಮ ಸರ್ಕಾರದ ಹೆಗ್ಗಳಿಕೆಯಾಗಿದೆ ಎಂದು ಹೇಳಿದರು.

ಕೇಂದ್ರದಲ್ಲಿ ಅಧಿಕಾರವಿದ್ದಾಗ ಕಾಂಗ್ರೆಸ್ ಪಕ್ಷ ವು ಬಡವರು,ದೀನ ದಲಿತರು, ಕಾರ್ಮಿಕ ವರ್ಗದವರಿಗಾಗಿ ಸಾಕಷ್ಟು ಕಲ್ಯಾನ ಯೋಜನೆಗಳನ್ನು ರೂಪಿಸಿತ್ತು, ರಾಜೀವಗಾಂಧಿ ಅಧಿಕಾರವಧಿಯಲ್ಲಿ ದೇಶದ ಪ್ರತಿಯೊಬ್ಬ ತಳಹಂತದ ಜನತೆಗೂ ಅಧಿಕಾರ ಲಭಿಸಬೇಕೆಂಬ ಉದ್ದೆ?ಶದಿಂದ ಪಂಚಾಯತ್ ರಾಜ್ ಕಾನೂನು ಜಾರಿಗೊಳಿಸುವ ಮೂಲಕ ಗ್ರಾಪಂಗಳಿಗೆ ಹೆಚ್ಚಿನ ಅಧಿಕಾರ ನೀಡಿದ್ದಲ್ಲದೇ, ಮೀಸಲಾತಿ ಮೂಲಕ ಸಾಮಾನ್ಯರು ಅಧಿಕಾರ ಪಡೆಯುವಂತಾಯಿತು ಇಂತಹ ಸಂಗತಿಗಳನ್ನು ಬೂತ್ ಮಟ್ಟದಲ್ಲಿ ಮನೆ,ಮನೆಗೆ ತಲುಪಿಸುವ ಕಾರ್ಯವನ್ನು ಕಾರ್ಯಕರ್ತರು ಮಾಡಬೇಕೆಂದರು.

ಬಿಜೆಪಿ ಸರ್ಕಾರದಲ್ಲಿ ಭ್ರಷ್ಟಾಚಾರ ಮಿತಿ ಮೀರಿದೆ. ಯುವಕರಿಗೆ ನಿರುದ್ಯೋಗ ಸಮಸ್ಯೆ ಕಾಡುತ್ತಿದೆ.

ಆದರೆ ಈ ಎಲ್ಲ ಸಮಸ್ಯೆಗಳಿಗೆ ಯಾವ ಬಿಜೆಪಿ ನಾಯಕರು ಸ್ಪಂದಿಸುತ್ತಿಲ್ಲ. ಹೀಗಾಗಿ ಬಿಜೆಪಿ ಕಾರ್ಯತಕರ್ತರು ಕಾಂಗ್ರೆಸ್ ಕಡೆ ಒಲವು ತೋರುತ್ತಿದ್ದಾರೆ ಎಂದು ಅವರು, ಸಿಎಂ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರದ ಯೋಜನೆಗಳನ್ನು ಮೆಚ್ಚಿ ಯುವಕರು ಕಾಂಗ್ರೆಸ್ ಸೇರ್ಪಡೆಯಾಗುತ್ತಿದ್ದಾರೆ. ಹೀಗೆ ಅನೇಕೆ ಯುವಕರು ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾಗಿ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಗೆಲುವಿಗೆ ಶ್ರಮಿಸಬೇಕು ಎಂದು ಕರೆ ನೀಡಿದರು. ಈ ವೇಳೆ ಹಗೇದಾಳ ಗ್ರಾಮದಲ್ಲಿ ನೂರಾರು ಬಿಜೆಪಿ ಕಾರ್ಯಕರ್ತರು ಕೈ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಸಮ್ಮುಖದಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾದರು. ಈ ಸಂದರ್ಭದಲ್ಲಿ ಗ್ರಾಮದ ಹಿರಿಯರು ಪಕ್ಷದ ಮುಖಂಡರು ಹಾಗೂ ನೂರಾರು ಕಾರ್ಯಕರ್ತರು ಉಪಸ್ಥಿತರಿದ್ದರು.

## ಹುಕ್ಕೇರಿಯಲ್ಲಿ ಮತ ಜಾಗೃತಿಗೆ ಮಹತ್ವದ ಹೆಜ್ಜೆ
## ಗಮನ ಸೆಳೆದ ಮಹಿಳೆಯರ ಕುಂಭೋತ್ಸವ, ಚುನಾವಣಾ ಆಯೋಗ ಪ್ರಶಂಸೆ

ಹುಕ್ಕೇರಿ: ಲೋಕಸಭೆ ಸಾರ್ವತ್ರಿಕ ಚುನಾವಣೆ ಹಿನ್ನಲೆಯಲ್ಲಿ ಒಂದಿಲ್ಲೊಂದು ವಿನೂತನ ಯೋಜನೆಗಳನ್ನು ರೂಪಿಸಿ ಮತ ಮಹತ್ವದ ಅರಿವು ಮೂಡಿಸುತ್ತಿರುವ ಹುಕ್ಕೇರಿ ತಾಲೂಕು ಸ್ವೀಪ್ ಸಮಿತಿಯು ಶನಿವಾರ ಮತ್ತೊಂದು ವಿಭಿನ್ನ ಕಾರ್ಯಕ್ರಮ ಆಯೋಜಿಸಿ ಚುನಾವಣಾ ಆಯೋಗದ ಪ್ರಶಂಸೆಗೆ ಪಾತ್ರವಾಯಿತು. ಇದರೊಂದಿಗೆ ವಿಶಿಷ್ಟವಾಗಿ ಮತದಾನ ಜಾಗೃತಿ ಸಾರುವ ಮೂಲಕ ಮಹತ್ವದ ಹೆಜ್ಜೆ ಇಟ್ಟಿದೆ.

ತಾಲೂಕು ಸ್ವೀಪ್ ಸಮಿತಿಯು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಪುರಸಭೆ ಸಹಯೋಗದೊಂದಿಗೆ ಮತದಾನ ಜಾಗೃತಿಗಾಗಿ ಏರ್ಪಡಿಸಿದ ಮಹಿಳೆಯರ ಕುಂಭೋತ್ಸವ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಗಮನ ಸೆಳೆಯಿತು. ಈ ಕುಂಭೋತ್ಸವದಲ್ಲಿ ದೇವದಾಸಿ ಮಹಿಳೆಯರು ಸ್ವಯಂ ಪ್ರೇರಿತರಾಗಿ ಭಾಗಿಯಾಗಿರುವುದು ವಿಶೇಷ



ಎನಿಸಿತು. ಜತೆಗೆ ಸ್ವ-ಸಹಾಯ ಸಂಘ ಸದಸ್ಯೆಯರು, ಗ್ರಾಮ ಕಾಯಕ ಮಿತ್ರರು ಭಾಗವಹಿಸಿ ಕುಂಭೋತ್ಸವದ ಮೆರುಗು ಹೆಚ್ಚಿಸಿದರು. ಕುಂಭೋತ್ಸವಕ್ಕೆ ಚಾಲನೆ ನೀಡಿದ ತಾಪಂ ಇಒ ಟಿ.ಆರ್.ಮಲ್ಲಾಡದ ಮಾತನಾಡಿ, ಮತದಾನ ಮಾಡುವುದು ಪ್ರತಿಯೊಬ್ಬ ನಾಗರಿಕನ ಕರ್ತವ್ಯ. ಪ್ರತಿ ಮತವೂ ಅಮೂಲ್ಯವಾದದ್ದು. ಆದ ಕಾರಣ ಎಲ್ಲರೂ ತಪ್ಪದೇ ಮೇ 7 ರಂದು ಮತಗಟ್ಟೆಗಳಿಗೆ ಹೋಗಿ ಮತದಾನ ಮಾಡಿ ತಮ್ಮ ಹಕ್ಕನ್ನು ಚಲಾಯಿಸಬೇಕು. ಯಾವುದೇ ಆಸೆ ಆಮಿಷಗಳಿಗೆ ಒಳಗಾಗದೇ ನಿರ್ಭಿತಿಯಿಂದ ಮತ ಚಲಾಯಿಸಬೇಕು ಎಂದರು.

ಪ್ರಧಾನಮಂತ್ರಿ ಪೋಷಣ ಶಕ್ತಿ ನಿರ್ಮಾಣ ಯೋಜನೆ ಸಹಾಯಕ ನಿರ್ದೇಶಕಿ ಸವಿತಾ ಹಲಕಿ ಮಾತನಾಡಿ, ಚುನಾವಣಾ ಪರ್ವ-ದೇಶದ ಗರ್ವ ಎಂಬ ಧ್ಯೇಯವಾಕ್ಯದೊಂದಿಗೆ ಪ್ರತಿಯೊಬ್ಬರೂ ಮತದಾನ ಮಾಡಬೇಕು. ಮತದಾನದಿಂದ ಯಾರೊಬ್ಬರೂ ಹೊರಗೆ ಉಳಿಯಬಾರದು. ಮಹಿಳೆಯರು ಪರಿಣಾಕಾರಿಯಾಗಿ ಮತಜಾಗೃತಿ ಮೂಡಿಸಬೇಕು ಎಂದರು.

ಜಿಲ್ಲಾ ದೇವದಾಸಿ ಪುನರ್ವಸತಿ ಯೋಜನೆ ಅನುಷ್ಠಾನ ಅಧಿಕಾರಿ ಅತಿಕಾ ಮುಲ್ಲಾ, ತಾಪಂ ವ್ಯವಸ್ಥಾಪಕ ಅವಿನಾಶ ಹೊಳೆಪ್ಪಗೋಳ, ಅಂಗನವಾಡಿ ಮೇಲ್ವಿಚಾರಕಿಯರಾದ ನಿರ್ಮಲಾ ಕುರಬೇಟ, ಶೋಭಾ ಪಾಟೀಲ, ಗೀತಾ ಕಾಂಬಳೆ, ಭಾರತಿ ಕೊರವಿ, ಅನುಪಮಾ ಮರೆಪ್ಪಗೋಳ, ಉಮಾ ತಳವಾರ, ಶೋಭಾ ಬಸ್ತವಾಡೆ, ಕಾಶವ್ವಾ ಮಾಳಗಿ, ವೈ.ಎನ್. ಮುಕ್ಕನ್ನವರ, ನಾಗವ್ವಾ ಗುರವ, ಶೈಲಾ ಪಾಟೀಲ, ಆಯಿಶಾ ಮುಲ್ಲಾ, ಸುಜಾತಾ ಪಾಶ್ಚಾಪೂರೆ, ಪ್ರಮೀಳಾ ಚೌಗಲಾ, ಕಾರ್ಯದರ್ಶಿ ರವೀಂದ್ರ ಕಂಕಣವಾಡಿ, ಸಿಬ್ಬಂದಿ ನಿರ್ವಾಹಕ ನೀಲಕಂಠ ಕುಲಕರ್ಣಿ, ಎಂಐಎಸ್ ಸಂಯೋಜಕ ಶಂಕರ ಶಿರಗುಪ್ಪಿ, ಐಇಸಿ ಸಂಯೋಜಕ ಮಹಾಂತೇಶ ಬಾದವನಮಠ, ಆಡಳಿತ ಸಹಾಯಕಿ ಪ್ರೀತಿ ಜವಳಿ, ವಿದ್ಯಾ ಮಾಡಲಗಿ, ಶಿವು ಮಗದುಮ್ಮ ಮತ್ತಿತರರು ಉಪಸ್ಥಿತರಿದ್ದರು.

## ಧಾರವಾಡ ಲೋಕಸಭಾ ಕ್ಷೇತ್ರದಿಂದ ದಿಂಗಾಲೇಶ್ವರ ಸ್ವಾಮೀಜಿ ಸ್ಪರ್ಧೆ

ಬೆಂಗಳೂರು: ಧಾರವಾಡ ಕ್ಷೇತ್ರದ ಪಕ್ಷೇತರ ಅಭ್ಯರ್ಥಿಯಾಗಿ ಸ್ಪರ್ಧೆ ಮಾಡುತ್ತೇನೆ ಎಂದು ಶಿರಹಟ್ಟಿ ಭಾವೈಕ್ಯತಾ ಮಹಾ ಸಂಸ್ಥಾನ ಪೀಠದ ಫಕೀರ ದಿಂಗಾಲೇಶ್ವರ ಸ್ವಾಮೀಜಿಯವರು ಘೋಷಿಸಿದ್ದಾರೆ.



ಬೆಂಗಳೂರಿನ ವೀರಶೈವ ಲಿಂಗಾಯತ ಭವನದಲ್ಲಿ ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿದ ಶ್ರೀಗಳು, ಧಾರವಾಡ ಲೋಕಸಭಾ ಕ್ಷೇತ್ರದಿಂದ ಪಕ್ಷೇತರ ಅಭ್ಯರ್ಥಿಯಾಗಿ ಸ್ಪರ್ಧಿಸುತ್ತೇನೆಂದು ಘೋಷಿಸಿದ್ದು, ಬಿಜೆಪಿಯಲ್ಲಿ ಲಿಂಗಾಯತರನ್ನು ತುಳಿಯುವ ಕೆಲಸ ಆಗುತ್ತಿದೆ. ಇದಕ್ಕೆ ಸಾಕಷ್ಟು ಉದಾಹರಣೆಗಳನ್ನು ನಾನೇ ಹೇಳುತ್ತೇನೆಂದರು.

ರಾಜ್ಯದಲ್ಲಿ ಲಿಂಗಾಯತ, ಗೌಡ ಜನಾಂಗ ಬಿಟ್ಟರೆ ಕುರುಬ ಸಮಾಜ ದೊಡ್ಡದಿದೆ. ಆದರೆ ಕುರುಬ ಸಮಾಜಕ್ಕೆ ಒಂದೇ ಒಂದು ಟಿಕೆಟ್‌ಅನ್ನು ಬಿಜೆಪಿ ನೀಡಿಲ್ಲ. ರೆಡ್ಡಿ, ಜಂಗಮ, ಲಂಬಾಣಿ ಸೇರಿ ನೂರಾರು ಸಮಾಜಗಳು ಅಲಕ್ಷ್ಯಕ್ಕೆ ಒಳಗಾಗಿವೆ. ಎಲ್ಲ ಸಮಾಜಗಳು ಇಂದು ಬಿಜೆಪಿಯಿಂದ ನೋವು ಅನುಭವಿಸಿವೆ. ಈಶ್ವರಪ್ಪಗೆ ಟಿಕೆಟ್ ಕೊಡಲಿಲ್ಲ, ಅವರ ಪುತ್ರ ಒಂದೂವರೆ ವರ್ಷ ಕೆಲಸ ಮಾಡಿದರೂ ವಂಚಿಸಲಾಯಿತು. ರಾಷ್ಟ್ರೀಯ ನಾಯಕರು ಆ ಜಾತಿ ಅವಶ್ಯಕತೆ ನಮಗಿಲ್ಲ, ಈ ಜಾತಿ ಅವಶ್ಯಕತೆ ನಮಗಿಲ್ಲ ಎನ್ನುವ ಹೇಳಿಕೆ ನೀಡಿದ್ದಾರೆ.

ದೊಡ್ಡ ಸಂಖ್ಯೆಯ ಜನರಿಗೆ ಟಿಕೆಟ್ ನೀಡದೆ ಕಡಿಮೆ ಜನಸಂಖ್ಯೆ ಇರುವ ಜಾತಿಗೆ ಮೂರು ಟಿಕೆಟ್ ಕೊಟ್ಟಿದ್ದಾರೆ, ಎಲ್ಲಿದೆ ಸಾಮಾಜಿಕ ನ್ಯಾಯ"" ಎಂದು ಆಕ್ರೋಶ ಹೊರಹಾಕಿದರು.

ಸ್ವಾರ್ಥ ರಾಜಕಾರಣಿಗಳ ವಿರುದ್ಧ ಸ್ವಾಭಿಮಾನಿ ಧರ್ಮ ಗುರುಗಳು ಮಾಡಿದ ಧರ್ಮ ಯುದ್ಧದ ಘೋಷಣೆ ಇದಾಗಿದೆ.

ಧರ್ಮ ಯುದ್ಧವು ಕೇವಲ ಈ ಚುನಾವಣೆಗೆ ಸೀಮಿತವಾಗಿಲ್ಲ, ಜೀವ ಇರುವವರೆಗೂ ಮುಂದುವರೆಯಲಿದೆ, ನೊಂದವರ ಕಷ್ಟಕ್ಕೆ ಸ್ಪಂದಿಸಲು ಈ ನಿರ್ಧಾರ" ಎಂದರು.

## ಮತದಾನ ಜಾಗೃತಿಗೆ ಬೈಕ್ ಜಾಥಾ




ಹುಕ್ಕೇರಿ : ಲೋಕಸಭಾ ಸಾರ್ವತ್ರಿಕ ಚುನಾವಣೆ ಪ್ರಯುಕ್ತ ತಾಲೂಕಿನ ಹತ್ತರಗಿ ಮತ್ತು ಯಮಕನಮರಡಿಯಲ್ಲಿ ಸೋಮವಾರ ಬೈಕ್ ಜಾಥಾ ನಡೆಸಲಾಯಿತು.

ತಾಲೂಕಾ ಸ್ವೀಪ್ ಸಮಿತಿ ಹಾಗೂ ಗ್ರಾಮ ಪಂಚಾಯಿತಿ ಸಹಯೋಗದಲ್ಲಿ ನಡೆದ ಈ ಬೈಕ್ ಜಾಥಾ ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಮತದಾನದ ಅರಿವು ಮೂಡಿಸಿತು.

ತಾಪಂ ಇಒ ಟಿ.ಆರ್.ಮಲ್ಲಾಡದ ಮಾತನಾಡಿ, ಪ್ರಜಾಪ್ರಭುತ್ವ ಯಶಸ್ವಿಗೆ ಪ್ರತಿಯೊಬ್ಬ ಮತದಾರರು ಕಡ್ಡಾಯವಾಗಿ ಮತದಾನದ ಹಕ್ಕು ಚಲಾಯಿಸಬೇಕು. ಮತದಾನ ಪ್ರತಿಯೊಬ್ಬ ನಾಗರಿಕನ ಕರ್ತವ್ಯ. ಪ್ರತಿ ಮತವೂ ಅಮೂಲ್ಯವಾಗಿದೆ. ಯಾವುದೇ ಆಸೆ ಆಮಿಷಗಳಿಗೆ ಒಳಗಾಗದೇ ನಿರ್ಭಿತಿಯಿಂದ ಮತ ಚಲಾಯಿಸಬೇಕು. ಬೈಕ್ ಜಾಥಾ ಮೂಲಕ ಪ್ರತಿ ಮನೆ ಮನೆಗೆ ತೆರಳಿ ಮತದಾನ ಕುರಿತು ಅರಿವು ಮೂಡಿಸುವ ಕೆಲಸ ಮಾಡಲಾಗುತ್ತಿದೆ. ಈ ಸಲ ಹೆಚ್ಚು ಪ್ರತಿಶತ ಮತದಾನ ಮಾಡಲು ಕ್ರಮಕೈಕೊಳ್ಳಲಾಗಿದೆ ಎಂದರು.

ಪಂಚಾಯತ ಅಭಿವೃದ್ಧಿ ಅಧಿಕಾರಿಗಳಾದ ಎಸ್.ಎಸ್. ಢಂಗ, ಆನಂದ ಹೊಳೆನ್ನವರ, ಸಾವಿತ್ರಿ ಬ್ಯಾಕೂಡ, ಕವಿತಾ ವಾಘೆ, ಐಇಸಿ ತಾಲೂಕು ಸಂಯೋಜಕ ಮಹಾಂತೇಶ ಬಾದವನಮಠ, ವಿಶ್ವನಾಥ ಜಗದಾಳೆ, ಗ್ರಾಪಂ ಸಿಬ್ಬಂದಿಗಳಾದ ಸಂತೋಷ ಹೊಳೆಪ್ಪಗೋಳ, ಬಸವರಾಜ ಜಾಂಬೋಟಿ, ರವಿ ಕುಂಬಾರ ಮತ್ತಿತರರು ಉಪಸ್ಥಿತರಿದ್ದರು.

## ಏ.10 ರಂದು ಗ್ರಾಮೀಣ ಸಭಾ ಮತಕ್ಷೇತ್ರದ ಚುನಾವಣಾ ಸಿಬ್ಬಂದಿಗಳಿಗೆ ತರಬೇತಿ ಕಾರ್ಯಕ್ರಮ

ಬೆಳಗಾವಿ: ಬೆಳಗಾವಿ-02 ಲೋಕಸಭಾ ಚುನಾವಣೆ ಪ್ರಯುಕ್ತ ಬೆಳಗಾವಿ-13 ಗ್ರಾಮೀಣ ವಿಧಾನ ಸಭಾ ಮತಕ್ಷೇತ್ರದ ಚುನಾವಣಾ ಮತಗಟ್ಟೆಗಳ ಅಧ್ಯಕ್ಷಾಧಿಕಾರಿ (ಪಿ.ಆರ್.ಓ) ಹಾಗೂ ಸಹಾಯಕ ಅಧ್ಯಕ್ಷಾಧಿಕಾರಿಗಳು (ಎ.ಪಿ.ಆರ್.ಓ) ಎಂದು ನಿಯೋಜಿಸಿದ ಅಧಿಕಾರಿ/ಸಿಬ್ಬಂದಿಗಳಿಗೆ ಏ.10 ರಂದು ಬೆಳಿಗ್ಗೆ 10 ಗಂಟೆಗೆ ವನಿತಾ ವಿದ್ಯಾಲಯ ಆಂಗ್ಲ ಮಾಧ್ಯಮ ಪ್ರೌಢ ಶಾಲೆ, ಕ್ಲಬ್ ರೋಡ, ಬೆಳಗಾವಿ (ಸಿ.ಪಿ.ಈಡಿ ಮೈದಾನದ ಹತ್ತಿರ) ಇಲ್ಲಿ ತರಬೇತಿ ಕಾರ್ಯಕ್ರಮವನ್ನು ನಿಗದಿಪಡಿಸಲಾಗಿರುತ್ತದೆ.

ಸದರಿ ಕಾರ್ಯಕ್ರಮದಲ್ಲಿ ಮತದಾನ ದಿನದಂದು ವಿದ್ಯುನ್ಮಾನ ಮತಯಂತ್ರಗಳ ಉಪಯೋಗಿಸುವಿಕೆ ಹಾಗೂ ಇನ್ನಿತರೆ ಚುನಾವಣೆ ಕರ್ತವ್ಯಗಳ ಬಗ್ಗೆ ನಿಗದಿಪಡಿಸಿದ ಸೆಕ್ಟರ್ ಅಧಿಕಾರಿಗಳು ಹಾಗೂ ವಿದ್ಯುನ್ಮಾನ ಮತಯಂತ್ರಗಳ ನುರಿತ ಮಾಸ್ಟರ್ ಟ್ರೇನರ್‌ಗಳಿಂದ ತರಬೇತಿ ನೀಡಲಾಗುವುದು.

ಸದರಿ ತರಬೇತಿ ಕಾರ್ಯಕ್ರಮಕ್ಕೆ ನಿಯೋಜಿಸಿದ ಸಿಬ್ಬಂದಿಗಳಿಗೆ ಈಗಾಗಲೇ ಜಿಲ್ಲಾಧಿಕಾರಿಗಳು ಹೊರಡಿಸಿದ ಆದೇಶ ಪ್ರತಿಗಳನ್ನು ಜಾರಿ ಮಾಡಲಾಗಿದ್ದು, ಎಲ್ಲ ಸಿಬ್ಬಂದಿಗಳು ತರಬೇತಿ ದಿನದಂದು ಬೆಳಿಗ್ಗೆ 9 ಗಂಟೆಗೆ ಆದೇಶ ಪ್ರತಿ ಹಾಗೂ ಅಂಚೆ ಮತಪತ್ರ ನಮೂನೆ 12/12ಎ ಯೊಂದಿಗೆ ಹಾಜರಾಗಿ ತರಬೇತಿ ಪಡೆಯಲು ಮತ್ತು ಭರ್ತಿ ಮಾಡಿದ ನಮೂನೆ 12/12ಎ ಗಳನ್ನು ತರಬೇತಿ ಕೇಂದ್ರದಲ್ಲಿ ಹಾಜರಿರುವ ಅಂಚೆ ಮತಪತ್ರ ನೋಡಲ್ ಅಧಿಕಾರಿಗಳಿಗೆ ನೀಡಲು ತಿಳಿಸಲಾಗಿದೆ. ಒಂದು ವೇಳೆ ಸದರಿ ತರಬೇತಿ ಕಾರ್ಯಕ್ರಮಕ್ಕೆ ಪಿ.ಆರ್.ಓ/ಎ.ಪಿ.ಆರ್.ಓ ಗಳು ಗೈರು ಹಾಜರಾದಲ್ಲಿ ಅವರ ವಿರುದ್ಧ ಪ್ರಜಾ ಪ್ರತಿನಿಧಿ ಕಾಯ್ದೆ 1951 ರಡಿ ಶಿಸ್ತು ಕ್ರಮ ಜರುಗಿಸಲಾಗುವುದು ಎಂದು ಬೆಳಗಾವಿ ನಗರಾಭಿವೃದ್ಧಿ ಪ್ರಾದಿಕಾರ ಆಯುಕ್ತರು ಹಾಗೂ ಬೆಳಗಾವಿ-13 ಗ್ರಾಮೀಣ ಮತಕ್ಷೇತ್ರದ ಸಹಾಯಕ ಚುನಾವಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಾಂಗ್ರೆಸ್‌ಗೆ ಡಿಎಸ್ ಎಸ್ ಸಂಪೂರ್ಣ ಬೆಂಬಲ: ಬಾಳೇಶ ಬನಹಟ್ಟಿ




ಬೆಳಗಾವಿ: "ದೇಶದಲ್ಲಿ ಸಮಾನತೆ, ಶಾಂತಿಗಾಗಿ ದಲಿತ ಸಂಘರ್ಷ ಸಮಿತಿ-ಕರ್ನಾಟಕ (ರಿ) ಸಂಘಟನೆಗಳು ಸಂಪೂರ್ಣವಾಗಿ ಕಾಂಗ್ರೆಸ್ ಬೆಂಬಲ ನೀಡುತ್ತಿದ್ದೆವೆ ಎಂದು" ಡಿಎಸ್ ಎಸ್ ರಾಜ್ಯ ಸಂಚಾಲಕರಾದ ಬಾಳೇಶ ಬನಹಟ್ಟಿ ಹೇಳಿದರು.

ಇಲ್ಲಿನ ಕನ್ನಡ ಸಾಹಿತ್ಯ ಭವನದಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿ, ದೇಶದ ರಕ್ಷಣೆ ಇಲ್ಲ, ಸಮಾನತೆ ಅಳಿಸಿ ಹೋಗುತ್ತಿದೆ. ದೇಶದ ಜನರು ಒಂದೇ ಎನ್ನುವ ಮನೋಭಾವನೆಯನ್ನು ಬುಡಸಮೇತ ಕಿತ್ತುಹಾಕುವ ತಂತ್ರವನ್ನು ಬಿಜೆಪಿಗರು ನಡೆಸುತ್ತಿದ್ದಾರೆ.

ಮದ್ಯಮ-ಕೆಳ ಸಮುದಾಯದ ಜನರನ್ನು ತುಳಿಯಲು ಬಿಜೆಪಿ ಟಾರ್ಗೆಟ್ ಮಾಡಿದೆ. ಬೇರೆ ಸಂಘಟನಗಳಿಗೆ ಬಿಜೆಪಿಯಿಂದ ಬೆಂಬಲ ಇಲ್ಲವಾಗಿದೆ. ಇನ್ನೂಳಿದ ಸಂಘಟನೆಗಳು ನಿರ್ಮಾಣವಾದರೆ, ಅವುಗಳನ್ನು ಹತ್ತಿಕ್ಕುವ ಯತ್ನವು ನಡೆದಿದೆ ಎಂದು ಹೇಳಿದರು.

ದೇಶ ಹಿತ ಮುಖ್ಯವಾಗಿದೆ. ಹೀಗಾಗಿ, ದಲಿತ ಸಂಘರ್ಷ ಸಮಿತಿ-ಕರ್ನಾಟಕ (ರಿ) ಸಂಘಟನೆ ಸೇರಿದಂತೆ ವಿವಿಧ ಸಂಘಟನೆಗಳು ಸಹ ಕಾಂಗ್ರೆಸ್‌ಗೆ ದೇಶಾದ್ಯಂತ ಬೆಂಬಲ ನೀಡಲಾಗುತ್ತಿದೆ. ಈಗಾಗಲೇ ಲೋಕಸಭಾ ಚುನಾವಣೆ ದಿನಾಂಕ ಘೋಷಣೆ ಆಗಿದ್ದು, ಬೆಳಗಾವಿ, ಚಿಕ್ಕೋಡಿ ಲೋಕಸಭಾ ಚುನಾವಣೆ ಕಣಕ್ಕೆ ಇಳಿದಿರುವ ಕಾಂಗ್ರೆಸ್ ಅಭ್ಯರ್ಥಿಗಳಾದ ಪ್ರಿಯಂಕಾ ಜಾರಕಿಹೊಳಿ- ಮೃಣಾಲ್ ಹೆಬ್ಬಾಳಕರ್ ಗೆ ಡಿಎಸ್ ಎಸ್ ಸಂಘಟನೆಯವರು ಸಂಪೂರ್ಣ ಬೆಂಬಲ ನೀಡುತ್ತೆವೆ. ಕಾಂಗ್ರೆಸ್ ಎರಡು ಅಭ್ಯರ್ಥಿಗಳ ಗೆಲುವಿಗೆ ಚುನಾವಣೆಯಲ್ಲಿ ಶ್ರಮಿಸುತ್ತೆವೆ ಎಂದು ಹೇಳಿದರು. ಈಗಿರುವ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಬದಲಾಯಿಸಿ, " ಹಿಂದೂ ಧರ್ಮದ ಹೆಸರಿನಲ್ಲಿ ಧರ್ಮ ಸಂಸತ್ ಸ್ಥಾಪಿಸಿ ಮೇಲ್ಜಾತಿಯ ಹಿಡಿತವನ್ನು ಸ್ಥಾಪಿಸುವುದು ಅವರ ಗುರಿಯಾಗಿದೆ. ಬಿಜೆಪಿಗರು ದೇಶದಲ್ಲಿ 400 ಲೋಕಸಭಾ ಕ್ಷೇತ್ರಗಳನ್ನು ಗೆಲ್ಲಬೇಕೆಂಬ ಉದ್ದೇಶದಿಂದ ಅಪಾರವಾದ ಅಕ್ರಮ ಹಣವನ್ನು ಕೂಡಿಟ್ಟುಕೊಂಡಿದ್ದಾರೆ. ಮತ್ತು, ವಿರೋಧ ಪಕ್ಷಗಳು ತಂತ್ರ ರೂಪಿಸಿ ಇಡಿ-ಐಟಿ ದಾಳಿ ಮಾಡುತ್ತಿದ್ದಾರೆ. ಸರ್ಕಾರ ಅಧಿಕಾರಿಗಳು ಸಹ ಕೇಂದ್ರ ಸರ್ಕಾರದ ಕೈಗೊಂಬೆಯಾಗಿದ್ದಾರೆ ಎಂದು ಆಕ್ರೋಶ ಹೊರಹಾಕಿದರು. ದೇಶದ ದುಡಿಮೆ ಜನರು, ದಲಿತ ಸಮುದಾಯಗಳು, ಅಲ್ಪಸಂಖ್ಯಾತರು, ಪ್ರಜ್ಞಾವಂತರು ಒಗ್ಗಟ್ಟಾದರೆ ಬಿಜೆಪಿಯನ್ನು ಸುಲಭವಾಗಿ ಸೋಲಿಸಬಹುದು, ಅವರ ಸಂಘಟನೆಗಳನ್ನು ವಿಫಲಗೊಳಿಸಬಹುದು ಎಂದು ಹೇಳಿದರು.

# ಕನ್ನಡಿ ನೋಡಿ ಮತಚಲಾಯಿಸದರೆ ಭಾರತ ಭವಿಷ್ಯ, ಅಭಿವೃದ್ಧಿ ಅಸಾಧ್ಯ: ನಟ ಪ್ರಕಾಶರಾಜ್ ಕಿಡಿ

ಬೆಳಗಾವಿ: ಜನರ ಸಮಸ್ಯೆಗಳನ್ನು ಆಲಿಸುವ ಜನಪ್ರತಿನಿಧಿಗಳಿಗೆ ಯುವಕರು ನಿಮ್ಮ ಮತಚಲಾಯಿಸಬೇಕು. ಕನ್ನಡಿ ನೋಡಿ ಮತಚಲಾಯಿಸದರೆ ಭಾರತ ಭವಿಷ್ಯ, ಅಭಿವೃದ್ಧಿ ಎರಡು ಅಸಾಧ್ಯ ಎಂದು ನಟ ಪ್ರಕಾಶರಾಜ್ ಕೇಂದ್ರ ಸರ್ಕಾರ ವಿರುದ್ಧ ಕಿಡಿಕಾರಿದರು.

ಇಲ್ಲಿನ ಗಾಂಧಿ ಭವನದಲ್ಲಿ ಸೋಮವಾರ ಲೋಕಸಭೆ ಚುನಾವಣೆ ಹಿನ್ನಲೆಯಲ್ಲಿ ಕರ್ನಾಟಕ ಸಮಸ್ತ ಜನಪರ ಸಂಘಟನೆಗಳ ವತಿಯಿಂದ ಆಯೋಜಿಸಲಾದ ದೇಶ ಉಳಿಸಿ ಸಂಕಲ್ಪ ಸಮಾವೇಶದಲ್ಲಿ ಜನರನ್ನು ಉದ್ದೇಶಿಸಿ ಅವರು ಮಾತನಾಡಿ,

ಮಕ್ಕಳ ಭವಿಷ್ಯಕ್ಕಾಗಿ ಒಳ್ಳೆಯ ನಾಯಕರನ್ನು ಆಯ್ಕೆ ಅಗತ್ಯವಿದೆ. ನಿಜವಾದ ದೇಶಭಕ್ತರಾದರೆ ಸರ್ವಾಧಿಕಾರಿಯನ್ನು ಅಧಿಕಾರದಿಂದ ಕೆಳಗಿಳಿಸಬೇಕು. ಬೆಳಗಾವಿ ಜನ ವಿಚಾರ ಮಾಡಿ, ಎಚ್ಚೆತ್ತುಕೊಂಡು ಮತ ಹಾಕರಿ. ಸ್ಮಾರ್ಟ್ ಸಿಟಿ ಎಂದರು

**ಅದಾನಿ ಕೈ ಬದಲಾಗಿದೆ ಮಹಾಪ್ರಭು ಎಂದ ಪ್ರಕಾಶ್ ರಾಜ್ :**

ಏರ್ ಪೋರ್ಟ್ ಬದಲಾಗಿಲ್ಲ. ಅದಾನಿ ಕೈ ಬದಲಾಗಿದೆ. ಏರ್ ಪೋರ್ಟ್ ನಲ್ಲಿ ಒಂದು ಚಹಾಗೆ 300 ರೂ.. ಇದು ಸರ್ಕಾರಕ್ಕೆ ಹೋಗೋದಿಲ್ಲ. ಮೋದಿ ಸ್ನೇಹಿತ ಅದಾನಿಗೆ ಹೋಗುತ್ತದೆ. ಟೋಲ್ ಗೇಟ್ ಮಾಫಿಯಾ ಪೆಟ್ರೋಲ್ ದರ ಹೆಚ್ಚಾಗಿದೆ. ಇದು ಎಲ್ಲದರ ಮೇಲೂ ಪರಿಣಾಮ ಬೀರುತ್ತದೆ ದೇಶದ ಜನರ ಮೇಲೆ ಹೊರೆ ಬಿಳುತ್ತಿದೆ. ಅದನ್ನು ತಪ್ಪಿಸೋಣ ದೇಶ ಭಕ್ತರನ್ನು ಆಯ್ಕೆ ಮಾಡೋಣ ಎಂದು ಹೇಳಿದರು.

ದೇಶ ಉಳಿಸಿ ಸಂಕಲ್ಪ ಸಮಾವೇಶ ಅಧ್ಯಕ್ಷ ಹಾಗೂ ಸಾಮಾಜಿಕ ಹೋರಾಟಗಾರ ಎಸ್ ಆರ್ ಹಿರೇಮಠ ಮಾತನಾಡಿ, ದೇಶದಲ್ಲಿ ಅಭಿವೃದ್ಧಿ ಕಾರ್ಯಗಳು ನಡೆದರೆ ಸರ್ಕಾರವನ್ನು ಶ್ಲಾಘಿಸೋಣ. ಆದರೆ, ಜನತೆ ದಿಕ್ಕು ತಪ್ಪಿಸುವ ಕೆಲಸ ಮಾಡಿ, ಜನರಲ್ಲಿ ಜಾತಿ-ಧರ್ಮಗಳ ವಿಷಬೀಜ ಬಿತ್ತುತ್ತಿರುವ ಸರ್ಕಾರವನ್ನು ತಕ್ಕಪಾಠ ಕಲಿಸಬೇಕಾಗಿದೆ. ಹೀಗಾಗಿ ಎಲ್ಲಾ ಸಂಘಟನೆಗಳು ಒಂದಾಗಿ ಕಾಂಗ್ರೆಸ್ ಗೆ ಶಕ್ತಿ ತುಂಬೋಣ ಎಂದು ಹೇಳಿದರು.

ದೇಶದಲ್ಲಿ ಸ್ವಾತಂತ್ರ್ಯ ನಂತರ ಅತೀ ದೊಡ್ಡ ಹಗರಣ ಅಂದ್ರೆ ಎಲೆಕ್ಟ್ರೋ ಬಾಂಡ್ಸ್. ಎಲೆಕ್ಟ್ರೋ ಬಾಂಡ್ಸ್ ಸ್ಪಷ್ಟ ಚಿತ್ರಣ ಕೊಡತಾ ಇದೆ. ಹಣಕಾಸು ಸಚಿವ ಅರುಣ್ ಜೆಟ್ಲಿ ಅವರು ಪ್ರಧಾನಮಂತ್ರಿ ಅವರು ದೊಡ್ಡ ಹಗರಣ ಮಾಡಿದ್ದಾರೆ. ದೇಶದ ಪ್ರಮುಖ ಕಾಯ್ದೆಗಳನ್ನ ರದ್ದು ಮಾಡಿದೆ ಎಂದು ಕಳವಳ ವ್ಯಕ್ತಪಡಿಸಿದರು.

ಈ ಬಾರಿಯ ಚುನಾವಣೆ ಜನ ಸಂಕಲ್ಪದ ಚುನಾವಣೆ. ಇಂದು ಸೂರ್ಯಗ್ರಹಣ. ಈ ಪ್ರಕೃತಿ ಸಹಜ ಗ್ರಹಣದಿಂದ ಯಾವ ಅಪಾಯವೂ ಇಲ್ಲ. ಆದರೆ ಇಡೀ ದೇಶವನ್ನೇ ಅವನತಿಯಡೆಗೆ ಸೆಳೆಯುತ್ತಿರುವ ವಿಕೃತಿಯ ಗ್ರಹಣ ಈ ದೇಶವನ್ನು ಆವರಿಸಿಕೊಂಡಿದೆ. ಕುರುಡು ಕನ್ನಡಕ ಹಾಕಿಕೊಂಡವರಿಗೆ ಈ ಗ್ರಹಣ ಕಾಣುವುದಿಲ್ಲ. ನಿತ್ಯ ಟಿವಿ ನೋಡುವವರಿಗೂ ಇದು ಗೋಚರಿಸುವುದಿಲ್ಲ. ಸಹಜವಾಗಿ ಬರಿ ಕಣ್ಣಿನಿಂದ ನೋಡಿದರೆ ಸಾಕು ಈ ಗ್ರಹಣದ ವೇಗ, ಆವೇಗ, ದಿಕ್ಕು ನಿಚ್ಚಳವಾಗಿ ಗೋಚರಿಸುತ್ತದೆ. ಸ್ವಾತಂತ್ರ್ಯದ ನಂತರ ಭಾರತ ಹಿಡಿದ ಪುರೋಗಾಮಿ ದಿಕ್ಕನ್ನು ಸಹಿಸದ ಪಟ್ಟಭದ್ರ ಹಿತಾಸಕ್ತಿಗಳು




ಇಡೀ ದೇಶವನ್ನು ಮತ್ತೆ ತಮ್ಮ ಕೈವಶ ಮಾಡಿಕೊಳ್ಳಲು ಮಹಾ ಸಂಚು ರೂಪಿಸಿದ್ದಾರೆ. ಅದರ ಪರಿಣಾಮವೇ ಈ ಗ್ರಹಣ ದ್ವೇಷ ರಾಜಕಾರಣ, ಕಪಟ ಮಾಧ್ಯಮ ಹಾಗೂ ಭ್ರಷ್ಟ ಹಣ, ಮೂರನ್ನೂ ಬಳಸಿಕೊಂಡು ಅಧಿಕಾರದ ಕೇಂದ್ರಗಳನ್ನು ವಶಪಡಿಸಿಕೊಂಡಿದ್ದಾರೆ ಎಂದು ಆಕ್ರೋಶ ಹೊರಹಾಕಿದರು.

ಜನರಿಗೆ ಅಚ್ಛೇ ದಿನದ ಕನಸು ತೋರಿಸಿ ಅಧಿಕಾರಕ್ಕೆ ಬಂದ ಹಾಡಹಗಲು ಜನರ ಸುಲಿಗೆಗೆ ನಿಂತಿದೆ. ಸೆಸ್ ಮತ್ತು ಜಿ ಎಸ್ ಟಿ ಹಾಕಿ. ಪೆಟ್ರೋಲಿನಿಂದ ಹಿಡಿದು ಗುಂಡುಪಿನ್ನಿನ ತನಕ ಪ್ರತಿಯೊಂದರ ಬೆಲೆ ಏರಿಸಿ, ಸಾಮಾನ್ಯರು ದುಡಿಮೆಯನ್ನೆಲ್ಲಾ ದೋಚುತ್ತಿದ್ದಾರೆ. ಈ ಪಿತೂರಿಯಲ್ಲಿ ಕೈಮಿಲಾಯಿಸಿರುವ ಕಂಪನಿಗಳಿಗೆ ದೇಶದ ಕೊಳ್ಳೆ ನಡೆಸಲು ಮುಕ್ತ ಪರವಾನಗಿ ನೀಡಲಾಗಿದೆ. ಕೇಂದ್ರದಲ್ಲಿ ಅಧಿಕಾರದಲ್ಲಿರುವ ಪಕ್ಷ ಮಾಫಿಯಾ ಗ್ಯಾಂಗ್ ಆಗಿ ಪರಿವರ್ತನೆಯಾಗಿದೆ. ಚುನಾವಣಾ ಬಾಂಡ್ ಹೆಸರಿನಲ್ಲಿ ಹಫ್ತಾ ವಸೂಲಿ ನಡಿಯುತ್ತಿದೆ. ದೇಶ ತುಂಡುತುಂಡಾಗಿ ಮಾರಾಟವಾಗುತ್ತಿದೆ. ಅಕ್ರಮ ವ್ಯವಹಾರಗಳು ಮುಕ್ತ ಲೈಸೆನ್ಸ್ ಪಡೆದುಕೊಂಡಿವೆ. ದೇಶ ಕಾಯಬೇಕಿದ್ದ ಸಿಬಿಐ, ಐಟಿ, ಇಡಿ ಮುಂತಾದ ಸಂಸ್ಥೆಗಳು ಗೂಂಡಾಗಿರಿ ಹಾಗೂ ವಸೂಲಿ ಧಂದೆಗೆ ಇಳಿದುಬಿಟ್ಟಿವೆ ಎಂದರು

ವಿವಿಧ ಜನಪರ ಸೈದ್ಧಾಂತಿಕ ಧಾರೆಗಳು, ಜನಚಳವಳಿಗಳು ಜೊತೆಗೂಡುತ್ತಿವೆ. ಪ್ರತಿಯೊಬ್ಬರೂ ಒಂದಲ್ಲಾ ಒಂದು ರೀತಿಯಲ್ಲಿ ದೇಶಕಾಯುವ ಕಾಯಕದಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡಿದ್ದಾರೆ. ಸೈದ್ಧಾಂತಿಕ ವಾದವಿವಾದಗಳು, ಸಂಘಟನಾ ವೈಮನಸು ದೊಡ್ಡ ಮಟ್ಟಕ್ಕೆ ಕಡಿಮೆಯಾಗಿದೆ. ಮನಸ್ಸುಗಳ ಬೆಸುಗೆ ಅಚ್ಚಡಿ ಮೂಡಿಸುವಷ್ಟು ಉತ್ತಮ ರೀತಿಯಲ್ಲಿ ವಿಕಾಸಗೊಳ್ಳುತ್ತಿದೆ. ಹೋರಾಟಗಳು ಕ್ರಮೇಣ ಕಸುವು ಪಡೆದುಕೊಳ್ಳುತ್ತಿವೆ. ಇತ್ತೀಚಿನ ಸಿಎಎ ವಿರೋಧಿ ಹೋರಾಟ ಹಾಗೂ ಚಾರಿತ್ರಿಕ ದೆಹಲಿ ರೈತ ಹೋರಾಟವೇ ಇದಕ್ಕೆ, ಜೀವಂತ ಪುರಾವೆಗಳಾಗಿವೆ ಎಂದು ಹೇಳಿದರು.

ಒಂದು ಎಚ್ಚರಿಕೆ ನಮ್ಮಲ್ಲಿರುವುದು ಬಹಳ ಅಗತ್ಯ. ನಾವು ಈ ಅಭಿಯಾನವನ್ನು ಸ್ವತಂತ್ರ ನಾಗರೀಕ ಅಭಿಯಾನವಾಗಿ ನಡೆಸಬೇಕು. ಯಾವುದೇ ರಾಜಕೀಯ ಪಕ್ಷಕ್ಕೆ ಸಹಾಯ ಮಾಡಲು ನಾವಿದನ್ನು ಮಾಡುತ್ತಿಲ್ಲ. ನಮ್ಮ ದೇಶದ ಹಾಗೂ ನಮ್ಮ ಜನರ ಭವಿಷ್ಯವನ್ನು ಕಾಪಾಡಿಕೊಳ್ಳಲಿಕ್ಕಾಗಿ ನಾವು ಈ ಜನರಾಜಕಾರಣಕ್ಕೆ ಇಳಿದಿದ್ದೇವೆ. ಜಾಗೃತ ನಾಕರೀಕರಾದ ನಾವು ಶಾಶ್ವತ ವಿರೋಧ ಪಕ್ಷವಿದ್ಯಂತೆ, ನಾಳೆ ಯಾರೇ ಅಧಿಕಾರಕ್ಕೆ ಬಂದರೂ ಅವರ ಜೊತೆಯೂ ನಾವು ಜನಹಿತದ ರಕ್ಷಣೆಗಾಗಿ ರಾಜಿರಹಿತ ಸಂಘರ್ಷವನ್ನು ಚಾಲ್ತಿಯಲ್ಲಿಡಬೇಕಿದೆ. ನಾಗರೀಕರೇ ಒಂದು ಪ್ರಚಂಡ ಪರ್ಯಾಯ ರಾಜಕೀಯ ಶಕ್ತಿಯಾಗಿ ರೂಪಗೊಳ್ಳುವ ಅಗತ್ಯ ಈ ದೇಶಕ್ಕೆ ಅಗತ್ಯವಿದೆ ಎಂದು ತಿಳಿ ಹೇಳಿದರು.

ಸಾಮಾಜಿಕ ಮತ್ತು ಮಹಿಳಾ ಹೋರಾಟಗಾರ್ತಿ ಡಾ. ಬಿಟಿ ಲಲಿತಾ ನಾಯ್ಕ ಮಾತನಾಡಿ, ಸಮಾಜಕ್ಕಾಗಿ ದುಡಿದವರು ಅಲ್ಪಜನರು ದೇಶವನ್ನು ಹಾಳು ಮಾಡುತ್ತಿರುವವರು ಸಹಸ್ರಾರು ಜನರು, ಮೂಡ ನಂಬಿಕೆಯಲ್ಲಿ ಜನರು ಮಗ್ನರಾಗಿದ್ದೆವೆ. ಮೌಡ್ಯತೆ, ಗುಲಾಮಗಿರಿಯನ್ನು ಬುಡಸಮೇತ ಕಿತಹಾಕಬೇಕು. ಹೀಗಾಗಿ ಜನರನ್ನು ಒಂದಾಗಿ ಕಾಂಗ್ರೆಸ್ ಬೆಂಬಲ ನೀಡಬೇಕು. ದೇಶದ ಸ್ಥಿತಿ ಅಘಾತದಲ್ಲಿದೆ ಅದನ್ನು ಉಳಿಸಿಕೊಳ್ಳೋಣ ಎಂದರು.

ಸಮಾಜ ಸೇವಕರಾದ ಶಿವಾಜಿ ಕಾಗನೇಕರ್ ಅವರು ಮಾತನಾಡಿ, ಕೃಷಿ ಪ್ರಧಾನ ದೇಶ ಭಾರತ , ಕೃಷಿ ಮೇಲೆ ಅವಲಂಭಿತರಾದ ರೈತರು ಆತ್ಮಹತ್ಯೆ ಮಾಡಿಕೊಳ್ಳುವ ಕಾಲ ಎದುರಾಗಿದೆ. ಕೃಷಿ ಕಾನೂನು ಜಾರಿಗೆ ಬಂದಿದೆ. ರೈತರಿಗೆ ಯೋಗ್ಯ ಬೆಲೆ ಸಿಗಬೇಕೆಂಬ ಪಂಜಾಬಿ ಆಂದೋಲನದ ಮಾಡಲಾಗಿದೆ. ಆದರೂ ಅನ್ನದಾತನಿಗೆ ನ್ಯಾಯ ಸಿಗುತ್ತಿಲ್ಲ, ರೈತರ ಎಲ್ಲಿದೆ ಬೆಂಬಲ ಬೆಲೆ, ಹೀಗಾಗಿ ರೈತರ ಪರ ಹೋರಾಟ ನಡೆದಿದೆ. ದೇಶದ ರೈತರನ್ನು ದಿಕ್ಕಾಪಾಲು ಮಾಡುವ ಯತ್ನ ನಡೆದಿದೆ. ನಾವು ಅದನ್ನು ತಡೆಯೋಣ ಅವರಿಗೆ ಸಹಕಾರ ನೀಡಿ, ಅನ್ನದಾತರನ್ನು ಉಳಿಸಿಕೊಳ್ಳೋಣ ಎಂದು ಹೇಳಿದರು.

ರಂಜಾನ್ ದರ್ಗಾ ಮಾತನಾಡಿ, 12 ನೇ ಶತಮಾನದ ಶರಣರ ವಚನಗಳನ್ನು ಸುಟ್ಟು ಹಾಕುವ ಯತ್ನವಾಗಿದೆ. ಹೀಗಾಗಿ ಮಾನವ ಘನತೆ ಎತ್ತಿ ಹಿಡುವ ಪ್ರಯತ್ನ ಮಾಡಬೇಕು. ಸಂವಿಧಾನದ ಬದಲಾಯಿಸುವ ಉದ್ದೇಶದಿಂದ 400

ಕ್ಷೇತ್ರದ ಟಾರ್ಗೆಟ್ ಮಾಡಕೊಳ್ಳಲಾಗಿದೆ. ಸಂವಿಧಾನದ ಮೇಲೆ ಬಿಜೆಪಿ ಕಣ್ಣಿಟ್ಟಿದೆ, ಅದನ್ನು ತಡೆಯಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಪ್ರಕಾಶ್ ಕಮ್ಮರಡಿ, ಬಡಗಲಪುರ ನಾಗೇಂದ್ರ , ಯೂಸೂಫ್ ಕನ್ನಿ , ವರಲಕ್ಷ್ಮಿ, ಫಾ. ಅರುಣ್ ಲೂಯಿಸ್/ ಥಿಯೋಲಾ ಎನ್. ವೆಂಕಟೇಶ್, ಎಣ್ಣೆಗೆರೆ ವೆಂಕಟರಾಮಯ್ಯ, ಅಖಿಲಾ ವಿದ್ಯಾಸಂದ್ರ, ಶಿವಾಜಿ ಕಾರ್ಣೇಕರ್, ದಿಲಿಪ್ ಕಾಮತ್, ಸಿದಗೌಡ ಮೋದಗಿ, ರಹಮತ್ ತರಿಕೆರೆ, ಶಂಕರ್ ಹಲಗತ್ತಿ, ಶ್ರೀಪಾದ್ ಭಟ್, ರವೀಂದ್ರ ನಾಯ್ಕರ್ , ಕೇಸರಿ ಹರವು ಜನ, ಚಾಮರಸ ಮಾಲಿ ಪಾಟೀಲ್ , ನಾಗೇಶ್ ಸಾತೇರಿ , ಹೊನ್ನಪ್ಪ ಮರಿಯಮ್ಮನವರ್ , ಆನಂದ್ ಮೆಣ್ಣೆ, ಬಸವರಾಜ್ ಕೌತಾಳ್, ಜಿ.ವಿ. ಕುಲಕರ್ಣಿ, ಜಿ.ಎಂ. ಜೈನೇಖಾನ್, ಕಾ. ಜನಾರ್ಧನ್, ಮಂದ ನೇವಿಗೆ, ಗೀತಾ ಧರಣವರ್, ಮಲ್ಲಿಗೆ ಸಿರಿಮನೆ, ಕ್ಲಾರಾ ಫರ್ನಾಂಡಿಸ್ , ಯಾಸೀನ್ ಮಕಾನ್ ದಾರ್, ಹನೀಫ್ ಸಿದ್ದೀಕಿ, ಡಿ.ಎಸ್. ಚೌಗಳೆ, ನಾಗೇಶ್ವರ , ರಾವ್ , ಸೈಯದ್ ಖಲೀಮುಲ್ಲಾ ಹಾಗೂ ಇತರರು ಇದ್ದರು.

# ನಿರೀಕ್ಷೆಗೂ ಮೀರಿ ಕಾಂಗ್ರೆಸ್ ಅಭ್ಯರ್ಥಿಗೆ ಬೆಂಬಲ: ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್

## ಗೋಕಾಕ್ ಕ್ಷೇತ್ರದಲ್ಲಿ ಮುಂದುವರಿದ ಸಚಿವರ ಮತಬೇಟೆ

ಗೋಕಾಕ್: ಗೋಕಾಕ್ ಕ್ಷೇತ್ರದಾದ್ಯಂತ ನಿರೀಕ್ಷೆಗೂ ಮೀರಿ ಕಾಂಗ್ರೆಸ್ ಅಭ್ಯರ್ಥಿಗೆ ಬೆಂಬಲ ಸಿಗುತ್ತಿದೆ. ಈ ಬೆಂಬಲ ನೋಡಿ ಮೃಣಾಲ ಹೆಬ್ಬಾಳಕರ್ ಆಯ್ಕೆಯಾಗಿ ದೆಹಲಿಗೆ ಹೋಗುವುದು ಖಚಿತ ಎನ್ನುವ ವಿಶ್ವಾಸ ಇಮ್ಮಡಿಯಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರಾದ ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿದ್ದಾರೆ.

ಅಂಕಲಗಿ ಹಾಗೂ ಸಾವಳಗಿಯಲ್ಲಿ ಸೋಮವಾರ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳ್ಕರ್ ಪರ ಮತಯಾಚಿಸಿ ಮಾತನಾಡಿದ ಸಚಿವರು, ಕಾಂಗ್ರೆಸ್ ಪಕ್ಷದಿಂದ ಮಾತ್ರ ರಾಜ್ಯ, ದೇಶ ಅಭಿವೃದ್ಧಿ ಸಾಧ್ಯ ಎನ್ನುವುದು ಜನರಿಗೆ ಮನವರಿಕೆಯಾಗಿದೆ ಎಂದು ಹೇಳಿದರು.

ಕಳೆದ ವರ್ಷ ನಡೆದ ವಿಧಾನಸಭೆಯ ಚುನಾವಣೆಗೂ ಮುನ್ನ ಕಾಂಗ್ರೆಸ್ ಪಕ್ಷ ಪಂಚ ಯೋಜನೆಗಳ ಗ್ಯಾರಂಟಿ ನೀಡಿತ್ತು. ಅಧಿಕಾರಕ್ಕೆ ಬಂದ ಕೇವಲ 100 ದಿನಗಳಲ್ಲಿ ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿಗೆಗೊಳಿಸಿದೆವು. ಇದು ಸರ್ಕಾರಕ್ಕೆ ಬಡಜನರ ಮೇಲೆ ಇರುವ ಬದ್ಧತೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಬಡವರ ಪಾಲಿಗೆ ಅನ್ನರಾಮಯ್ಯ ಆಗಿದ್ದಾರೆ ಎಂದರು.

ನಮ್ಮ ಪಾಲಿನ ಜಿಎಸ್ ಟಿ ಮೊತ್ತವನ್ನು ನಮಗೆ ಕೊಡದೆ, ಕೇಂದ್ರ ಸರ್ಕಾರ ಮಲತಾಯಿ ಧೋರಣೆ ಅನುಸರಿಸುತ್ತಿದೆ. ಬಡಜನರಿಗೆ ಕೊಡುವ ಅಕ್ಕಿಯಲ್ಲೂ ಕೇಂದ್ರ ಸರ್ಕಾರ ರಾಜಕೀಯ ಮಾಡುತ್ತಿದೆ ಎಂದು ಆರೋಪಿಸಿದರು. ಕರ್ನಾಟಕದಲ್ಲಿ ಪಂಚ ಗ್ಯಾರಂಟಿಗಳನ್ನು ಜಾರಿ ತಂದಂತೆ ಕೇಂದ್ರದಲ್ಲಿ ಅಧಿಕಾರಕ್ಕೆ ಬಂದರೆ 25 ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತರಲಾಗುವುದು ತರಲಾಗುವುದು ಎಂದು ಹೇಳಿದರು.

**ಸೋತ ಜಾಗದಲ್ಲೇ ಗೆಲ್ಲುವೆ:**

2013ರ ವಿಧಾನಸಭೆ, 2014ರ ಲೋಕಸಭೆ ಚುನಾವಣೆಗಳಲ್ಲಿ ನಾನು ಸೋಲು ಕಂಡೆ. ಆದರೆ, ಛಲ ಬಿಡದೆ ಪಕ್ಷ ಸಂಘಟಿಸಿ ಸೋತ ಬೆಳಗಾವಿ ಗ್ರಾಮೀಣ ಕ್ಷೇತ್ರದಲ್ಲೆ ಗೆದ್ದೆ, ಇದೀಗ ಮಗನ ಮೂಲಕ ಬೆಳಗಾವಿ ಲೋಕಸಭೆಯಲ್ಲಿ ಗೆಲ್ಲಬೇಕು. ಇದಕ್ಕೆ ನಿಮ್ಮೆಲ್ಲರ ಆಶೀರ್ವಾದ ಬೇಕು ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿದರು.

ನನ್ನ ಮತ್ತು ನನ್ನ ಕುಟುಂಬದ ಬಗ್ಗೆ ಕೆಲಮಂದಿ ಇಲ್ಲಸಲ್ಲದ ಆರೋಪ ಮಾಡುತ್ತಿದ್ದಾರೆ. ಇಂಥ ಅಪಮಾನಗಳನ್ನು ಸಹಿಸಿಕೊಳ್ಳುವ ಶಕ್ತಿಯನ್ನು ಆ ಭಗವಂತ ನೀಡಿದ್ದಾನೆ. ಟೀಕಾಕಾರಿಗೆ ಮುಂದಿನ ದಿನಗಳಲ್ಲಿ ಮತದಾರರು ಮತ್ತು ಭಗವಂತ ಉತ್ತರ ನೀಡಲಿದ್ದಾರೆ ಎಂದು ಸಚಿವರು ಹೇಳಿದರು.



**ಜಗದೀಶ್ ಶೆಟ್ಟರ್ ವಿರುದ್ಧ ಕಿಡಿಕಾರಿದ ಸಚಿವರು:**

ಎರಡು ತಿಂಗಳ ಹಿಂದಷ್ಟೇ ಬಿಜೆಪಿ ನಾಯಕರನ್ನು ಹೀನಾಯವಾಗಿ ಟೀಕಿಸುತ್ತಿದ್ದ ಜಗದೀಶ್ ಶೆಟ್ಟರ್ ಇಂದು ಯಾವ ನೈತಿಕತೆ ಇಟ್ಟುಕೊಂಡು ಜನರ ಎದುರು ಬರುತ್ತಿದ್ದಾರೆ ಎಂದು ಸಚಿವರು ಟೀಕಿಸಿದರು. ಬಿಜೆಪಿಯಿಂದ ಅನ್ಯಾಯವಾಗಿದೆ ಎಂದು ಒಂದು ವರ್ಷದ ಕೆಳಗೆ ಕಾಂಗ್ರೆಸ್ ಪಕ್ಷ ಸೇರಿದ್ದ ಶೆಟ್ಟರ್ ಅವರನ್ನು ವಿಧಾನಸಭಾ ಚುನಾವಣೆಯಲ್ಲಿ ಹೀನಾಯವಾಗಿ ಸೋಲಿಸಿದರೂ ಅವರ ಹಿರಿತನಕ್ಕೆ ಬೆಲೆಕೊಟ್ಟು ಅವರನ್ನು ವಿಧಾನ ಪರಿಷತ್ ಗೆ ಕಳುಹಿಸಲಾಯಿತು. ಆದರೆ ನಮಗೆ ನಂಬಿಕೆ ದ್ರೋಹ ಎಸಗಿದ ಶೆಟ್ಟರ್, ಮತ್ತೆ ಬಿಜೆಪಿ ಸೇರಿದರು. ಮುಖ್ಯಮಂತ್ರಿ, ಬೆಳಗಾವಿ ಉಸ್ತುವಾರಿ ಸಚಿವರಾಗಿದ್ದ ಶೆಟ್ಟರ್, ಜಿಲ್ಲೆಯ ಅಭಿವೃದ್ಧಿಗೆ ನಿರ್ಲಕ್ಷ್ಯ ವಹಿಸಿ, ಇದೀಗ ಬೆಳಗಾವಿ ನನ್ನ ಕರ್ಮಭೂಮಿ ಎಂದು ನಾಟಕ ಆಡುತ್ತಿದ್ದಾರೆ ಎಂದು ಸಚಿವರು ಕಿಡಿ ಕಾರಿದರು.

**ಕಾಂಗ್ರೆಸ್ ನಿಂದ ಅಭಿವೃದ್ಧಿ ಸಾಧ್ಯ: ಮೃಣಾಲ್ ಹೆಬ್ಬಾಳ್ಕರ್:**

ಅಂಕಲಗಿಯಲ್ಲಿ ಮಾತನಾಡಿದ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳ್ಕರ್, ಕಾಂಗ್ರೆಸ್ ಪಕ್ಷದಿಂದ ಮಾತ್ರ ಅಭಿವೃದ್ಧಿ ಸಾಧ್ಯ. ಈ ಬಾರಿ ಬೆಳಗಾವಿ ಕ್ಷೇತ್ರದ ಜನತೆ ಬದಲಾವಣೆ ಬಯಸಿದ್ದಾರೆ. ಬೆಳಗಾವಿ ಹಾಗೂ ಚಿಕ್ಕೋಡಿ ಕ್ಷೇತ್ರಗಳಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳಿಗೆ ಗೆಲುವು ಖಚಿತ ಎಂದು ಹೇಳಿದರು. ಕ್ಷೇತ್ರದ ಮನೆ ಮಗನಾಗಿ ನಾನು ದುಡಿಯುವೆ. ನಿಮ್ಮ ಮನೆ ಮಗನಿಗೆ ಒಂದು ಅವಕಾಶ ಮಾಡಿಕೊಡಿ ಎಂದು ಮನವಿ ಮಾಡಿದರು. ಪ್ರಚಾರಕ್ಕೆ ಹೋದಲೆಲ್ಲಾ ಕಾಂಗ್ರೆಸ್ ಪಕ್ಷಕ್ಕೆ ಅಭೂತಪೂರ್ವ ಬೆಂಬಲ ಸಿಗುತ್ತಿದೆ. ಜನರ ಪ್ರತಿಕ್ರಿಯೆ ನೋಡಿದರೆ ದಿನದಿಂದ ದಿನಕ್ಕೆ ನನಗೆ ಹುಮ್ಮಸ್ಸು ಜಾಸ್ತಿ ಆಗುತ್ತಿದೆ ಎಂದು ಹೇಳಿದರು. ಹೊರಗಿನ ಅಭ್ಯರ್ಥಿ ಬದಲಿಗೆ ನಿಮ್ಮ ಮನೆ ಮಗನಾದ ನನ್ನನ್ನು ಬೆಂಬಲಿಸಿ, ಕ್ಷೇತ್ರದ ಅಭಿವೃದ್ಧಿಗಾಗಿ ಹಗಲಿರುಳು ದುಡಿಯುವೆ ಎಂದು ಹೇಳಿದರು.

**ಸರ್ವಾಧಿಕಾರ ವ್ಯವಸ್ಥೆ ವಿರುದ್ಧ ಹೋರಾಟ:**

ಬ್ರಿಟಿಷರದ ವಿರುದ್ಧ ಹೋರಾಡಿದ ಕಾಂಗ್ರೆಸ್ ಪಕ್ಷದ ಅಂದು ಭಾರತವನ್ನು ಗುಲಾಮ ಗಿರಿಯಿಂದ ಪಾರು ಮಾಡಿತು. ಇದೀಗ ಕೇಂದ್ರದಲ್ಲಿ ಸರ್ವಾಧಿಕಾರಿ ಧೋರಣೆ ಮುಂದುವರಿದಿದೆ. ಇದರ ವಿರುದ್ಧ ಹೋರಾಡುವ ಸಮಯ ಮತ್ತೆ ಬಂದಿದೆ ಎಂದು ಅಂಕಲಗಿ ಗ್ರಾಮದ ಮುಖಂಡ ಬಸನಗೌಡ ಹೊಳಾಚಿ ಹೇಳಿದರು.

ಗೋಕಾಕ್ ನಲ್ಲೂ ಸರ್ವಾಧಿಕಾರಿ ಧೋರಣೆ ಇದ್ದು, ಈ ಬಾರಿ ಅವರಿಗೆ ಮತದಾರರು ತಕ್ಕ ಪಾಠ ಕಲಿಸಬೇಕು ಎಂದು ಕರೆ ನೀಡಿದರು.

ನಮ್ಮ ಅಭ್ಯರ್ಥಿ ಮೃಣಾಲ್ ಹೆಬ್ಬಾಳ್ಕರ್ ಅವರು ಯೋಗ್ಯರಾಗಿದ್ದು, ತಾಯಿ ಲಕ್ಷ್ಮೀ ಹೆಬ್ಬಾಳ್ಕರ್ ಅವರ ಮಾರ್ಗದರ್ಶನದಲ್ಲಿ ಉತ್ತಮವಾಗಿ ಕಾರ್ಯನಿರ್ವಹಿಸಲಿದ್ದಾರೆ. ಇಂತ ಯುವ ಅಭ್ಯರ್ಥಿಯನ್ನು ಗೆಲ್ಲಿಸಬೇಕು ಎಂದು ಮನವಿ ಮಾಡಿದರು.

**ಮಠ, ಮಂದಿರಗಳಿಗೆ ಭೇಟಿ:**

ಅಂಕಲಗಿಯಲ್ಲಿರುವ ಪಾವನ ಕ್ಷೇತ್ರ ಶ್ರೀ ಅಡವಿ ಸಿದ್ದೇಶ್ವರ ಸಂಸ್ಥಾನ ಮಠಕ್ಕೆ ಭೇಟಿ ನೀಡಿದ ಸಚಿವರು, ಶ್ರೀ ಅಮರ ಸಿದ್ದೇಶ್ವರ ಮಹಾ ಸ್ವಾಮೀಜಿಯವರ ಆಶೀರ್ವಾದ ಪಡೆದರು. ಗ್ರಾಮದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಮೂಲಕ ವೇದಿಕೆಗೆ ಕರೆ ತರಲಾಯಿತು.

ಇದೇ ವೇಳೆ ಹೂಮಳೆಯ ಮೂಲಕ ಗ್ರಾಮಸ್ಥರು ಅದ್ದೂರಿ ಸ್ವಾಗತ ನೀಡಿದರು. ಬಳಿಕ ಸಾವಳಗಿ ಗ್ರಾಮದಲ್ಲಿರುವ ಶಿವಲಿಂಗೇಶ್ವರ ದೇವಾಲಯಕ್ಕೆ ಭೇಟಿ ನೀಡಿ, ಜಗದ್ಗುರು ಶ್ರೀ ಶಿವಲಿಂಗೇಶ್ವರ ಕುಮಾರೇಂದ್ರ ಮಹಾಸ್ವಾಮಿಗಳ ಆಶೀರ್ವಾದ ಪಡೆದರು.

ಇದೇ ವೇಳೆ ಮುಖಂಡರಾದ ಡಾ.ಮಹಾಂತೇಶ್ ಕಡಾಡಿ, ಅಶೋಕ್ ಪೂಜಾರಿ ಸೇರಿದಂತೆ ಹಲವಾರು ಮುಖಂಡರು ಸಚಿವರಿಗೆ ಪ್ರಚಾರದ ವೇಳೆ ಸಾಥ್ ನೀಡಿದರು.

# ಲೋಕಾಯುಕ್ತ ಜನ ಸಂಪರ್ಕ ಸಭೆ ಏ.16 ರಂದು ಮುಂದೂಡಿಕೆ

ಬೆಳಗಾವಿ: ಬೆಳಗಾವಿ ಜಿಲ್ಲೆಯ ಯರಗಟ್ಟಿ ತಾಲೂಕ ಯರಗಟ್ಟಿ ಪ್ರವಾಸಿ ಮಂದಿರದಲ್ಲಿ ಏ 10 ರಂದು ಬೆಳಿಗ್ಗೆ 11 ಗಂಟೆಯಿಂದ 2 ಗಂಟೆಯವರೆಗೆ ಯರಗಟ್ಟಿ ತಾಲೂಕ ಯರಗಟ್ಟಿ ಪ್ರವಾಸಿ ಮಂದಿರದಲ್ಲಿ ನಿಗದಿಪಡಿಸಿದ್ದ ಜನ ಸಂಪರ್ಕ ಸಭೆಯನ್ನು ಮುಂದೂಡಲಾದೆ.

ಸದರಿ ಲೋಕಾಯುಕ್ತ ಜನ ಸಂಪರ್ಕ ಸಭೆಯನ್ನು ಏ.16 ರಂದು ಬೆಳಿಗ್ಗೆ 11 ಗಂಟೆಯಿಂದ 2 ಗಂಟೆಯವರೆಗೆ ಬೆಳಗಾವಿ ಲೋಕಾಯುಕ್ತ ಅಧಿಕಾರಿಗಳು ಯರಗಟ್ಟಿ ತಾಲೂಕಿನ ಎಲ್ಲ ತಾಲೂಕಾ ಮಟ್ಟದ ಅಧಿಕಾರಿಗಳ ಸಮಕ್ಷಮದಲ್ಲಿ ಹಮ್ಮಿಕೊಳ್ಳಲಾಗಿರುತ್ತದೆ.

ಸಾರ್ವಜನಿಕರು ಸರ್ಕಾರಿ ಕಛೇರಿಯಲ್ಲಿಯ ಅಧಿಕಾರಿಗಳು ಸಾರ್ವಜನಿಕರ ಅಧಿಕೃತ ಕೆಲಸಗಳನ್ನು ಮಾಡಿಕೊಡುವಲ್ಲಿ ವಿಳಂಬ ನೀತಿ ಅನುಸರಿಸುತ್ತಿದ್ದಲ್ಲಿ, ಅಂತಹ ಅಧಿಕಾರಿಗಳ ವಿರುದ್ಧ ದೂರು ಸಲ್ಲಿಸಿದಲ್ಲಿ, ಸ್ಥಳದಲ್ಲಿಯೇ ಅಧಿಕಾರಿಗಳಿಂದ ಪರಿಹರಿಸಿಕೊಳ್ಳಬಹುದು. ಅರ್ಜಿ ಸಲ್ಲಿಸಲು ಇಚ್ಛಿಸುವ ಸಾರ್ವಜನಿಕರು ನಿಗದಿತ ನಮೂನೆಯ ಅರ್ಜಿಯೊಂದಿಗೆ ಹಾಜರಿರಲು ತಿಳಿಸಲಾಗಿದೆ.

ಸರ್ಕಾರಿ ಅಧಿಕಾರಿಗಳು ಕೆಲಸ ಮಾಡಿಕೊಡುವಲ್ಲಿ ಹಣಕ್ಕೆ ಬೇಡಿಕೆ ಇಟ್ಟಲ್ಲಿ/ಒತ್ತಾಯಿಸಿದಲ್ಲಿ ಅಥವಾ ಸರ್ಕಾರಿ ಅಧಿಕಾರಿಯ ಅಕ್ರಮ ಆಸ್ತಿ ಸಂಪಾದನೆ ಬಗ್ಗೆ ಮಾಹಿತಿ ಇದ್ದಲ್ಲಿ, ಲೋಕಾಯುಕ್ತ ಅಧಿಕಾರಿಗಳೊಂದಿಗೆ ನೇರವಾಗಿ/ಗುಪ್ತವಾಗಿ ಮಾಹಿತಿ ನೀಡಿ, ಸದರಿ ಸಭೆಯ ಸದುಪಯೋಗ ಪಡಿಸಿಕೊಳ್ಳಲು ಕೋರಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ 0831–2950756 ಅಥವಾ 0831–2421922 ಸಂಖ್ಯೆಗೆ ಸಂಪರ್ಕಿಸಬಹುದಾಗಿದೆ ಎಂದು ಕರ್ನಾಟಕ ಲೋಕಾಯುಕ್ತ ಪೊಲೀಸ್ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಏ.14 ರಂದು ಡಾ. ಬಾಬಾಸಾಹೇಬ ಅಂಬೇಡ್ಕರ ಜಯಂತಿ

ಬೆಳಗಾವಿ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಮಹಾನಗರ ಪಾಲಿಕೆ, ಬೆಳಗಾವಿ ಸಮಾಜ ಕಲ್ಯಾಣ ಇಲಾಖೆ, ಬೆಳಗಾವಿ ಇವರ ಸಂಯುಕ್ತ ಆಶ್ರಯದಲ್ಲಿ ಏ.14 ರಂದು ಬೆಳಿಗ್ಗೆ 10 ಗಂಟೆಗೆ ಭಾರತರತ್ನ, ಸಂವಿಧಾನ ಶಿಲ್ಪಿ ಡಾ.ಬಾಬಾಸಾಹೇಬ ಅಂಬೇಡ್ಕರ ಉದ್ಯಾನವನದಲ್ಲಿ ಭಾರತರತ್ನ, ಸಂವಿಧಾನ ಶಿಲ್ಪಿ ಡಾ.ಬಾಬಾಸಾಹೇಬ ಅಂಬೇಡ್ಕರ ರವರ ಭಾವಚಿತ್ರ ಪೂಜೆ ಹಾಗೂ ಬೆಳಿಗ್ಗೆ 12 ಗಂಟೆಗೆ ಧರ್ಮವೀರ ಸಂಭಾಜಿ ವೃತ್ತದಿಂದ ಭಾವಚಿತ್ರ ಭವ್ಯ ಮೆರವಣಿಗೆ ಹಾಗೂ ಮುಖ್ಯ ಸಮಾರಂಭ ಸಂಜೆ 4 ಗಂಟೆಗೆ ನಡೆಯಲಿದೆ.

ಬೆಳಗಾವಿ ವಿಭಾಗ ಪ್ರಾದೇಶಿಕ ಆಯುಕ್ತರಾದ ಎಸ್.ಬಿ.ಶೆಟ್ಟೆಣ್ಣವರ ಅವರು ಉದ್ಘಾಟಕರಾಗಿ ಆಗಮಿಸಲಿದಾರೆ, ಬೆಳಗಾವಿ ಉತ್ತರ ವಲಯ ಆರಕ್ಷಕ ಮಹಾನಿರೀಕ್ಷಕರು ವಿಕಾಶ್ ಕುಮಾರ ವಿಕಾಶ್, ಬೆಳಗಾವಿ ಜಿಲ್ಲಾಧಿಕಾರಿಯಾದ ನಿತೇಶ್ ಕೆ. ಪಾಟೀಲ್, ಬೆಳಗಾವಿ ನಗರ ಪೊಲೀಸ್ ಆಯುಕ್ತರಾದ ಯಡಾ ಮಾರ್ಟಿನ್ ಮಾರ್ಬನ್ಯಾಂಗ್, ಬೆಳಗಾವಿ ಜಿ.ಪಂ ಸಿಇಓ ರಾಹುಲ ಶಿಂಧೆ, ಬೆಳಗಾವಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಡಾ. ಭೀಮಾಶಂಕರ ಎಸ್ ಗುಳೇದ, ಬೆಳಗಾವಿ ಜಿಲ್ಲೆ ಕಡೋಲಿ ಗ್ರಾಮದ ಸರಕಾರಿ ಪ್ರೌಢ ಶಾಲೆ ಸಹ ಶಿಕ್ಷಕರು ಡಾ.ಪ್ರವೀಣಾ ಕೆ.ಎಸ್ ಅವರು ಉಪನ್ಯಾಸಕ ನಿಡಲಿದಾರೆ, ಬೆಳಗಾವಿ ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕರು ನವೀನ್ ಶಿಂತ್ರೆ, ಬೆಳಗಾವಿ ಮಹಾನಗರ ಪಾಲಿಕೆ ಆಯುಕ್ತರು ಪಿ.ಎನ್. ಲೋಕೇಶ ಅವರು ಕಾರ್ಯಕ್ರಮದಲ್ಲಿ ಉಪಸ್ಥಿತರಿರಲಿದ್ದಾರೆ ಎಂದು ಬೆಳಗಾವಿ ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಎಸ್.ಎಸ್.ಎಲ್.ಸಿ ಉತ್ತರ ಪತ್ರಿಕೆಗಳ ಮೌಲ್ಯಮಾಪನ ಕೇಂದ್ರಗಳ ಸುತ್ತ–ಮುತ್ತ ನಿಷೇಧಾಜ್ಞೆ

ಬೆಳಗಾವಿ: ಎಸ್.ಎಸ್.ಎಲ್.ಸಿ ಉತ್ತರ ಪತ್ರಿಕೆಗಳ ಮೌಲ್ಯಮಾಪನ ಕೇಂದ್ರಗಳ ಸುತ್ತಲೂ 100 ಮೀಟರ್ ವ್ಯಾಪ್ತಿಯಲ್ಲಿ ಕಾನೂನು ಸುವ್ಯವಸ್ಥೆಯನ್ನು ಕಾಪಾಡಿಕೊಳ್ಳುವ ಸಲುವಾಗಿ ನಗರದ ಹೆಚ್ಚುವರಿ ಜಿಲ್ಲಾ ದಂಡಾಧಿಕಾರಿ ಮತ್ತು ಪೊಲೀಸ್ ಆಯುಕರಾದ ಯಡಾ ಮಾರ್ಟಿನ್ ಮಾರ್ಬನ್ಯಾಂಗ ಅವರು ಆದೇಶ ಹೊರಡಿಸಿರುತ್ತಾರೆ.

ನಗರದ 8 ಮೌಲ್ಯಮಾಪನ ಕೇಂದ್ರಗಳ ಸುತ್ತಲು 100 ಮೀಟರ್ ವ್ಯಾಪ್ತಿಯಲ್ಲಿ ಸಾರ್ವಜನಿಕರು ಗುಂಪು–ಗುಂಪಾಗಿ ಸೇರುವದನ್ನು ನಿಷೇಧಿಸಿದೆ.

ಏ. 8 ರಿಂದ 25 ವರೆಗೆ ಬೆಳಗಾವಿ ನಗರದ ಮೌಲ್ಯ ಮಾಪನ ಕೇಂದ್ರಗಳ ಸುತ್ತಲೂ ಜಾರಿಗೆ ನಿಷೇಧಾಜ್ಞೆ ಜಾರಿಯಲ್ಲಿದ್ದು, ಸದರಿ ಆಜ್ಞೆಯನ್ನು ಉಲ್ಲಂಘಿಸಿದವರ ವಿರುದ್ಧ ಕಲಂ 188 ಭಾರತೀಯ ದಂಡ ಸಂಹಿತೆ ಪ್ರಕಾರ ಕ್ರಮ ಜರುಗಿಸಲಾಗುವುದು ಎಂದು ಹೆಚ್ಚುವರಿ ಜಿಲ್ಲಾ ದಂಡಾಧಿಕಾರಿಕಾರಿಗಳು ಮತ್ತು ನಗರ ಪೊಲೀಸ್ ಆಯುಕ್ತರಾದ ಯಡಾ ಮಾರ್ಟಿನ್ ಮಾರ್ಬನ್ಯಾಂಗ್ ಅವರು ಆದೇಶದಲ್ಲಿ ತಿಳಿಸಿದ್ದಾರೆ.

# ಚುನಾವಣಾ ಜಾಹೀರಾತು–ಪೂರ್ವಾನುಮತಿ ಕಡ್ಡಾಯ: ಜಿಲ್ಲಾಧಿಕಾರಿ ನಿತೇಶ್ ಪಾಟೀಲ

ಬೆಳಗಾವಿ: ಬೆಳಗಾವಿ ಲೋಕಸಭಾ ಚುನಾವಣೆ–2024ಕ್ಕೆ ಸಂಬಂಧಿಸಿದಂತೆ ರಾಜಕೀಯ ಪಕ್ಷಗಳು ಹಾಗೂ ಅಭ್ಯರ್ಥಿಗಳು ವಿದ್ಯುನ್ಮಾನ ಮಾಧ್ಯಮ ಹಾಗೂ ಸಾಮಾಜಿಕ ಜಾಲತಾಣಗಳಲ್ಲಿ ಜಾಹೀರಾತು ಹಾಗೂ ಬಲ್ಕ್ ಎಸ್‌ಎಂಎಸ್‌ಗಳನ್ನು ಪ್ರಚುರಪಡಿಸುವ ಮುಂಚೆ ಜಿಲ್ಲಾಮಟ್ಟದ ಮಾಧ್ಯಮ ಪ್ರಮಾಣೀಕರಣ ಹಾಗೂ ಕಣ್ಗಾವಲು ಸಮಿತಿ(ಎಂಸಿಎಂಸಿ) ಯ ಪೂರ್ವಾನುಮತಿ ಪಡೆಯುವುದು ಕಡ್ಡಾಯವಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿಯೂ ಆಗಿರುವ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ತಿಳಿಸಿದ್ದಾರೆ.

ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಕಾರ್ಯನಿರ್ವಹಿಸುವ ಎಂಸಿಎಂಸಿ ಸಮಿತಿಯು ವಿದ್ಯುನ್ಮಾನ ಮಾಧ್ಯಮ ಹಾಗೂ ಸಾಮಾಜಿಕ ಜಾಲತಾಣಗಳಲ್ಲಿ ಪ್ರಕಟಗೊಳ್ಳುವ ಚುನಾವಣಾ ವಿಷಯ ಹಾಗೂ ಅವುಗಳ ವಿಷಯವಸ್ತು(ಕಂಟೆಂಟ್) ಪರಿಶೀಲಿಸಿ ಅನುಮತಿ ನೀಡಲಿದೆ.

ಸ್ಥಳೀಯ ಕೇಬಲ್ ನೆಟವರ್ಕ, ಟಿವಿ ಚಾನೆಲ್‌ಗಳು, ಖಾಸಗಿ ಎಫ್–ಎಂ ರೇಡಿಯೋ ಕೇಂದ್ರಗಳು, ಸಿನಿಮಾಮಂದಿರಗಳು, ಸಾಮಾಜಿಕ ಜಾಲತಾಣಗಳು ಹಾಗೂ ಮೊಬೈಲ್ ಸರ್ವೀಸ್ ಪ್ರೊವೈಡರ್‌ಗಳು ಯಾವುದೇ ರೀತಿಯ ಚುನಾವಣಾ ಜಾಹೀರಾತು ಅಥವಾ ಬಲ್ಕ್ ಎಸ್‌ಎಂಎಸ್ ಪ್ರಸಾರ ಮಾಡುವ ಮುಂಚೆ ಎಂಸಿಎಂಸಿ ನೀಡಿರುವ ಪೂರ್ವಾನುಮತಿ ಪ್ರಮಾಣಪತ್ರವನ್ನು ಜಾಹೀರಾತು ನೀಡುವ ರಾಜಕೀಯ ಪಕ್ಷ ಅಥವಾ ಅಭ್ಯರ್ಥಿಗಳ ಕಡೆಯಿಂದ ಪಡೆದುಕೊಳ್ಳಬೇಕು.

ಭಾರತ ಚುನಾವಣಾ ಆಯೋಗದ ನಿರ್ದೇಶನಗಳು ಮತ್ತು ಚಾಲ್ತಿಯಲ್ಲಿರುವ ವಿವಿಧ ನಿಯಮಾವಳಿಗಳನ್ನು ಪಾಲಿಸುವ ಮೂಲಕ ಮುಕ್ತ ಹಾಗೂ ನ್ಯಾಯಸಮ್ಮತ ಚುನಾವಣೆಗೆ ಎಲ್ಲ ಮಾಧ್ಯಮದವರು ಹಾಗೂ ರಾಜಕೀಯ ಪಕ್ಷದ ಪ್ರತಿನಿಧಿಗಳು ಸಹಕರಿಸಬೇಕು.

**ಮಾಧ್ಯಮಗಳ ಮೇಲೆ ನಿಗಾ:**

ಮಾದರಿ ನೀತಿ ಸಂಹಿತೆ ಜಾರಿಗೆ ಬಂದ ತಕ್ಷಣದಿಂದಲೇ ಮುದ್ರಣ ಹಾಗೂ ವಿದ್ಯುನ್ಮಾನ ಮಾಧ್ಯಮಗಳಲ್ಲಿ



ಪ್ರಕಟವಾಗುವ ಚುನಾವಣಾ ಜಾಹೀರಾತು ಮತ್ತು ಸಂದೇಹಾಸ್ಪದ ಪೇಡ್‌ನ್ಯೂಸ್‌ಗಳ ಮೇಲೆ ನಿಗಾ ವಹಿಸಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ತಿಳಿಸಿದ್ದಾರೆ.

ಸಮಿತಿಯು ಮುದ್ರಣ, ವಿದ್ಯುನ್ಮಾನ ಮಾಧ್ಯಮಗಳಾದ ಕೇಬಲ್ ಚಾನೆಲ್/ಟಿವಿ ಚಾನೆಲ್‌ಗಳು, ರೇಡಿಯೋ ಹಾಗೂ ಸಾಮಾಜಿಕ ಜಾಲತಾಣಗಳ ಮೇಲೆ ನಿಗಾ ಇಡಲಿದ್ದು, ಅನುಮತಿ ಪಡೆಯದೇ ಚುನಾವಣಾ ಜಾಹೀರಾತು ನೀಡಿರುವುದು ಕಂಡುಬಂದಲ್ಲಿ ಸಂಬಂಧಪಟ್ಟವರ ಮೇಲೆ ಕಾನೂನು ಕ್ರಮ ತೆಗೆದುಕೊಳ್ಳಲಿದೆ.

ಯಾವುದೇ ಪಕ್ಷ ಅಥವಾ ಅಭ್ಯರ್ಥಿಗಳ ಪರವಾಗಿ ಜಾಹೀರಾತುಗಳನ್ನು ಪ್ರಕಟಿಸಿದ ಸಂದರ್ಭದಲ್ಲಿ ಆಯಾ ಮಾಧ್ಯಮಗಳಿಗೆ ನಿಗದಿಪಡಿಸಲಾದ ಜಾಹೀರಾತು ದರ ಅಥವಾ ಆಯಾ ಮಾಧ್ಯಮಗಳ ವಾಸ್ತವಿಕ ವಾಣಿಜ್ಯ ಜಾಹೀರಾತು ದರ ಪರಿಗಣಿಸಿ ಅದರ ಮೊತ್ತವನ್ನು ಪಕ್ಷ ಅಥವಾ ಅಭ್ಯರ್ಥಿಯ ಚುನಾವಣಾ ವೆಚ್ಚಕ್ಕೆ ಸೇರಿಸಲು ಚುನಾವಣಾ ವೆಚ್ಚ ವೀಕ್ಷಕರಿಗೆ ಸಮಿತಿಯು ಮಾಹಿತಿ ನೀಡಲಿದೆ.

ಅದೇ ರೀತಿಯಲ್ಲಿ ಯಾವುದೇ ಮಾಧ್ಯಮದಲ್ಲಿ ಪ್ರಸಾರವಾದ ಚುನಾವಣಾ ಜಾಹೀರಾತುಗಳಿಗೆ ಪೂರ್ವಾನುಮತಿ ಪಡೆಯಲಾಗಿದೆಯೇ ಎಂಬುದನ್ನು ಪರಿಶೀಲಿಸಲಾಗವುದು. ಅಭ್ಯರ್ಥಿಯ ಅಥವಾ ಪಕ್ಷದ ಒಪ್ಪಿಗೆಯಿಂದ ನೀಡಲಾಗಿರುವ ಜಾಹೀರಾತುಗಳ ವೆಚ್ಚವನ್ನು ಸಂಬಂಧಪಟ್ಟ ಪಕ್ಷ ಅಥವಾ ಅಭ್ಯರ್ಥಿಯ ವೆಚ್ಚಕ್ಕೆ ಸೇರಿಸಲಾಗುತ್ತದೆ.

**ಮೀಡಿಯಾ ಮಾನಿಟರಿಂಗ್ ಸೆಲ್:**

ಚುನಾವಣಾ ಜಾಹೀರಾತುಗಳ ಪರಿಶೀಲನೆ ಮತ್ತು ಪೂರ್ವಾನುಮತಿ (ಪ್ರಿಸರ್ಟಿಫಿಕೇಷನ್)ಗಾಗಿ "ವಾರ್ತಾಭವನ" ಉಪ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ನ್ಯಾಯಾಲಯ ಆವರಣ" (ದೂರವಾಣಿ ಸಂಖ್ಯೆ–9480841233) ಈ ಕಚೇರಿಯಲ್ಲಿ ಮೀಡಿಯಾ ಮಾನಿಟರಿಂಗ್ ಕೇಂದ್ರ ಸ್ಥಾಪಿಸಲಾಗಿರುತ್ತದೆ.

ಜಾಹೀರಾತುಗಳನ್ನು ಪ್ರಕಟ ಅಥವಾ ಪ್ರಸಾರ ಮಾಡಲು ಪೂರ್ವಾನುಮತಿ ಪಡೆಯಲು ಈ ಕೇಂದ್ರದಲ್ಲಿ ಅರ್ಜಿ ನಮೂನೆಗಳು ಲಭ್ಯವಾಗಿರುತ್ತವೆ. ಅಭ್ಯರ್ಥಿಗಳು ಅಥವಾ ರಾಜಕೀಯ ಪಕ್ಷಗಳು ಭರ್ತಿ ಮಾಡಿದ ಅರ್ಜಿ ಜತೆಗೆ ಜಾಹೀರಾತಿನ ಎರಡು ಸಿಡಿ ಹಾಗೂ ಹಸ್ತಪ್ರತಿ(ಸ್ಕ್ರಿಪ್ಟ್) ಸಲ್ಲಿಸಬೇಕು.

ಜಿಲ್ಲಾ ಮಾಧ್ಯಮ ಪ್ರಮಾಣೀಕರಣ ಮತ್ತು ಕಣ್ಗಾವಲು(ಎಂಸಿಎಂಸಿ) ಸಮಿತಿಯು ಅರ್ಜಿಗಳನ್ನು ಪರಿಶೀಲಿಸಿ, ಪೂರ್ವಾನುಮತಿ ನೀಡಲಿದೆ. ಆದ್ದರಿಂದ ಚುನಾವಣೆಗೆ ಸಂಬಂಧಿಸಿದಂತೆ ಯಾವುದೇ ಜಾಹೀರಾತುಗಳನ್ನು ಪ್ರಕಟ ಅಥವಾ ಪ್ರಸಾರ ಮಾಡಲು ಕಡ್ಡಾಯವಾಗಿ ಪೂರ್ವಾನುಮತಿ ಪಡೆಯಬೇಕು ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮತದಾನ ಜಾಗೃತಿಗೆ ರಂಗೋಲಿ, ಚಿತ್ರಕಲೆ ಸ್ಪರ್ಧೆ



ಬೆಳಗಾವಿ: ಬೆಳಗಾವಿ ಇಲ್ಲಿನ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಸೋಮವಾರ ಜಿಲ್ಲಾ ಸ್ವೀಪ್ ಸಮಿತಿ ನೇತೃತ್ವದಲ್ಲಿ ಮತದಾನ ಜಾಗೃತಿ ಮೂಡಿಸುವ ಉದ್ದೇಶದಿಂದ ರಂಗೋಲಿ ಹಾಗೂ ಚಿತ್ರಕಲಾ ಸ್ಪರ್ಧೆಗಳನ್ನು ಹಮ್ಮಿಕೊಳ್ಳಲಾಯಿತು.

ಹೈಸ್ಕೂಲ್ ಹಾಗೂ ಪಿಯುಸಿ ವಿದ್ಯಾರ್ಥಿಗಳಿಗೆ ರಂಗೋಲಿ ಹಾಗೂ ಚಿತ್ರಕಲೆ ಸ್ಪರ್ಧೆಯನ್ನು ಏರ್ಪಡಿಸಲಾಯಿತು. ಹೈಸ್ಕೂಲ್ ವಿಭಾಗದಲ್ಲಿ 35 ವಿದ್ಯಾರ್ಥಿಗಳು ಭಾಗವಹಿಸಿದರು. ಪಿಯುಸಿ ವಿಭಾಗದಲ್ಲಿ 14 ವಿದ್ಯಾರ್ಥಿಗಳು ಪಾಲ್ಗೊಂಡರು.

ಕಿಚಿತ್ರಕಲೆ ಹಾಗೂ ರಂಗೋಲಿ ಸ್ಪರ್ಧೆಯ ಮೂಲಕ ಮತದಾನದ ಕುರಿತು ಜಾಗೃತಿ ಮೂಡಿಸಲಾಯಿತು.

ಸ್ಪರ್ಧೆಯಲ್ಲಿ ಭಾಗವಹಿಸಿದ ವಿದ್ಯಾರ್ಥಿಗಳಲ್ಲಿ ಅತ್ಯುತ್ಯಮವಾಗಿ ರಂಗೋಲಿ ಹಾಗೂ ಚಿತ್ರಕಲೆ ಬಿಡಿಸಿದ ವಿದ್ಯಾರ್ಥಿಗಳಿ ಹೈಸ್ಕೂಲ್ ಹಾಗೂ ಪಿಯುಸಿ ವಿಭಾಗದಲ್ಲಿ ಪ್ರಥಮ ದ್ವಿತೀಯ ಹಾಗೂ ತೃತೀಯ ಬಹುಮಾನವನ್ನು ಸ್ವೀಪ್ ಕಮಿಟಿಯಿಂದ ನೀಡಲಾಗುವುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಜಿ.ಪಂ. ಮುಖ್ಯ ಯೋಜನಾಧಿಕಾರಿ ಗಂಗಾಧರ ದಿವಟರ್, ಲೆಕ್ಕಾಧಿಕಾರಿ ಗಂಗಾ ಹಿರೇಮಠ, ಡಿ.ಡಿ.ಪಿಯು ಮಹಾದೇವ ಎಮ್ ಕಾಂಬಳೆ, ಪಿ.ಯು ನೋಡಲ್ ಅಧಿಕಾರಿ ಎಮ್. ಎ. ಮುಲ್ಲಾ, ಬೆಳಗಾವಿ ವಿಭಾಗ ತಾಲ್ಲೂಕಿನ ನೋಡಲ್ ಅಧಿಕಾರಿಗಳು ಹಾಗೂ ಮಕ್ಕಳ ಪಾಲಕರು ಉಪಸ್ಥಿತರಿದ್ದರು.

# ತೆಲಸಂಗ ಚೆಕ್ ಪೋಸ್ಟ್ ಗೆ ಜಿಪಂ ಸಿಇಓ ರಾಹುಲ್ ಶಿಂಧೆ ಭೇಟಿ



ಬೆಳಗಾವಿ: ಅಥಣಿ ತಾಲೂಕಿನ ತೆಲಸಂಗ ಸಮೀಪದ ಚೆಕ್ ಪೋಸ್ಟ್ ಗೆ ಸೋಮವಾರ ಚಿಕ್ಕೋಡಿ ಲೋಕಸಭಾ ಕ್ಷೇತ್ರದ ಚುನಾವಣಾಧಿಕಾರಿ ಆಗಿರುವ ಜಿಪಂ ಸಿಇಓ ರಾಹುಲ್ ಶಿಂಧೆ ಅವರು ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಈ ಸಂದರ್ಭದಲ್ಲಿ ಜಿಪಂ ಸಿಇಓ ರಾಹುಲ್ ಶಿಂಧೆ ಅವರು, ಚೆಕ್ ಪೋಸ್ಟ್ ಗಳಲ್ಲಿ ಬರುವ ವಾಹನಗಳನ್ನು ಸರಿಯಾಗಿ ಪರಿಶೀಲನೆ ನಡೆಸಬೇಕು. ಯಾವುದೇ ನಿಯಮಗಳ ಉಲ್ಲಂಘನೆ ಆಗದಂತೆ ನಿಗಾವಹಿಸಬೇಕು ಎಂದು ಸೂಚಿಸಿದರು.

ಅಥಣಿ ಪಟ್ಟಣದ ತಹಶೀಲ್ದಾರರ ಕಚೇರಿಯಲ್ಲಿ ಸಹಾಯಕ ಚುನಾವಣಾಧಿಕಾರಿ, ಎಫ್.ಎಸ್.ಟಿ, ವ್ಹಿಎಸ್.ಟಿ, ವಿವಿಟಿ, ಸೆಕ್ಟರ್ ಅಧಿಕಾರಿಗಳಿಗೆ ಚುನಾವಣಾ ಪ್ರಕ್ರಿಯೆ ಬಗ್ಗೆ ಸಭೆ ನಡೆಸಿದರು. ಅಥಣಿ ಪಟ್ಟಣದ ಲಿಡಕರ್ ಕಾಲನಿಯಲ್ಲಿ ಮನೆ ಮನೆಗೆ ತೆರಳಿ ಕಡ್ಡಾಯವಾಗಿ ಮತದಾನ ಮಾಡಬೇಕು ಎಂದು ಜಾಗೃತಿ ಮೂಡಿಸಿದರು. ನಂತರ ಲಿಡರ್ ಕಾಲನಿಯ ಮತಗಟ್ಟೆಗೆ ತೆರಳಿ ಕನಿಷ್ಠ ಸೌಲಭ್ಯಗಳ ಕುರಿತು ಪರಿಶೀಲಿಸಿದರು. ಅದೇ ರೀತಿ ತಾಲೂಕಿನ ಹಲ್ಯಾಳ ಹಾಗೂ ನಾಗನೂರ ಪಿ.ಕೆ ಹತ್ತಿರ ಇರುವ ಬಹು ಗ್ರಾಮ ಕುಡಿಯುವ ನೀರಿನ ಜಾಕವೆಲ್ ಗೆ ಭೇಟಿ ನೀಡಿ ಪರಿಶೀಲಿಸಿದರು. ತಂದನಂತರ ಪಂ.ರಾ.ಇಂ ಉಪ ವಿಭಾಗದಿಂದ ಅನುಷ್ಠಾನಗೊಂಡ ಹಲ್ಯಾಳ ದಿಂದ ರಡೇರಹಟ್ಟಿ ರಸ್ತೆ ಕಾಮಗಾರಿಗೆ ಭೇಟಿ ನೀಡಿದರು. ತಾಪಂ ಇಓ ಶಿವಾನಂದ ಕಲ್ಲಾಪೂರೆ, ತಹಶೀಲ್ದಾರ ವಾಣಿ, ಪ.ರಾ.ಇಂ ಉಪ ವಿಭಾಗದ ಸಹಾಯಕ ಕಾರ್ಯಕಾರಿ ಅಭಿಯಂತರ ವೀರಣ್ಣ ವಾಲಿ, ಸಹಾಯಕ ಚುನಾವಣಾಧಿಕಾರಿ ಎಚ್. ಮಲ್ಲಿಕಾರ್ಜುನ, ಸಹಾಯಕ ನಿರ್ದೇಶ (ಗ್ರಾಉ) ಮೆಹಬೂಬ ಕೊತವಾಲ, ಸಹಾಯಕ ನಿರ್ದೇಶ (ಪಂ.ರಾಜ್) ಜಿ.ಎಸ್. ಮಠದ ಹಾಗೂ ಮತ್ತಿತರರು ಉಪಸ್ಥಿತರಿದ್ದರು.

# ಕೆಎಲ್‌ಇ ಶತಮಾನೋತ್ಸವ ಚಾರಿಟೆಬಲ್ ಆಸ್ಪತ್ರೆಯಲ್ಲಿ ವಿಶ್ವ ಆರೋಗ್ಯ ದಿನಾಚರಣೆ

ಬೆಳಗಾವಿ: ಆರೋಗ್ಯವೆಂಬುದು ಬೆಲೆ ಕಟ್ಟಲಾಗದ್ದು, ಆರೋಗ್ಯವಿಲ್ಲದಿದ್ದರೆ ಎಲ್ಲ ಇದ್ದ ಸುಖವೂ ಶೂನ್ಯ ಆದ್ದರಿಂದ ಆರೋಗ್ಯದ ಕಾಳಜಿ ಅಗತ್ಯವೆಂದು ಯು ಎಸ್ ಎಮ್ ಕೆ ಎಲ್ ಇ ಯ ನಿರ್ದೇಶಕರಾದ ಡಾ. ಹೆಚ್ ಬಿ ರಾಜಶೇಖರ ಅವರು ಮಾತನಾಡುತ್ತಿದ್ದರು. ಅವರು ಇಂದು ನಗರದ ಕೆ ಎಲ್ ಇ ಶತಮಾನೋತ್ಸವ ಚಾರಿಟೆಬಲ್ ಆಸ್ಪತ್ರೆಯಲ್ಲಿ ನಡೆದ ವಿಶ್ವ ಆರೋಗ್ಯ ದಿನಾಚರಣೆಯ ಉದ್ಘಾಟನಾರ್ಥವಾಗಿ ಮಾತನಾಡುತ್ತಿದ್ದರು. ನಮ್ಮ ಜೀವನದಲ್ಲಿ ಆರೋಗ್ಯವೆಂಬುದು ದೇವರು ಕೊಟ್ಟ ಅಮೂಲ್ಯ ಆಸ್ತಿಯಾಗಿದೆ. ಅದನ್ನು ಕಾಪಾಡಿಕೊಳ್ಳುವದು ನಮ್ಮ ಪ್ರಾಥಮಿಕ ಕರ್ತವ್ಯವಾಗಿದೆ. ಇದನ್ನು ಪಾಲಿಸಿದರೆ ಸಂತಸದ ಜೀವನ ನಮ್ಮದಾಗಬಹುದಾಗಿದೆ ಎಂದು ಮಾತನಾಡುತ್ತಿದ್ದರು.

ಈ ಸಂದರ್ಭದಲ್ಲಿ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳಾದ ಡಾ.ಮಹೇಶ ಕೋಣಿ ಅವರು ಮಾತನಾಡುತ್ತ




ಸಾರ್ವಜನಿಕ ಆರೋಗ್ಯ ಕಾಪಾಡುವಲ್ಲಿ ಸರ್ಕಾರ ಹಾಗೂ ಖಾಸಗೀ ಸಂಸ್ಥೆಗಳ ಅವಿರತ ಸೇವೆಯಿಂದ ಸಾಧ್ಯವಾಗಿದೆ. ಇಂದು ಆರೋಗ್ಯವೆಂಬುದನ್ನು ಸಾಧಿಸಲು ಆರೋಗ್ಯದ ಪರಿಕಲ್ಪಣೆಯನ್ನು ಸಾರ್ವಜನಿಕರಲ್ಲಿ ಮೂಡಿಸಿ, ಆರೋಗ್ಯವಾಗಿರಲು ಬೇಕಾದ ಆಯಾಮಗಳನ್ನು ಜನರಿಗೆ ಮನದಟ್ಟು ಮಾಡಿದಾಗ ಇದು ಸಾಧ್ಯ. ಈ ನಿಟ್ಟಿನಲ್ಲಿ ಕೆ ಎಲ್ ಇ ಶತಮಾನೋತ್ಸವ ಚಾರಿಟೆಬಲ್ ಆಸ್ಪತ್ರೆ ಹಾಗೂ ಕೆ ಎಲ್ ಇ ಸಂಸ್ಥೆಯವತಿಯಿಂದ ದೊರೆಯುವ ಸಹಕಾರಗಳು ಸಾರ್ವಕಾಲಿಕ ಸ್ಮರಣೀಯ ಎಂದು ಅಭಿಮತ ವ್ಯಕ್ತಪಡಿಸಿದರು.

ಈ ಸಂದರ್ಬದಲ್ಲಿ ಉಪಸ್ಥಿತರಿದ್ದ ಜಿಲ್ಲಾ ಕುಷ್ಟರೋಗ ನಿಯಂತ್ರಣಾಧಿಕಾರಿಗಳಾದ ಡಾ.ಗೀತಾ ಕಾಂಬ್ಳೆ ಅವರು ಮಾತನಾಡುತ್ತ ಮನುಷ್ಯ ಸರ್ವತೋಮುಖವಾಗಿ ಸಧೃಢನಾಗಿದ್ದರೆ ಮಾತ್ರ ಆರೋಗ್ಯದಿಂದಿರಲು ಸಾಧ್ಯವಾಗಿದೆ. ಅದರಲ್ಲಿಯೂ ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಆರೋಗ್ಯದ ಬಗ್ಗೆ ಎಲ್ಲ ವಯಸ್ಸಿನವರೂ ಕಾಳಜಿ ತೋರುವುದು ಅಗತ್ಯವಾಗಿದೆ ಎಮಧು ತಿಳಿವಳಿಕೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿ ಮಾತನಾಡುತ್ತಿದ್ದ ಕೆ ಎಲ್ ಇ ಶತಮಾನೋತ್ಸವ ಚಾರಿಟೆಬಲ್ ಆಸ್ಪತ್ರೆಯ ನಿರ್ದೇಶಕರಾದ ಡಾ. ಎಸ್ ಸಿ ಧಾರವಾಡ ಅವರು ಮಾತನಾಡುತ್ತ " ಈ ವರ್ಷದ ಘೋಷ ವಾಖ್ಯವಾದ ನಮ್ಮ ಆರೋಗ್ಯ – ನಮ್ಮ ಹಕ್ಕು ಎಂದು ವಿಶ್ವ ಆರೋಗ್ಯ ಸಂಸ್ಥೆ ಘೋಶಿಸಿದೆ. ಅದರಂತೆ ಪ್ರತಿಯೊಬ್ಬರೂ ಆರೋಗ್ಯವಾಗಿರುವದು ಅವರ ಹಕ್ಕಾಗಿದೆ. ತಮ್ಮ ಆರೋಗ್ಯಕ್ಕೆ ತಾವೆ ಹೊಣೆಯಾಗಿದ್ದು, ಆರೋಗ್ಯದಿಂದ ಜೀವಿಸಲು ಸರಳತೆ, ನಿಯಮಿತ ಊಟ ವ್ಯಾಯಾಮ ನಿದ್ದೆ ಹಾಗೂ ಚಟುವಟಿಕೆಯಿಂದ ಕೂಡಿದ ಜೀವನ ಇವೇ ಅಂಶಗಳಾಗಿದ್ದು ಅವುಗಳನ್ನು ಪಾಲಿಸಲು ಹೆಚ್ಚಿನ ಶ್ರಮದ ಅಗತ್ಯತೆಯೂ ಇಲ್ಲ. ಆದ್ದರಿಂದ ಸುಧೃಢ ಜೀವನಕ್ಕಾಗಿ ಸರಳತೆಯನ್ನು ಹೊಂದಬೇಕು. ನಮ್ಮ ಆರೋಗ್ಯ ನಮ ಹಕ್ಕು ಅದಕ್ಕೆ ನಾವೇ ಹೊಣೆ ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಕೆ ಎಲ್ ಇ ಶತಮಾನೋತ್ಸವ ಚಾರಿಟೆಬಲ್ ಆಸ್ಪತ್ರೆಯ ಜನರಲ್ ಮೆಡಿಸಿನ್ ವಿಬಾಗದ ಮುಖ್ಯಸ್ಥರಾದ ಡಾ. ಶ್ರೀನಿವಾಸ ಬಿ ಅವರು ನಮ್ಮ ಆರೋಗ್ಯ – ನಮ್ಮ ಹಕ್ಕು ಎಂಬ ವಿಷಯದಮೇಲೆ ಉಪನ್ಯಾಸ ಮಂಡಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ. ಸಂಜಯ ದೊಡಮನಿ, ಜಿಲ್ಲಾ ಕ್ಷಯರೋಗ ನಿಯಂತ್ರಣಾಧಿಕಾರಿ ಡಾ. ಚಾಂದನಿ ದೇವಡಿ, ಜಿಲ್ಲಾ ಮಲೇರಿಯಾ ನಿಯಂತ್ರಣ ಅಧಿಕಾರಿ ಡಾ. ವಿವೇಕ ಅವರು ಹಾಗೂ ಕೆ ಎಲ್ ಇ ಶತಮಾನೋತ್ಸವ ಚಾರಿಟೆಬಲ್ ಆಸ್ಪತ್ರೆಯ ಚಿಕ್ಕಮಕ್ಕಳ ವಿಬಾಗದ ಹೆಸರಾಂತ ವೈದ್ಯರಾದ ಡಾ. ಸಂತೋಷಕುಮಾರ ಕರಮಸಿ, ಡಾ. ಯೋಗೇಶ ರಾವಳ, ಎಲುಬು ಕೀಲು ವಿಭಾಗದ ಮುಖ್ಯಸ್ಥರಾ ಡಾ. ವಿಜಯಕುಮಾರ ಮುರಕಿಬಾವಿ, ಆಸ್ಪತ್ರೆಯ ನರ್ಸಿಂಗ ಅಧೀಕ್ಷಕಿ ಶ್ರೀಮತಿ ರೋಸಲಿನ ಲೋಂಡೆ, ಆರೋಗ್ಯ ಸಹಾಯಕಿ ತರಬೇತುದಾರ ಶ್ರೀಮತಿ ಪ್ರಭಾವತಿ ಕಾದ್ರೊಳ್ಳಿ ಹಾಗೂ 85 ಆಶಾ ಕಾರ್ಯಕರ್ತೆಯರು, ಆಸ್ಪತ್ರೆಯ ಆರೋಗ್ಯ ಸಹಾಯಕಿ ತರಬೇತಿಯ ವಿದ್ಯಾರ್ಥಿನಿಯರು ಮುಂತಾದವರು ಬಾಗವಹಿಸಿದ್ದರು. ಕಾರ್ಯಕ್ರಮವನ್ನು ಕೆ ಎಲ್ ಇ ಶತಮಾನೋತ್ಸವ ಚಾರಿಟೆಬಲ್ ಆಸ್ಪತ್ರೆಯ ಜನಸಂಪರ್ಕಾಧಿಕಾರಿ ಸಂತೋಷ ಇತಾಪೆ ನಿರೂಪಿಸಿ, ಸ್ವಾಗತಿಸಿ, ವಂದಿಸಿದರು.

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089